# ಸಂಭ್ರಮ ಪ್ರಭ

ಕನ್ನಡ ವಾರಪತ್ರಿಕೆ

BENGALURU > SATURDAY > JANUARY 29, 2022 > Price: 5/- > PAGE 8 > VOLUME 01 > ISSUE 22 > KARKAN2020/78891 > Ph: 7353544445 > E-mail: sambramaprabha@gmail.com > Web: www.sambramaprabha.com




## ಸಾಮರಸ್ಯ ಇರಲಿಲ್ಲ

2021ರ ನಂತರ ಅವರ ವಿವಾಹ ಜೀವನದಲ್ಲಿ ಮೊದಲು ಇದ್ದಷ್ಟು ಸಾಮರಸ್ಯ ಇರಲಿಲ್ಲ. 2021ರ ನಂತರ ಅವರ ದಾಂಪತ್ಯ ಜೀವನದಲ್ಲಿ ಸಮಸ್ಯೆಗಳು ಪ್ರಾರಂಭವಾದವು. ಮೊದಲು ಸಮಂತಾ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದರು. ಇದನ್ನು ನಾಗ ಚೈತನ್ಯ ಒಪ್ಪಿಕೊಂಡರು ಎಂದು ಸಮಂತಾ ಅವರ ಮಾವ ನಾಗಾರ್ಜುನ ಹೇಳಿದ್ದಾರೆ.

# ಕರೋನಾ ಬಿಬಿಎಂಪಿಯ ಹಳೇ ನಾಟಕ

## ♦ಜನರ ಜೀವ, ಜೀವನ ಜತೆ ಚೆಲ್ಲಾಟ ♦ಅಭಿವೃದ್ಧಿ ಮರೆಮಾಚಿ ಹಣ ಮಾಡಿಕೊಳ್ಳುವ ಹುನ್ನಾರ

■ ಸಂಭ್ರಮ ಪ್ರಭ

**ಬೆಂಗಳೂರು:** ಈಗ ಕರೋನಾ ಮೂರನೇ ಅಲೆ ಅಂತ್ಯದ ಹಂತಕ್ಕೆ ತಲುಪಿದೆ. ಮೊದಲ ಹಾಗೂ ಎರಡನೇ ಅಲೆಯಂತೆ ಮೂರನೇ ಅಲೆ ಹೇಳಿಕೊಳ್ಳುವಂತ ಕೆಟ್ಟ ಪರಿಣಾಮ ಬೀರಲಿಲ್ಲ. ಮೊದಲಿನಂತೆ ಸಾವು-ನೋವುಗಳು ಸಂಭವಿಸಲಿಲ್ಲ. ಹೀಗಾಗಿ ಮೂರನೇ ಅಲೆಯಿಂದ ಜನರು ಬೆಚ್ಚಿಬೀಳಲಿಲ್ಲ. ಆದರೆ ಇದೇ ಸರ್ಕಾರಕ್ಕೆ ದೊಡ್ಡ ಸಮಸ್ಯೆಯಾಗಿದೆ. ಮೊದಲ ಮತ್ತು ಎರಡನೇ ಅಲೆಯಲ್ಲಿ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳು ತುಂಬಿತುಳುಕಿದ್ದವು. ಇದರಿಂದಾಗಿ ಎಗ್ಗಿಲ್ಲದೆ ಭ್ರಷ್ಟಾಚಾರ ನಡೆದುಹೋಯಿತು. ಹೀಗಾಗಿ ಮೂರನೇ ಅಲೆಯಲ್ಲಿಯೂ ಹೀಗೆ ಮಾಡಬಹುದೆಂದು ಸರ್ಕಾರ ಮತ್ತು ಬಿಬಿಎಂಪಿಯ ಅಧಿಕಾರಿಗಳು ಯೋಜಿಸಿದ್ದರು. ಆದರೆ ಮೂರನೇ ಅಲೆಯಲ್ಲಿ ಆಗಿದ್ದೇ ಬೇರೆ. ಮೊದಲ ಹಾಗೂ ಎರಡನೇ ಅಲೆಯಂತ ಪರಿಸ್ಥಿತಿ ಈ ಬಾರಿ ನಿರ್ಮಾಣವಾಗಲಿಲ್ಲ. ಆದರೂ ಅಧಿಕಾರಿಗಳು ಸುಮ್ಮನೆ ಕೂರುವ ಜಾಯಮಾನದವರಲ್ಲ. ಹಾಗಾಗಿ ಇರುವ ಸ್ಥಿತಿಯನ್ನೇ ಕೆಟ್ಟಸ್ಥಿತಿಯನ್ನಾಗಿ ಮಾಡಿ ಒಂದಿಷ್ಟು ಬಾಚಿಕೊಳ್ಳುವುದಕ್ಕೆ ಮುಂದಾಗಿದ್ದಾರೆ. ಸದ್ಯ ಕರೋನಾ ಹೇಳಿಕೊಳ್ಳುವಷ್ಟು ಕೆಟ್ಟ ಪರಿಣಾಮವನ್ನು ಬೀರುತ್ತಿಲ್ಲ. ಆದರೆ ಒಂದಿಷ್ಟು ಮಂದಿಗೆ ಜ್ವರ, ಶೀತ, ಕೆಮ್ಮು ಇರುವುದು ಪತ್ತೆಯಾಗಿದೆ. ಇದು ಗಾಬರಿಗೊಳ್ಳುವಂತಹುದು ಅಲ್ಲ ಎಂಬುದು ಜನರಿಗೂ ತಿಳಿದುಹೋಗಿದೆ. ಹಾಗಾಗಿ ಮನೆಯ ಬಳಿಯೆ ಇರುವ ಸಣ್ಣಪುಟ್ಟ ಕ್ಲಿನಿಕ್‌ಗಳು ಹಾಗೂ ಮೆಡಿಕಲ್ ಶಾಪ್‌ಗಳ ಬಳಿಗೆ ಜನರು ಹೋಗುತ್ತಿದ್ದಾರೆ. ಅಪ್ಪಿತಪ್ಪಿಯೂ ದೊಡ್ಡ ದೊಡ್ಡ ಆಸ್ಪತ್ರೆಗಳಿಗೆ ದಾಖಲಾಗುತ್ತಿಲ್ಲ. ಹೀಗಾಗಿ ಕರೋನಾ ಪ್ರಕರಣಗಳ ಸಂಖ್ಯೆಯೂ ಏರುಗತಿಯಲ್ಲಿ ಇಲ್ಲ. ಇದು ಬಿಬಿಎಂಪಿಯ ಅಧಿಕಾರಿಗಳಿಗೆ ದೊಡ್ಡ ತಲೆನೋವಾಗಿದೆ. ಆದರೆ ಇದಕ್ಕೊಂದು ಕುಂಟು ನೆಪ ಮಾಡಿಕೊಂಡಿದ್ದಾರೆ ಅಧಿಕಾರಿಗಳು.

**ಖಾಸಗಿ ಆಸ್ಪತ್ರೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ದಾಖಲು:** ಕರೋನಾ ಲಕ್ಷಣಗಳು ಇರುವ ಕೆಲ ವ್ಯಕ್ತಿಗಳನ್ನು ಖುದ್ದು ಖಾಸಗಿ ಆಸ್ಪತ್ರೆಗೆ ದಾಖಲಾಗುವಂತೆ ಬಿಬಿಎಂಪಿಯ ಕೆಲ ಅಧಿಕಾರಿಗಳು ಸಲಹೆ ನೀಡುತ್ತಿದ್ದಾರೆ ಎಂಬ ಆರೋಪಗಳು ಕೇಳಿಬರುತ್ತಿವೆ. ಮೊದಲ ಹಾಗೂ ಎರಡನೇ ಅಲೆಯಲ್ಲಿ ಖಾಸಗಿ ಆಸ್ಪತ್ರೆಳಿಗೆ ರೋಗಿಗಳನ್ನು ದಾಖಲು ಮಾಡಿ ಕಮೀಷನ್ ಪಡೆಯಲಾಗಿತ್ತು ಎನ್ನುವ ಆರೋಪಗಳು ಇದ್ದವು. ಈ ಬಾರಿ ಇದು ನಡೆಯದಿದ್ದರೂ ಇರುವುದರಲ್ಲಿಯೇ ಒಂದಿಷ್ಟು ಮೇಯಲು ಅಧಿಕಾರಿಗಳು ಮುಂದಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಒಮಿಕ್ರಾನ್ ಬಂದಿದೆ ಎಂದು ಜನರನ್ನು ಹೆದರಿಸಲು ಮುಂದಾಗಿದ್ದಾರೆ. ಹೀಗಾಗಿ ಖಾಸಗಿ ಆಸ್ಪತ್ರೆಗಳಿಗೆ ದಾಖಲಾಗುವಂತೆ ಒತ್ತಾಯ ಸಹ ಮಾಡಲಾಗುತ್ತಿದೆ ಎಂಬ ಆರೋಪಗಳು ಇವೆ. ಇದರ ಜತೆಗೆ ಇನ್ನೊಂದು ವಿಷಯವನ್ನು ನಾವುಗಳು ಗಮನಿಸಬೇಕಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಬೆಡ್‌ಗಳು ಖಾಲಿ ಇವೆ. ಅಂದರೆ ಜನರನ್ನು ಸರ್ಕಾರಿ ಆಸ್ಪತ್ರೆಗಳಿಗೆ ದಾಖಲಿಸಲು ಸರ್ಕಾರಕ್ಕೇ ಇಷ್ಟವಿಲ್ಲ ಎಂಬುದು ದಿಟ.

**ಸುಖಾಸುಮ್ಮನೆ ಕರೋನಾ ಬಂದಿದೆ ಎನ್ನಬಹುದೆ?:** ಮುಖ್ಯಮಂತ್ರಿ ಬಸವರಾಜು ಬೊಮ್ಮಾಯಿ ಸೇರಿದಂತೆ ಕೆಲ ರಾಜಕಾರಣಿಗಳು ಹಾಗೂ ಸರ್ಕಾರಿ ಕೆಲ ಅಧಿಕಾರಿಗಳು ತಮಗೆ ಕರೋನಾ ಬಂದಿದೆ ಎಂದು ಹೇಳಿಕೊಂಡು ಐಸೋಲೇಷನ್ನಲ್ಲಿ ಇದ್ದಾರೆ. ಇದು ಗಂಭೀರವಾದ ಖಾಯಿಲೆ ಅಲ್ಲ ಎಂಬುದು ಅವರಿಗೂ ತಿಳಿದಿದೆ. ಆದರೂ ಸಹ ಐಸೋಲೇಶನ್‌ನಲ್ಲಿ ಇದ್ದುಕೊಂಡು ಪ್ರಚಾರ ಪಡೆದಿದ್ದಾರೆ. ಇದೆಲ್ಲಾ ಗಿಮಿಕ್ ಅಷ್ಟೆ ಎಂಬುದು ಎಲ್ಲರಿಗೂ ತಿಳಿದಿದೆ. ಯಾಕೆ ಹೀಗೆ ಜನರನ್ನು ಯಾಮಾರಿಸಲು ಅಧಿಕಾರಿಗಳು ಮುಂದಾಗಿದ್ದಾರೆ ಎಂಬುದನ್ನು ಅವರೇ ಹೇಳಬೇಕು.



- ಇಲ್ಲದ ಕರೋನಾ ವಿರುದ್ಧ ಬಿಬಿಎಂಪಿ ಹೋರಾಟ
- ಸುಖಾಸುಮ್ಮನೆ ಜನರಿಗೆ ತೊಂದರೆ
- ಇದು ಗಂಭೀರವಲ್ಲದ ಕರೋನಾ
- ಸಭೆಗಳಿಗಷ್ಟೇ ಸೀಮಿತವಾದ ಬಿಬಿಎಂಪಿ
- ಇಲ್ಲಿಯೂ ಲಂಚ ಲಪಟಾಯಿಸಲು ಕಸರತ್ತು
- ಲಾಕ್‌ಡೌನ್, ಸೀಲ್‌ಡೌನ್ ಮಾಡದಿರುವುದು ಸಮಾಧಾನ
- ಆಯುಕ್ತ ಗೌರವ್ ಗುಪ್ತಾ ನಿರ್ಲಕ್ಷ್ಯ
- ಮಾಯವಾಗುತ್ತಿದೆ ಕರೋನಾ

### ಕೆಲಸಕ್ಕೆ ಬಾರದ ಮೀಟಿಂಗ್‌ಗಳು

ಕರೋನಾ ಹೇಳಿಕೊಳ್ಳುವಂತ ಪರಿಣಾಮ ಬೀರದಿದ್ದರೂ ಸಹ ಅಧಿಕಾರಿಗಳು ಸುಮ್ಮನೆ ಕುಳಿತಿಲ್ಲ. ಬದಲಾಗಿ ದಿನಕ್ಕೆ ಎರಡು ಬಾರಿ ಕೆಲಸಕ್ಕೆ ಬಾರದ ಮೀಟಿಂಗ್‌ಗಳನ್ನು ಮಾಡುತ್ತಿದ್ದಾರೆ. ಇದರಿಂದ ಯಾವ ಪ್ರಯೋಜನವೂ ಇಲ್ಲ. ಆದರೂ ಅದ್ಯಾ-ಕೆ ಮಾಡುತ್ತಿದ್ದರೋ ಅವರಿಗೆ ತಿಳಿದಿದೆ. ಅನಗತ್ಯವಾಗಿ ಜನರಲ್ಲಿ ಭಯ ತುಂಬಿಸಲು ಇನ್ನಿಲ್ಲದ ಪತ್ರಿಕಾ ಹೇಳಿಕೆಗಳನ್ನು ಬಿಡುಗಡೆ ಮಾಡುವುದು, ರಾತ್ರಿ ಕರ್ಫ್ಯೂ ಮಾಡುವುದು, ಸಾರ್ವಜನಿಕ ಸಭೆಗಳನ್ನು ಆಯೋಜಿಸುವುದು ಇತ್ಯಾದಿಗಳನ್ನು ನಿರ್ಬಂಧಿಸಲಾಗಿದೆ. ಈ ಹಿನ್ನೆಲೆಯಲ್ಲಿ ದಿನಕ್ಕೆ ಎರಡು ಬಾರಿ ಪತ್ರಿಕೆಗಳಿಗೆ ಹೇಳಿಕೆಗಳನ್ನು ಬಿಡುಗಡೆ ಮಾಡಲಾಗುತ್ತಿದೆ. ಇದರಿಂದ ಸ್ಪಷ್ಟವಾಗಿ ಅರ್ಥವಾಗುವುದು ಏನೆಂದರೆ ಇಲ್ಲದ ಕರೋನವನ್ನು ಸರ್ಕಾರ ಇದೆ ಎಂದು ಬಿಂಬಿಸಲು ಹೊರಟಿದೆ ಎಂಬುದು.

### ಗೌರವ್ ಗುಪ್ತಾಗೆ ಪಾಸಿಟಿವ್



ಬಿಬಿಎಂಪಿ ಗೌರವ್ ಗುಪ್ತಾಗೆ ಕರೋನಾ ಪಾಸಿಟಿವ್ ಬಂದಿದೆ ಎಂದು ವರದಿಯಾಗಿದೆ. ಹಾಗಾಗಿ ಅವರು ಯಾರ ಸಂಪರ್ಕಕ್ಕೂ ಬರುತ್ತಿಲ್ಲ. ಐಸೋಲೇಷನ್‌ನಲ್ಲಿ ಇದ್ದಾರೆ ಎಂಬ ಮಾಹಿತಿ ಹೊರಬಿದ್ದಿದೆ. ಮನೆಯಿಂದಲೇ ಎಲ್ಲಾ ಕೆಲಸಗಳನ್ನು ಮಾಡುತ್ತಿದ್ದಾರೆ ಎಂದು ಅಲ್ಲಿನ ಸಿಬ್ಬಂದಿ ಹೇಳುತ್ತಿದ್ದಾರೆ. ಆದರೆ ನಮಗೆ ಇರುವ ಮಾಹಿತಿ ಪ್ರಕಾರ ಅವರು ಯಾವ ಕೆಲಸಗಳನ್ನು ಸಮರ್ಪಕವಾಗಿ ಮಾಡುತ್ತಿಲ್ಲ. ಬದಲಾಗಿ ಅವರಿಗೆ ಬೇಕಾದ ಕೆಲಸಗಳನ್ನು ಮಾಡುತ್ತಿದ್ದಾರೆ ಅಷ್ಟೆ.

ಸದ್ಯ ಎಲ್ಲಿಯೂ ಲಾಕ್‌ಡೌನ್, ಸೀಲ್‌ಡೌನ್ ಮುಂತಾದ ಕ್ರಮಗಳನ್ನು ತೆಗೆದುಕೊಳ್ಳದಿರುವುದು ಸಮಾಧಾನದ ಸಂಗತಿ. ಈ ಹಿಂದೆ ಒಂದೆರಡು ಪ್ರಕರಣಗಳು ವರದಿಯಾಗುತ್ತಿದ್ದಂತೆ ಲಾಕ್‌ಡೌನ್ ಮಾಡುವುದು ಹಾಗೂ ಏರಿಯಾಗಳನ್ನು ಸೀಲ್‌ಡೌನ್ ಮಾಡುವುದು ಅವ್ಯಾಹತವಾಗಿ ನಡೆಯುತ್ತಿತ್ತು. ಈಗ ಪರಿಸ್ಥಿತಿ ಹಾಗೆ ಇಲ್ಲದಿರುವುದು ಸಮಾಧಾನ ತಂದಿದೆ.

**ನಿಜಕ್ಕೂ ಕರೋನಾ ತಡೆಯುತ್ತಿದ್ದೀರಾ?:** ಬಿಬಿಎಂಪಿ ಅಧಿಕಾರಿಗಳು ನಿಜಕ್ಕೂ ಕರೋನಾ ತಡೆಯುತ್ತಿದ್ದೀರಾ ಎಂಬುದನ್ನು ನೀವೇ ಒಮ್ಮೆ ಪ್ರಶ್ನೆ ಹಾಕಿಕೊಳ್ಳಿ. ಈ ಮೂರನೇ ಅಲೆಯಲ್ಲಿರುವ ಕರೋನಾ ಯಾವುದೇ ಗಂಭೀರ ಸ್ವರೂಪದಲ್ಲ ಎಂಬುದು ಎಲ್ಲರಿಗೂ ತಿಳಿದಿದೆ. ಹಾಗಿದ್ದರೂ ಸಹ ಕರೋನಾ ತಡೆಯಲು ಕೆಲಸಕ್ಕೆ ಬಾರದ ಮೀಟಿಂಗ್‌ಗಳನ್ನು ಮಾಡುವುದು, ಸಿಕ್ಕಸಿಕ್ಕವರಿಗೆ ಪರೀಕ್ಷೆ ಮಾಡಿಸಿ ಕರೋನಾ ಬಂದಿದೆ ಎಂದು ಹೇಳುವುದು ಮಾಮೂಲಾಗಿದೆ. ಆರಂಭದಲ್ಲಿ ಇದನ್ನು ನಂಬಿದರೂ ಸಹ ಈಗ ಯಾರೂ ನಂಬದ ಸ್ಥಿತಿ ನಿರ್ಮಾಣವಾಗಿದೆ. ಆದರೂ ಬಿಬಿಎಂಪಿಯ ನಾಟಕ ಇನ್ನೂ ನಿಂತಿಲ್ಲ ಎನ್ನುವುದೇ ಬೇಸರದ ಸಂಗತಿ.

## ೮ ವರ್ಷದ ಗರಿಷ್ಟ ಮಟ್ಟಕ್ಕೆ ಕಚ್ಚಾತೈಲ ದರ ಏರಿಕೆ

■ ಸಂಭ್ರಮ ಪ್ರಭ



**ನವದೆಹಲಿ:** ಕಚ್ಚಾ ತೈಲ ದರ 8 ವರ್ಷದ ಗರಿಷ್ಠ ಮಟ್ಟಕ್ಕೆ ತಲುಪಿದೆ. ಪೆಟ್ರೋಲ್ ಬೆಲೆ ಮತ್ತಷ್ಟು ದುಬಾರಿಯಾಗಲಿದೆ. 2014ರ ನಂತರ ಕಚ್ಚಾತೈಲ ದರ ಗರಿಷ್ಠ ಮಟ್ಟಕ್ಕೆ ತಲುಪಿದೆ. ಜಾಗತಿಕ ಮಟ್ಟದ ಬೆಳವಣಿಗೆಗಳ ಪರಿಣಾಮ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರಲ್ ಗೆ 90 ಡಾಲ್ ಗೆ ತಲುಪಿದೆ. ಇದು 8 ವರ್ಷದ ಗರಿಷ್ಠ ದರ ಆಗಿದ್ದು, ದೇಶದಲ್ಲಿ ಈಗಾಗಲೇ 100 ರೂಪಾಯಿ ಗಡಿ ದಾಟಿರುವ ಪೆಟ್ರೋಲ್ ಮತ್ತು ಡೀಸೆಲ್ ದರ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಆದರೆ, ಸದ್ಯಕ್ಕೆ 5 ರಾಜ್ಯಗಳಲ್ಲಿ ಚುನಾವಣೆ ನಡೆಯುತ್ತಿರುವುದರಿಂದ ಸದ್ಯಕ್ಕೆ ದರ ಏರಿಕೆ ಮಾಡುವ ಸಾಧ್ಯತೆ ಕಡಿಮೆ ಇದೆ. ಚುನಾವಣೆ ಮುಗಿದ ಕೂಡಲೇ ವಾಹನ ಸವಾರರಿಗೆ ಬರೆ ಬೀಳಲಿದೆ ಎಂದು ಹೇಳಲಾಗಿದೆ.

## ವಾರದಲ್ಲಿ 5 ದಿನ ಆದೇಶ ವಾಪಾಸ್ ಪಡೆದ ಸರ್ಕಾರ

■ ಸಂಭ್ರಮ ಪ್ರಭ



**ಬೆಂಗಳೂರು:** ಕೊರೋನಾ ಸೋಂಕಿನ ನಿಯಂತ್ರಣಕ್ಕಾಗಿ ರಾಜ್ಯ ಸರ್ಕಾರದಿಂದ ವೀಕೆಂಡ್ ಕರ್ಫ್ಯೂ ಜಾರಿಗೊಳಿಸಲಾಗಿತ್ತು. ಈ ಸಂದರ್ಭದಲ್ಲಿ ಸರ್ಕಾರಿ ನೌಕರರಿಗೆವಾರದಲ್ಲಿ ಐದು ದಿನ ಮಾತ್ರ ಕೆಲಸ ಮಾಡಿ, ಶನಿವಾರದಂದು ರಜೆ ಘೋಷಣೆ ಮಾಡಲಾಗಿತ್ತು. ಈ ಕುರಿತಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್ ಸ್ಪಷ್ಟೀಕರಣ ಆದೇಶ ಹೊರಡಿಸಿದ್ದು, ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ದಿನಾಂಕ 04-01-2022ರಂದು ಎಲ್ಲಾ ಕಚೇರಿಗಳು ವಾರದಲ್ಲಿ ಐದು ದಿನ ಸೋಮವಾರದಿಂದ ಶುಕ್ರವಾರದ ವರೆಗೆ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿತ್ತು. ಈ ಆದೇಶವನ್ನು ಹಿಂಪಡೆಯಲಾಗಿದೆ ಎಂದು ತಿಳಿಸಿದ್ದಾರೆ. ಈ ಹಿನ್ನಲೆಯಲ್ಲಿ ವಾರಾಂತ್ಯದಲ್ಲಿ ಎಲ್ಲಾ ಕಚೇರಿಗಳು ಎಂದಿನಂತೆ ಕಾರ್ಯನಿರ್ವಹಸುವಂತೆ ಸೂಚಿಸಿದ್ದಾರೆ. ಈ ಮೂಲಕ ವಾರದ 6 ದಿನ ಕೆಲಸ ನಿರ್ವಹಿಸೋದಕ್ಕೆ ತಿಳಿಸಲಾಗಿದೆ.


### ಬೆಂಗಳೂರಲ್ಲೂ ನಕಲಿ ತುಪ್ಪ ತಯಾರಿಕೆ ಪತ್ತೆ

5

### ರಾಹುಲ್ ಟ್ವಿಟರ್ ಕುಸಿತ!

ಫಾಲೋವರ್ಸ್ ಕಡಿತದಲ್ಲಿ ಕೇಂದ್ರ ಸರ್ಕಾರದ ಕೈಚಳಕ

7

### ಹಿರಿಯ ನಟನ ಜತೆ ನಮಿತಾ ಡೇಟಿಂಗ್

8




## ಸಿಎಂ ಬಸವರಾಜ ಬೊಮ್ಮಾಯಿಗೆ 62ನೇ ಹುಟ್ಟುಹಬ್ಬದ ಸಂಭ್ರಮ; ಗೋವುಗಳ ಪೂಜೆ ಮೂಲಕ ಸರಳ ಆಚರಣೆ

■ ಸಂಭ್ರಮ ಪ್ರಭ

**ಬೆಂಗಳೂರು:** ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಇಂದು ಹುಟ್ಟುಹಬ್ಬದ ಸಂಭ್ರಮ. ಸಿಎಂ ಬವರಾಜ ಬೊಮ್ಮಾಯಿ 62ನೇ ವಸಂತಕ್ಕೆ ಕಾಲಿಟ್ಟಿದ್ದಾರೆ. ಅಲ್ಲದೆ ಇಂದಿಗೆ ಸಿಎಂ ಬೊಮ್ಮಾಯಿ ನೇತೃತ್ವದ ಸರ್ಕಾರಕ್ಕೆ 6 ತಿಂಗಳು ತುಂಬಿದೆ. ಈ ಹಿನ್ನೆಲೆಯಲ್ಲಿ ಬೊಮ್ಮಾಯಿಗೆ ಶುಭಾಶಯಗಳ ಮಹಾಪೂರವೇ ಹರಿದು ಬರುತ್ತಿದೆ. ಜೀರೋ ಟ್ರಾಫಿಕ್ ವ್ಯವಸ್ಥೆ ತ್ಯಜಿಸಿ, ಸರ್ಕಾರಿ ಸಭೆ-ಸಮಾರಂಭಗಳಲ್ಲಿ ಹೂ ಗುಚ್ಛ ಬೇಡ ಕನ್ನಡ ಪುಸ್ತಕ ನೀಡಿ ಎಂಬ ಆದೇಶದಿಂದ ಜನಮನ ಗೆದ್ದಿರುವ ಸಿಎಂ ಬೊಮ್ಮಾಯಿ ಇಂದು ಆರ್ಟಿ ನಗರದ ತಮ್ಮ ನಿವಾಸದಲ್ಲಿ ಗೋಪೂಜೆ ಮಾಡುವ ಮೂಲಕ ಸರಳ ಹುಟ್ಟುಹಬ್ಬವನ್ನು ಆಚರಿಸಿಕೊಂಡಿದ್ದಾರೆ.

### ಶುಭ ಕೋರಿದ ಮೋದಿ, ಅಮಿತ್ ಶಾ

ಹುಟ್ಟುಹಬ್ಬದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ನಾಯಕರು ಟ್ವಿಟರ್‌ನಲ್ಲಿ ಶುಭ ಹಾರೈಸಿದ್ದಾರೆ. 'ಕರ್ನಾಟಕದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಜನ್ಮದಿನದ ಶುಭಾಶಯಗಳು. ರಾಜ್ಯದ ಅಭಿವೃದ್ಧಿ, ಬಡವರ ಏಳಿಗೆಗಾಗಿ ಶ್ರಮಿಸುತ್ತಿದ್ದಾರೆ. ಅವರಿಗೆ ದೀರ್ಘ ಆಯಸ್ಸು ಮತ್ತು ಉತ್ತಮ ಆರೋಗ್ಯವನ್ನು ದೇವರು ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ' ಎಂದು ನರೇಂದ್ರ ಮೋದಿ ಟ್ವೀಟ್ ಮಾಡಿದ್ದಾರೆ.

## ಸಿದ್ದರಾಮಯ್ಯ ಭೇಟಿ ಮಾಡಿದ ಜೆಡಿಎಸ್ ಶಾಸಕ ಪುಟ್ಟರಾಜು

■ ಸಂಭ್ರಮ ಪ್ರಭ



**ಬೆಂಗಳೂರು:** ಮೇಲುಕೋಟೆ ಜೆಡಿಎಸ್ ಶಾಸಕ ಸಿ.ಎಸ್. ಪುಟ್ಟರಾಜು ಅವರು ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರನ್ನು ಗುರುವಾರ ರಾತ್ರಿ ಭೇಟಿ ಮಾಡಿರುವುದು ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ. ಸಂಜೆ 7.30ರ ಸುಮಾರಿಗೆ ಸಿದ್ದರಾಮಯ್ಯ ಅವರ ನಿವಾಸಕ್ಕೆ ಪುಟ್ಟರಾಜು ಬಂದಿದ್ದರು. ಇಬ್ಬರೂ ಸುಮಾರು 1 ಗಂಟೆ ರಾಜ್ಯ ರಾಜಕೀಯ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಚರ್ಚೆ ನಡೆಸಿದರು. ಮೇಲುಕೋಟೆಯ ವಲ್ಲಿ ಡೆಂಕಾಪುರ ಗ್ರಾಮದಲ್ಲಿರುವ ಶ್ರೀ ಬೀರೇಶ್ವರ ದೇವಸ್ಥಾನದ ಉದ್ಘಾಟನೆ ಫೆ. 14ರಂದು ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನಿಸಲು ಪುಟ್ಟರಾಜು ಬಂದಿದ್ದರು ಎಂದೂ ಮೂಲಗಳು ಹೇಳಿವೆ. 'ಈ ಹಿಂದೆಯೂ ಎರಡು ಬಾರಿ ಪುಟ್ಟರಾಜು ಮತ್ತು ಸಿದ್ದರಾಮಯ್ಯ ನಡುವೆ ಮಾತುಕತೆ ನಡೆದಿದ್ದು, ಕಾಂಗ್ರೆಸ್ ಸೇರುವ ಬಗ್ಗೆ ಪುಟ್ಟರಾಜು ಒಲವು ವ್ಯಕ್ತಪಡಿಸಿದ್ದಾರೆ' ಎಂದು ಸಿದ್ದರಾಮಯ್ಯ ಅವರ ಆಪ್ತ ಮೂಲಗಳು ತಿಳಿಸಿವೆ.

## ಫೆಬ್ರವರಿ 14 ರಿಂದ ಜಂಟಿ ಅಧಿವೇಶನ ಸಿಎಂ ಬೊಮ್ಮಾಯಿ

■ ಸಂಭ್ರಮ ಪ್ರಭ



**ಬೆಂಗಳೂರು:** ಫೆಬ್ರವರಿ 14 ರಿಂದ ಫೆಬ್ರವರಿ 25ರ ವರೆಗೆ ಜಂಟಿ ಅಧಿವೇಶನ ಕರೆಯಲು ತೀರ್ಮಾನ ಮಾಡಲಾಗಿದೆ. ಮಾರ್ಚ್ ಮೊದಲ ವಾರದಲ್ಲಿ ಬಜೆಟ್ ಮಂಡಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಗುರುವಾರ ಹೇಳಿದ್ದಾರೆ. ಇಂದು ತಮ್ಮ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಫೆಬ್ರವರಿ 14 ರಿಂದ ಜಂಟಿ ಅಧಿವೇಶನ ಕರೆಯಲು ನಿರ್ಧರಿಸಲಾಗಿದೆ. ಮಾರ್ಚ್ ಮೊದಲ ವಾರದಲ್ಲಿ 2022-23ನೇ ಸಾಲಿನ ಬಜೆಟ್ ಮಂಡಿಸಲಾಗುವುದು ಎಂದರು. ಇಂದಿನ ಸಚಿವ ಸಂಪುಟ ಸಭೆಯಲ್ಲಿ ಹಲವು ವಿಚಾರಗಳ ಬಗ್ಗೆ ಚರ್ಚೆ ಮಾಡಿದ್ದೇವೆ. ಕೋವಿಡ್ ಸ್ಥಿತಿಗತಿ, ಮುಂದಿನ ದಿನಗಳಲ್ಲಿ ಕೋವಿಡ್ ನಿರ್ವಹಣೆ ಬಗ್ಗೆ ಚರ್ಚೆ ನಡೆಸಲಾಗಿದೆ. ನಿಯಮ ಸಡಿಲಿಕೆ ಬಗ್ಗೆ ಬೇರೆ ಬೇರೆ ವಲಯದವರ ಮನವಿ, ಶಾಲಾ ಕಾಲೇಜುಗಳ ವಿಚಾರದ ಬಗ್ಗೆ ಸಹ ಚರ್ಚೆ ಮಾಡಿದ್ದೇವೆ. ಎಲ್ಲ ಸಚಿವರೂ ತಮ್ಮ ಅಭಿಪ್ರಾಯ ಹೇಳಿದ್ದಾರೆ. ಈ ಬಗ್ಗೆ ತಜ್ಞರ ಸಮಿತಿಯಿಂದ ವರದಿ ಕೇಳಿದ್ದೇವೆ. ನಿಯಮಗಳ ಸಡಿಲಿಕೆ ಬಗ್ಗೆ ತಜ್ಞರ ವರದಿ ಬಂದ ಬಳಿಕ ಸಭೆ ನಡೆಸಿ ಕೂಲಂಕುಶವಾಗಿ ಚರ್ಚಿಸಿ ನಿರ್ಧಾರ ಮಾಡಲಾಗುವುದು ಎಂದರು.

## ಮಾರ್ಚ್ 3ರಿಂದ 13ನೇ ಅಂತರಾಷ್ಟ್ರೀಯ ಚಲನಚಿತ್ರೋತ್ಸವ

■ ಸಂಭ್ರಮ ಪ್ರಭ



**ಬೆಂಗಳೂರು:** 13ನೇ ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸವದ ಸಂಘಟನಾ ಸಮಿತಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿತು. ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಚಲನಚಿತ್ರೋತ್ಸವದ ಲೋಗೋ ಬಿಡುಗಡೆ ಮಾಡಿದರು. ಸಭೆ ಬಳಿಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸುನೀಲ್ ಪುರಾಣಿಕ್ ಸುದ್ದಿಗಾರರೊಂದಿಗೆ ಮಾತನಾಡಿದರು. ಸಿಎಂ ಜತೆ ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸವ ಬಗ್ಗೆ ಚರ್ಚೆ ನಡೆಸಲಾಯ್ತು. ಚಲನಚಿತ್ರೋತ್ಸವ ನಡೆಸಲು ಸಿಎಂ ಆದೇಶ ಕೊಟ್ಟಿದ್ದಾರೆ. ಭಾರತದಲ್ಲಿ ಇದು ಐದನೇ ದೊಡ್ಡ ಚಲನಚಿತ್ರೋತ್ಸವ. ಕೋವಿಡ್ ನಿಯಮಾವಳಿ ಪಾಲಿಸಿ ಚಲನಚಿತ್ರೋತ್ಸವ ನಡೆಸ್ತೇವೆ. ಮಾರ್ಚ್ 3 ರಂದು ಜಿಕೆವಿಕೆಯಲ್ಲಿ 13ನೇ ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸವ ಉದ್ಘಾಟನೆಯಾಗಲಿದೆ ಎಂದರು. ತೋಟಗಾರಿಕಾ ಸಚಿವ ಮುನಿರತ್ನ, ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಸುನೀಲ್ ಪುರಾಣಿಕ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಜಯರಾಂ, ಸಂಘಟನಾ ಸಮಿತಿ ಸದಸ್ಯರಾದ ಖ್ಯಾತ ಕಲಾವಿದೆ ಸುಧಾರಾಣಿ, ಕಲಾ ನಿರ್ದೇಶಕ ಶಶಿಧರ್ ಅಡಪ, ಕಲಾವಿದೆ ಸೋನುಗೌಡ, ಕಲಾ ನಿರ್ದೇಶಕ ಹೆಚ್. ಎನ್.ನರಹರಿರಾವ್, ಮಂಜುನಾಥ್ ಪ್ರಸಾದ್, ಡಾ. ಪಿ.ಎಸ್.ಹರ್ಷಾ ಇದ್ದರು.

## ಕರ್ನಾಟಕವನ್ನು ಸಾಂಸ್ಕೃತಿಕವಾಗಿ ಬೆಂಗಾಡು ಮಾಡುವ ಕೆಲಸ ಮಾಡ್ತಿದೆ ಕೇಂದ್ರ ಸರಕಾರ

■ ಸಂಭ್ರಮ ಪ್ರಭ

**ಬೆಂಗಳೂರು:** ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಅವರು ಕನ್ನಡದ ಕೆಚ್ಚನ್ನು ಮಣಿಸಿ, ಕರ್ನಾಟಕವನ್ನು ಸಾಂಸ್ಕೃತಿಕವಾಗಿ ಬೆಂಗಾಡು ಮಾಡ್ತಿದೆ ಕೇಂದ್ರ ಸರಕಾರ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿ ದ್ದಾರೆ. '101.3 ಎಫ್ ಎಂ ರೇನ್ ಬೋ ಕನ್ನಡ ಕಾಮನ ಇ ಬಿಲ್ಲು ರೇಡಿಯೋ ವಾಹಿನಿಯ ಪ್ರಸಾರ ಸ್ಥಗಿತಗೊಳಿಸಿರುವುದೇ ಕಾರಣವಾಗಿದೆ. ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಹೆಚ್‌ಡಿ ಕುಮಾರಸ್ವಾಮಿ ಕೇಂದ್ರ ಸರಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

**ಹೆಚ್‌ಡಿ ಕುಮಾರಸ್ವಾಮಿ ಟ್ವೀಟ್ ಸಾರಾಂಶ ಹೀಗಿದೆ:** ಕನ್ನಡದ ಕೆಚ್ಚನ್ನು ಮಣಿಸಿ, ಕರ್ನಾಟಕವನ್ನು ಸಾಂಸ್ಕೃತಿಕವಾಗಿ ಬೆಂಗಾಡು ಮಾಡುವ ಸಕಲ ಪ್ರಯತ್ನವನ್ನೂ ಕೇಂದ್ರ ಸರಕಾರ ಮಾಡುತ್ತಿದೆ ಎನ್ನುವುದಕ್ಕೆ ಇಲ್ಲಿದೆ ಇನ್ನೊಂದು ಸಾಕ್ಷಿ. ಈಗ ನೇರವಾಗಿ ಕನ್ನಡದ ಎದೆ ಮೇಲೆ ಕಾಲಿಡುವ ದುಷ್ಟ ಸಂಚು ನಡೆಯುತ್ತಿರುವುದು ನನ್ನ ಗಮನಕ್ಕೆ ಬಂದಿದೆ.



ಸೂರ್ಯೋದಯಕ್ಕೆ ಮುನ್ನವೇ ಪ್ರಸಾರ ಆರಂಭಿಸಿ ರಾತ್ರಿ 11ರ ತನಕ ಸತತ 18 ಗಂಟೆ ಕಾಲ ನಿರಂತರವಾಗಿ ಕನ್ನಡ ಕಾರ್ಯಕ್ರಮಗಳನ್ನು ನೀಡುತ್ತಿರುವ '101.3 ಎಫ್ ಎಂ ರೇನ್ ಬೋ ಕನ್ನಡ ಕಾಮನಬಿಲ್ಲು ರೇಡಿಯೋ ವಾಹಿನಿಯ ಕತ್ತು ಕುಯ್ಯುವ ಕೆಲಸಕ್ಕೆ ಕೇಂದ್ರ ಸರಕಾರ ಹೊರಟಿರುವುದು ಅಕ್ಷಮ್ಯ. ಕನ್ನಡಕ್ಕೆ ಕೊಡಲಿ ಪೆಟ್ಟು. ರೇನ್ ಬೋ ಕನ್ನಡ ಕಾಮನಬಿಲ್ಲು ಕೇವಲ ರೇಡಿಯೋ ವಾಹಿನಿ ಮಾತ್ರವಲ್ಲ, ಕನ್ನಡಿಗರ ಹೃದಯಬಡಿತ, ಕನ್ನಡದ ಅಸ್ಮಿತೆ ಕೂಡ. ಆದರೆ, ಕೇಂದ್ರ ಸರಕಾರ ಕನ್ನಡಿಗರ ಭಾವನೆಗಳ ಜತೆ ಚೆಲ್ಲಾಟ ಆಡುತ್ತಿದೆ. ಅಧಿಕಾರಿಗಳ ಮೂಲಕ ಕನ್ನಡಮ್ಮನ ರಕ್ತ ಬಗೆಯುವ ಹೀನ ಕೆಲಸ ಮಾಡುತ್ತಿದೆ. ಈ ಹಿಂದೆ ಕನ್ನಡಿಗರ ಮನೆಮನದಲ್ಲಿ ತುಂಬಿದ್ದ ಅಮೃತವರ್ಷಿಣಿಯನ್ನು ಮುಗಿಸಲಾಯಿತು. ಈಗ ಕನ್ನಡ ಕಾಮನಬಿಲ್ಲನ್ನು ಮುಗಿಸಲು ಹೊರಟಿದ್ದಾರೆ. ಕನ್ನಡ ವಿರೋಧಿ ಕೇಂದ್ರ ಸರಕಾರ, ಕನ್ನಡದ್ರೋಹಿ ಅಧಿಕಾರಿಗಳ ಕಪಿಮುಷ್ಠಿಯಲ್ಲಿ ಸಿಲುಕಿರುವ ಕನ್ನಡದ ಆಕ್ರಂದನವನ್ನು ಇನ್ನು ಸಹಿಸಲು ಸಾಧ್ಯವಿಲ್ಲ. ಆಯಕಟ್ಟಿನಲ್ಲಿ ಕೂತಿರುವ ಹಿರಿಯ ಅಧಿಕಾರಿಗಳು ಕಸಾಯಿಗಳಂತೆ ಸಾವಿರಾರು ವರ್ಷಗಳ ಅಭಿಜಾತ ಭಾಷೆ ಕನ್ನಡದ ಮೇಲೆ ದಾಳಿ ನಡೆಸಿ ಕ್ರೂರವಾಗಿ ವಧೆ ಮಾಡುತ್ತಿದ್ದಾರೆ. ಕನ್ನಡನಾಡನ್ನು ಉದ್ಧಾರ ಮಾಡುತ್ತೇವೆಂದು ಗೆದ್ದುಹೋದ ಸಂಸದರು ಕನ್ನಡಕ್ಕೆ ಆಗುತ್ತಿರುವ ಅನ್ಯಾಯವನ್ನು ಸಹಿಸುತ್ತಿರುವುದು ಹೊಣೆಗೇಡಿತನವೇ ಸರಿ. ಕನ್ನಡಿಗರು ಸಹಿಷ್ಣುಗಳು, ಸೌಮ್ಯರು ಹೌದು. ಹಾಗೆಂದು, ತಾಯಿಭಾಷೆಗೆ ಕೊಳ್ಳಿ ಇಡುತ್ತಿರುವ ಭಾಷಾಂತಕರನ್ನು ನೋಡುತ್ತಾ ಸುಮ್ಮನೆ ಕೂರಲಾರರು, ನೆನಪಿರಲಿ. ಸಂಸದರೆಲ್ಲರೂ ದನಿಯೆತ್ತಿ ಈ ರೇಡಿಯೋ ವಾಹಿನಿಯನ್ನು ಉಳಿಸಬೇಕು. ಮುಚ್ಚುವುದು ಅಥವಾ ಇನ್ನೊಂದರಲ್ಲಿ ವಿಲೀನ ಮಾಡುವುದನ್ನು ಸಹಿಸುವ ಪ್ರಶ್ನೆಯೇ ಇಲ್ಲ.

## ಮಾಜಿ ಸಿಎಂ ಬಿಎಸ್‌ವೈ ಮೊಮ್ಮಗಳು ಆತ್ಮಹತ್ಯೆ ಮೂರೂವರೆ ವರ್ಷದ ಹಿಂದಷ್ಟೇ ಮದುವೆಯಾಗಿತ್ತು

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ಮೊಮ್ಮಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಿಎಸ್‌ವೈ ಮೊಮ್ಮಗಳು ಇಂದು ಬೆಳಗ್ಗೆ ಸುಮಾರು 10 ಗಂಟೆಯಲ್ಲಿ ಫ್ಯಾನ್ ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ (ಃಉಜಜ) ಮಾಡಿಕೊಂಡಿದ್ದಾರೆ. ಪದ್ಮಾವತಿ ಪುತ್ರಿ ಸೌಂದರ್ಯ(30) ಆತ್ಮಹತ್ಯೆ ಮಾಡಿಕೊಂಡ ಯುವತಿ. ಹೈಗ್ರೌಂಡ್ಸ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ. ಬೆಂಗಳೂರಿನ ಬೌರಿಂಗ್ ಆಸ್ಪತ್ರೆಗೆ ಮೃತದೇಹ ರವಾನೆ ಮಾಡಲಾಗಿದೆ.



ಬಿಎಸ್ ಯಡಿಯೂರಪ್ಪ ಅವರ ದ್ವಿತೀಯ ಪುತ್ರಿ ಪದ್ಮಾವತಿ ಅವರ ಮಗಳು ಸೌಂದರ್ಯ ಅವರು ವಸಂತನಗರದಲ್ಲಿರುವ ಮೌಂಟ್ ಕಾರ್ಮೆಲ್ ಕಾಲೇಜು ಬಳಿಯ ಫ್ಲ್ಯಾಟ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸೌಂದರ್ಯ ರಾಮಯ್ಯ ಆಸ್ಪತ್ರೆಯಲ್ಲಿ ವೈದ್ಯೆಯಾಗಿದ್ದರು. 2018ರಲ್ಲಿ ವೈದ್ಯ ಡಾ. ನೀರಜ್ ಅವರನ್ನು ಸೌಂದರ್ಯ ಮದುವೆಯಾಗಿದ್ದರು. ಮೃತ ಸೌಂದರ್ಯಗೆ ಒಂದು ಮಗು ಇದೆ. ಸೌಂದರ್ಯ ಪತಿ ನೀರಜ್ ಬೆಳಗ್ಗೆ 8 ಗಂಟೆಗೆ ಕೆಲಸಕ್ಕೆ ಹೋಗಿದ್ದರು. ಇತ್ತ ಸೌಂದರ್ಯ 10 ಗಂಟೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮನೆ ಕೆಲಸದವರು ಬಂದಾಗ ಬಾಗಿಲು ತೆಗೆಯದಿದ್ದಾಗ ಸೌಂದರ್ಯ ಪತಿ ಡಾ. ನೀರಜ್‌ಗೆ ಕೆಲಸದವರು ಕರೆ ಮಾಡಿದ್ದರು. ಮನೆ ಕೆಲಸದವರು ಫೋನ್ ಮಾಡಿದ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ.

ಸಿಎಂ ಬೊಮ್ಮಾಯಿ ತಮ್ಮ ಹುಟ್ಟುಹಬ್ಬ ಸಂಭ್ರಮ ಬದಿಗಿಟ್ಟು, ಯಡಿಯೂರಪ್ಪ ನಿವಾಸಕ್ಕೆ ದೌಡು: ಇನ್ನು ಇಂದು ತಮ್ಮ ಹುಟ್ಟುಹಬ್ಬದ ಸಂಭ್ರಮದಲ್ಲಿದ್ದ ಸಿಎಂ ಬಸವರಾಜ ಬೊಮ್ಮಾಯಿ ಅವರು ಯಡಿಯೂರಪ್ಪ ಮೊಮ್ಮಗಳು ಆತ್ಮಹತ್ಯೆ ಸುದ್ದಿ ಕೇಳಿಬರುತ್ತಿದ್ದಂತೆ ಬೆಂಗಳೂರಿನ ಕೆಕೆ ರಸ್ತೆಯಲ್ಲಿರುವ ಯಡಿಯೂರಪ್ಪ ಅವರ ಕಾವೇರಿ ನಿವಾಸಕ್ಕೆ ದೌಡಾಯಿಸಿದ್ದಾರೆ.

ಜಾಹೀರಾತಿಗಾಗಿ ಸಂಪರ್ಕಿಸಿ 9844344445 080-23482445 sambramaprabha@gmail.com

# ಕೋವಿಡ್ ಲಸಿಕೆ ನೀಡುವ ಪ್ರಮಾಣ ಇಳಿಕೆ

■ ಸಂಭ್ರಮ ಪ್ರಭ

**ಬೆಂಗಳೂರು:** ರಾಜ್ಯದಲ್ಲಿ ಕೋವಿಡ್ ಲಸಿಕೆ ನೀಡುವ ಪ್ರಮಾಣ ಇಳಿಮುಖವಾಗಿದೆ. ಈ ತಿಂಗಳ ಪ್ರಾರಂಭಿಕ ದಿನಗಳಲ್ಲಿ ದಿನವೊಂದಕ್ಕೆ 5 ಲಕ್ಷದಷ್ಟು ಡೋಸ್ಗಳನ್ನು ನೀಡಲಾಗಿತ್ತು. ಈಗ ಆ ಸಂಖ್ಯೆ 3 ಲಕ್ಷದ ಆಸುಪಾಸಿನಲ್ಲಿದೆ.

ಕೋವಿಡ್ ಮೂರನೇ ಅಲೆ ಮುನ್ನೆಚ್ಚರಿಕೆ ಕ್ರಮವಾಗಿ 18 ವರ್ಷಗಳು ಮೇಲ್ಪಟ್ಟ ಎಲ್ಲರಿಗೂ ಎರಡು ಡೋಸ್ ಲಸಿಕೆನೀಡುವ ಗುರಿ ಹಾಕಿಕೊಂಡಿದ್ದ ಸರ್ಕಾರ, ಕಳೆದ ವರ್ಷಾಂತ್ಯದಲ್ಲಿ ಲಸಿಕಾ ಮೇಳಗಳನ್ನು ನಡೆಸಿತ್ತು. ಸರ್ಕಾರಿ ಆಸ್ಪತ್ರೆ ಸೇರಿದಂತೆ 7 ಸಾವಿರಕ್ಕೂ ಅಧಿಕ ಕೇಂದ್ರಗಳಲ್ಲಿ ಲಸಿಕೆ ನೀಡಲಾಗಿತ್ತು. ಈಗ 6,261 ಕೇಂದ್ರಗಳಲ್ಲಿ ಲಸಿಕೆ ನೀಡಲಾಗುತ್ತಿದೆ.

ರಾಜ್ಯದಲ್ಲಿ 4.89 ಕೋಟಿ ಮಂದಿ 18 ವರ್ಷಗಳು ಮೇಲ್ಪಟ್ಟವರೆಂದು ಲೆಕ್ಕ ಹಾಕಲಾಗಿದೆ. ಅಷ್ಟು ಮಂದಿಗೆ ಈಗ ಮೊದಲ ಡೋಸ್ ಲಸಿಕೆಯನ್ನು ನೀಡಲಾಗಿದೆ. ಅವರಲ್ಲಿ ಶೇ 86 ರಷ್ಟು ಮಂದಿ ಎರಡನೇ ಡೋಸ್ ಲಸಿಕೆ ಹಾಕಿಸಿಕೊಂಡಿದ್ದಾರೆ. ಹೀಗಾಗಿ, ದೈನಂದಿನ ಡೋಸ್ ನೀಡುವುದನ್ನು ಕಡಿಮೆ ಮಾಡಲಾಗಿದೆ ಎಂದು ಆರೋಗ್ಯ ಇಲಾಖೆ ಮೂಲಗಳು ಹೇಳಿವೆ.

ರಾಜ್ಯದಲ್ಲಿ 15ರಿಂದ 18 ವರ್ಷದೊಳಗಿನವರು ಸೇರಿದಂತೆ 5.14 ಕೋಟಿ ಮಂದಿಗೆ ಮೊದಲ ಡೋಸ್ ಲಸಿಕೆ ನೀಡಲಾಗಿದೆ. ಅವರಲ್ಲಿ 4.24 ಕೋಟಿ ಮಂದಿ ಎರಡನೇ ಡೋಸ್ ಲಸಿಕೆ ಪಡೆದುಕೊಂಡಿದ್ದಾರೆ. 6.24 ಲಕ್ಷ ಮಂದಿಗೆ ಮುನ್ನೆಚ್ಚರಿಕೆ ಡೋಸ್ (ಮೂರನೇ ಡೋಸ್) ಲಸಿಕೆ ನೀಡಲಾಗಿದೆ.

ರಾಜ್ಯದಲ್ಲಿ 2021ರ ಜನವರಿಯಲ್ಲಿ ಲಸಿಕೆ ನೀಡುವುದು ಪ್ರಾರಂಭವಾದರೂ, ದೈನಂದಿನ ಸರಾಸರಿ ಮಾರ್ಚ್ ತಿಂಗಳ ನಂತರ ಲಕ್ಷದ ಗಡಿ ದಾಟಿತ್ತು. ಬಳಿಕ ಲಸಿಕೆ ನೀಡುವುದು ಏರುಗತಿ ಪಡೆದುಕೊಂಡಿತ್ತು. ಸೆಪ್ಟೆಂಬರ್ ತಿಂಗಳಲ್ಲಿ ಪ್ರತಿನಿತ್ಯ ಸರಾಸರಿ 4.83 ಲಕ್ಷ ಡೋಸ್ಗಳಷ್ಟು ಲಸಿಕೆಯನ್ನು ನೀಡಲಾಗಿತ್ತು. ಈ ತಿಂಗಳು ಪ್ರತಿನಿತ್ಯ ಸರಾಸರಿ 3.15 ಲಕ್ಷದಷ್ಟು ಡೋಸ್ಗಳನ್ನು ನೀಡಲಾಗಿದೆ.



## ಅಂ.ರಾ ಪ್ರಯಾಣಿಕರಿಗಷ್ಟೇ ಕೋವಿಡ್ ಪರೀಕ್ಷೆ: ಸುಧಾಕರ್

**ಬೆಂಗಳೂರು:** ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ (ಐಸಿಎಂಆರ್) ಸಲಹೆಯಂತೆ, ಕೋವಿಡ್ ಪರೀಕ್ಷಾ ಮಾರ್ಗಸೂಚಿಯನ್ನು ರಾಜ್ಯದಲ್ಲಿ ಪರಿಷ್ಕರಿಸಲಾಗಿದೆ ಎಂದು ಆರೋಗ್ಯ ಸಚಿವ ಡಾ. ಕೆ.ಸುಧಾಕರ್ ಹೇಳಿದ್ದಾರೆ. ಈ ಸಂಬಂಧಕೂ ತಾಣದ ಮೂಲಕ ಮಾಹಿತಿ ನೀಡಿರುವ ಅವರು, ಸೋಂಕಿನ ಲಕ್ಷಣಗಳು ಇರುವವರು, ಕೋವಿಡ್‌ನಿಂದ ಅಪಾಯದಲ್ಲಿರುವ ಗುಂಪು ಹಾಗೂ ಅಂತರರಾಷ್ಟ್ರೀಯ ಪ್ರಯಾಣಿಕರನ್ನು ಮಾತ್ರವೇ ಪರೀಕ್ಷೆಗೆ ಒಳಪಡಿಸುವಂತೆ ಐಸಿಎಂಆರ್ ಸಲಹೆ ನೀಡಿದೆ ಎಂದು ತಿಳಿಸಿದ್ದಾರೆ. ಐಸಿಎಂಆರ್ ಇತ್ತೀಚೆಗೆ ಹೊಸ ಮಾರ್ಗಸೂಚಿ ಬಿಡುಗಡೆ ಮಾಡಿತ್ತು. ಸೋಂಕಿನ ಲಕ್ಷಣವಿಲ್ಲದವರು, ಹೋಂ ಐಸೋಲೇಷನ್ ನಿಯಮಾವಳಿ ಪ್ರಕಾರ ಗುಣ ಮುಖರಾದವರು, ಕೋವಿಡ್ ಚಿಕಿತ್ಸಾ ಕೇಂದ್ರಗಳಿಂದ ಬಿಡುಗಡೆಯಾಗುತ್ತಿರುವವರು, ಅಂತರರಾಜ್ಯ ಪ್ರಯಾಣಿಕರು ಸಹ ಪರೀಕ್ಷೆಗೆ ಒಳಗಾಗಬೇಕಿಲ್ಲ ಎಂದು ಹೇಳಿದರು.

## ರಾಜ್ಯ ಸರ್ಕಾರದಿಂದ ಪರೀಕ್ಷೆಗೆ ಹೊಸ ಮಾರ್ಗಸೂಚಿ ಪ್ರಕಟ

**ಬೆಂಗಳೂರು:** ಕೊರೊನಾ ಪರೀಕ್ಷೆ ಸಂಬಂಧ ರಾಜ್ಯ ಸರ್ಕಾರ ಮಾರ್ಗಸೂಚಿ ಬಿಡುಗಡೆ ಮಾಡಿದ್ದು, ಮಾರ್ಗಸೂಚಿಯಲ್ಲಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ರಾಜ್ಯ ಸರ್ಕಾರ ಸೂಚನೆ ನೀಡಿದೆ. ಕೊರೊನಾ ಸೋಂಕಿನ ಲಕ್ಷಣಗಳಿದ್ದರೆ ಮಾತ್ರ ಟೆಸ್ಟ್ ಮಾಡಿಸಬೇಕು. ವಿದೇಶದಿಂದ ಬರುವವರಿಗೆ ಎಂದಿನಂತೆ ಟೆಸ್ಟಿಂಗ್ ಇರುತ್ತದೆ ಎಂದು ಮಾರ್ಗಸೂಚಿ ತಿಳಿಸಿದೆ. ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳ ಆಯುಕ್ತರು



ಆದೇಶ ಹೊರಡಿಸಿದ್ದು, ಕೋವಿಡ್ ಸೋಂಕಿನ ಪ್ರಕರನಗಳನ್ನು ತ್ವರಿತವಾಗಿ ಪತ್ತೆ ಹಚ್ಚುವುದು ಮತ್ತು ಸೂಕ್ತ ಚಿಕಿತ್ಸೆಯನ್ನು ಖಚಿತಪಡಿಸಿಕೊಳ್ಳುವುದು ಹಾಗೂ ಹಿರಿಯ ನಾಗರಿಕರಿಗೆ ( 60 ವರ್ಷ ಮೇಲ್ಪಟ್ಟ) ಹಾಗೂ ಮಾರಣಾಂತಿಕ ಖಾಯಿಲೆಯಿಂದ ಬಳಲುತ್ತಿರುವವರಿಗಾಗಿ ಕೊರೊನಾ ಪರೀಕ್ಷಾ ಕಾರ್ಯತಂತ್ರವನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶ ಹೊರಡಿಸಿದ್ದಾರೆ. ಕೊರೊನಾ ಸೋಂಕಿನ ಲಕ್ಷಣವಿರುವ ವ್ಯಕ್ತಿಗಳು ( ಕೆಮ್ಮು, ಜ್ವರ, ಗಂಟಲು ಕೆರೆತ, ರುಚಿ/ವಾಸನೆಯ ಗ್ರಹಿಕೆ ಕಳೆದುಕೊಂಡವರು. ವಿದೇಶಕ್ಕೆ ತೆರಳುತ್ತಿರುವ ವ್ಯಕ್ತಿಗಳು. ವಿದೇಶದಿಂದ ಆಗಮಿಸಿದ ಭಾರತೀಯ ವಿಮಾನ//ನಿಲ್ದಾಣ ಬಂದರುಗಳಿಗೆ ಆಗಮಿಸಿದ ಪ್ರಯಾಣಿಕರಿಗೆ ಮಾರ್ಗಸೂಚಿಗಳಿಗಾನುಸಾರವಾಗಿ ಪರೀಕ್ಷೆ ನಡೆಸಬೇಕು.

## ಮತ್ತೊಂದು ಹೊಸ ವೈರಸ್ ಬಗ್ಗೆ ಭಯಾನಕ ಸತ್ಯ ಬಹಿರಂಗ

**ಬೆಂಗಳೂರು:** 2019ರಲ್ಲಿ ಚೀನಾದ ವುಹಾನ್‌ನಲ್ಲಿ ಮೊಟ್ಟ ಮೊದಲ ಬಾರಿಗೆ ಪತ್ತೆಯಾದ ಕೊರೊನಾ ಇದೀಗ ಇಡೀ ವಿಶ್ವದಲ್ಲಿ ತನ್ನ ರಣಕೇಕೆಯನ್ನು ಮುಂದುವರಿಸಿದೆ. ಇದೀಗ ಈ ವುಹಾನ್‌ನ ವಿಜ್ಞಾನಿಗಳು ದಕ್ಷಿಣ ಆಫ್ರಿಕಾದಲ್ಲಿ ಪತ್ತೆಯಾಗಿರುವ ಹೊಸ ರೀತಿಯ ಕೊರೊನಾ ವೈರಸ್ ಬಗ್ಗೆ ಎಚ್ಚರಿಕೆಯನ್ನು ನೀಡಿದ್ದಾರೆ. ಇದು ಅತ್ಯಂತ ವೇಗವಾಗಿ ಹರಡುವುದು ಮಾತ್ರವಲ್ಲದೇ ಹೆಚ್ಚಿನ ಸಾವುಗಳನ್ನು ವರದಿ ಮಾಡುತ್ತಿದೆ ಎಂದು ರಷ್ಯಾದ ಸುದ್ದಿ ವಾಹಿನಿಯು ವರದಿ ಮಾಡಿದೆ. ಹೊಸ ಮಾದರಿಯ ಕೊರೊನಾ ವೈರಸ್ ಓಜಂಅಅತ ನಿಂದ ಸೋಂಕಿಗೆ ಒಳಗಾದ ಪ್ರತಿ ಮೂವರಲ್ಲಿ ಓರ್ವರು ಸಾವನ್ನಪ್ಪುವ ಸಾಧ್ಯತೆ ಅಧಿಕ ಎಂದು ವುಹಾನ್ ವಿಜ್ಞಾನಿಗಳು ಎಚ್ಚರಿಸಿದ್ದಾರೆ. ವರದಿಗಳ ಪ್ರಕಾರ ಇದು ಹೊಸ ವೈರಸ್ ಏನಲ್ಲ. ಈ ವೈರಸ್ ನ್ನು 2012 ಹಾಗೂ 2015ರಲ್ಲಿ ಮಧ್ಯ ಪೂರ್ವ ದೇಶಗಳಲ್ಲಿ ಪತ್ತೆ ಮಾಡಲಾಗಿತ್ತು. ಇದು ಕೊರೊನಾ ವೈರಸ್ ಜೊತೆಯಲ್ಲಿ ಸಾಮ್ಯತೆಯನ್ನು ಹೊಂದಿದೆ. ದಕ್ಷಿಣ ಆಫ್ರಿಕಾದಲ್ಲಿ ಬಾವಲಿಗಳಲ್ಲಿ ಪತ್ತೆಯಾಗಿದೆ ಮತ್ತು ಈ ಪ್ರಾಣಿಗಳಲ್ಲಿ ಮಾತ್ರ ಹರಡುತ್ತದೆ ಎಂದು ಭಾವಿಸಲಾಗಿತ್ತು. ವೆಬ್‌ಸೈಟ್‌ನಲ್ಲಿ ಪ್ರಕಟವಾದ ಹೊಸ ಅಧ್ಯಯನವು ಮತ್ತು ಅದರ ನಿಕಟ ಸಂಬಂಧಿ ಮಾನವರಿಗೆ ಸೋಂಕು ತರುತ್ತದೆ ಎಂದು ಹೇಳಿದೆ. ವುಹಾನ್ ವಿಶ್ವವಿದ್ಯಾನಿಲಯ ಮತ್ತು ಚೈನೀಸ್ ಅಕಾಡೆಮಿ ಆಫ್ ಸೈನ್ಸಸ್‌ನ ಇನ್‌ಸ್ಟಿಟ್ಯೂಟ್ ಆಫ್ ಬಯೋಫಿಸಿಕ್ಸ್‌ನ ಸಂಶೋಧಕರ ಪ್ರಕಾರ, ವೈರಸ್‌ಗೆ ಮಾನವ ಜೀವಕೋಶಗಳಿಗೆ ನುಸುಳಲು ಕೇವಲ ಒಂದು ರೂಪಾಂತರದ ಅಗತ್ಯವಿದೆ. ಕೊರೋನ ವೈರಸ್ ರೋಗಕಾರಕಕ್ಕಿಂತ ವಿಭಿನ್ನವಾಗಿ ಎಸಿಇ 2 ಗ್ರಾಹಕಕ್ಕೆ ಬಂಧಿಸುವ ಕಾರಣ ಕೊರೊನಾ ವೈರಸ್ ಅಪಾಯವನ್ನುಂಟು ಮಾಡುತ್ತದೆ ಎಂದು ಸಂಶೋಧನೆಗಳು ಹೇಳಿವೆ.

## ಸೋಂಕು ತಡೆಯಲು ಪರಿಣಾಮಕಾರಿ ಕ್ರಮ ಕೈಗೊಳ್ಳಿ

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕೋವಿಡ್ ಸೋಂಕು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪರಿಣಾಮಕಾರಿ ರೀತಿಯ ಕ್ರಮಗಳ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತಾ ಗುರುವಾರ ಸೂಚನೆ ನೀಡಿದ್ದಾರೆ.

ಎಲ್ಲಾ ಎಂಟು ವಲಯಗಳಲ್ಲಿ ಕಳೆದ ಒಂದು ವಾರದಿಂದ ಸೋಂಕು ಪ್ರಗತಿಯನ್ನು ಪರಿಶೀಲಿಸಿದ ಬಳಿಕ ಅಧಿಕಾರಿಗಳೊಂದಿಗೆ ನಿನ್ನೆ ಗೌರವ್ ಗುಪ್ತಾ ಅವರು ವರ್ಚುವಲ್ ಸಭೆ ನಡೆಸಿದರು.



"ಎಲ್ಲಾ ವಲಯಗಳಲ್ಲಿ ದಿನ-ದಿನದ ಪ್ರಕರಣಗಳ ಸಂಖ್ಯೆಯಲ್ಲಿ ಶೇ.30 ರಷ್ಟು ಇಳಿಕೆಯಾಗಿರುವುದು ಕಂಡುಬಂದಿದೆ, ಕಳೆದ ವಾರದಲ್ಲಿ ಪಾಸಿಟಿವಿಟಿ ದರ ಶೇ.25 ರಿಂದ ಶೇ.17-20 ರ ನಡುವೆ ಕಂಡು ಬಂದಿದೆ. ಆದರೆ ಬಿಟಿಎಂ ಲೇಔಟ್, ಮಲ್ಲೇಶ್ವರಂ, ಎಚ್ಎಸ್ಆರ್ ಲೇಔಟ್ ಮತ್ತು ಕೋಣನಕುಂಟೆ ವಾರ್ಡ್‌ಗಳಲ್ಲಿ ಹೆಚ್ಚಿನ ಸೋಂಕುಗಳು ಪತ್ತೆಯಾಗಿವೆ. ಆದ್ದರಿಂದ, ಈ ಪ್ರದೇಶಗಳಲ್ಲಿ ಸೋಂಕು ನಿಯಂತ್ರಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಸೂಚಿಸಿದರು.

ಎಲ್ಲಾ ವಲಯಗಳಲ್ಲಿ ಖಂಖಿ ಮತ್ತು RT-PCR ನ ಪಾಸಿಟಿವಿಟಿ ದರಗಳನ್ನು ನಕ್ಷೆ ಮಾಡುವಂತೆ ಹಾಗೂ ನಕ್ಷೆಯಲ್ಲಿ ಪಾಸಿಟಿವಿಟಿ ದರ ಏರಿಕೆಯಾಗಿದ್ದೇ ಆದರೆ, ಕೂಡಲೇ ಈ ಕುರಿತು ವರದಿ ಮಾಡುವಂತೆಯೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಂಕಿತರೊಂದಿಗೆ ಸಂಪರ್ಕದಲ್ಲಿದ್ದವರು, ಹೋಂ ಐಸೋಲೇಷನ್ ನಲ್ಲಿದ್ದವರ ಕ್ವಾರಂಟೈನ್ ಅವಧಿಯನ್ನು 7ನೇ ದಿನಕ್ಕೆ ಅಂತ್ಯಗೊಳಿಸಬೇಕು. ಮೊಬೈಲ್ ಟ್ರಯಜಿಂಗ್ ಯುನಿಟ್ ಗಳು ಒಟ್ಟಾರೆ ಸೋಂಕಿನ ಶೇಕಡಾ 10 ರಿಂದ 15 ರಷ್ಟು ಟ್ರಯಜ್ ಮಾಡುವುದರ ಮೇಲೆ ಕೇಂದ್ರೀಕರಿಸುತ್ತವೆ ಮತ್ತು ಆಸ್ಪತ್ರೆಗಳು ಅಥವಾ ಕೋವಿಡ್ ಕೇರ್ ಸೆಂಟರ್‌ಗಳಿಗೆ ದಾಖಲಿಸಲು ಶಿಫಾರಸು ಮಾಡಲಾದ ಎಲ್ಲಾ ಪ್ರಕರಣಗಳ ದೈಹಿಕ ಪರೀಕ್ಷೆಯನ್ನು ಶಿಫಾರಸು ಮಾಡಿದ ದಿನದಂದೆ ಮಾಡಬೇಕು ಎಂದು ಸೂಚಿಸಿದರು.

ಸಾಕಷ್ಟು ಜನರು ಹೋಂ ಐಸೋಲೇಷನ್ ಗೊಳಗಾಗಿದ್ದು, ಅಗತ್ಯವಿರುವ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆಯನ್ನು ಗುರ್ತಿಸುವಂತೆ ಹಾಗೂ ಶೂನ್ಯ ಸಿಬ್ಬಂದಿಗಳನ್ನು ಹೊಂದಿರುವ ಕೋವಿಡ್ ಕೇಂದ್ರ ಗಳಿಗೆ ಸಿಬ್ಬಂದಿಗಳ ನಿಯೋಜಿಸಬೇಕು ಎಂದು ತಿಳಿಸಿದರು. ಅಲ್ಲದೆ, ಸಭೆಯಲ್ಲಿ, ಎಲ್ಲಾ ನಾಲ್ಕು ವರ್ಗಗಳ ವ್ಯಾಕ್ಸಿನೇಷನ್ ಕವರೇಜ್ (ಮೊದಲ, ಎರಡನೇ ಡೋಸ್, 15-17 ವರ್ಷಗಳವರೆಗೆ ಲಸಿಕೆ ಮತ್ತು ಮುನ್ನೆಚ್ಚರಿಕೆಯ ಡೋಸ್) ಕುರಿತಂತೆಯೂ ಚರ್ಚೆ ನಡೆಸಲಾಯಿತು.

"ಸಂಪರ್ಕಿಸಿದ ಮತ್ತು ಹೋಮ್ ಐಸೋಲೇಶನ್ ಎಂದು ಗುರುತಿಸಲಾದ ಎಲ್ಲಾ ಪ್ರಕರಣಗಳನ್ನು ಏಳನೇ ದಿನದಂದು ಪ್ಲಾಟ್‌ಫಾರ್ಮ್‌ನಲ್ಲಿ ಬಿಡುಗಡೆ ಮಾಡಲಾಗುತ್ತದೆ" ಎಂದು ಅವರು ಹೇಳಿದರು.

## ಸಣ್ ಸುದ್ದಿ

### ಕೊರೊನಾ ಸೋಂಕು ತಗುಲಿದ ಸರ್ಕಾರಿ ನೌಕಕರಿಗೆ ವಿಶೇಷ ರಜೆ

■ ಸಂಭ್ರಮ ಪ್ರಭ

**ಬೆಂಗಳೂರು:** ರಾಜ್ಯ ಸರ್ಕಾರಿ ನೌಕರರು ಕೊರೋನಾ ವೈರಸ್ ಸೋಂಕಿಗೆ ಒಳಗಾದರೆ ಅಂತವರಿಗೆ ಮನೆಯಲ್ಲಿ ಪ್ರತ್ಯೇಕವಾಗಿರಲು ಅಥವಾ ಚಿಕಿತ್ಸೆ ಪಡೆಯಲು ವಿಶೇಷ ಸಾಂದರ್ಭಿಕ ರಜೆ ಪಡೆಯಲು ಅವಕಾಶ ಇದೆ ಎಂದು ಸರ್ಕಾರ ಆದೇಶ ಹೊರಡಿಸಿದೆ. ಸದ್ಯ ರಾಜ್ಯದಲ್ಲಿ ಕೊರೊನಾ ಸೋಂಕಿನ ತೀವ್ರತೆಯು ಇಳಿಮುಖವಾಗಿದ್ದು, ಇದಕ್ಕೆ ತುತ್ತಾದವರು ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಪ್ರಮಾಣದಲ್ಲಿಯೂ ಗಣನೀಯವಾಗಿಯೂ ಇಳಿಮುಖವಾಗುತ್ತಿದೆ. ಒಂದು ವೇಳೆ ರಾಜ್ಯ ಸರ್ಕಾರಿ ನೌಕರರು ಕೋವಿಡ್ ತಗುಲಿದರೆ ಅವರಿಗೆ ಸಂದರ್ಭನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರವು ರಜೆ ಮಂಜೂರು ಮಾಡಬಹುದಾಗಿದೆ. ಇನ್ನು ಸರ್ಕಾರಿ ನೌಕರ ಅಥವಾ ಆತನ ಕುಟುಂಬದ ಸದಸ್ಯರಿಗೆ ಕೋವಿಡ್ ಸೋಂಕಿಗೆ ಒಳಗಾದರೆ, ಅಥವಾ ಸರ್ಕಾರಿ ನೌಕರನು ವಾಸಿಸುವ ಪ್ರದೇಶದಲ್ಲಿ ಕಂಟೇನ್ಮೆಂಟ್ ಪ್ರದೇಶವೆಂದು ಘೋಷಿಸಿದರೆ ಅಂತ ಪ್ರದೇಶದಲ್ಲಿ ಸಂಚಾರಕ್ಕೆ ನಿರ್ಬಂಧ ಹೇರಿದ್ದಾರೆ ಅಂತಹ ಸರ್ಕಾರಿ ನೌಕರರಿಗೆ ಗರಿಷ್ಠ 7 ದಿನಗಳ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು.

### ನಿರ್ದೇಶಕ, ನಟ ಕಟ್ಟೆ ರಾಮಚಂದ್ರ ಇನ್ನಿಲ್ಲ

■ ಸಂಭ್ರಮ ಪ್ರಭ

**ಬೆಂಗಳೂರು:** ರಾಜ್ಯ ಹಾಗೂ ರಾಷ್ಟ್ರಪ್ರಶಸ್ತಿ ವಿಜೇತ ಸಿನಿಮಾ ನಿರ್ದೇಶಕ, ನಟ ಕಟ್ಟೆ ರಾಮಚಂದ್ರ ಅವರು ಶುಕ್ರವಾರ ಬೆಳಗ್ಗೆ ನಿಧನರಾದರು. ಇವರಿಗೆ 75 ವರ್ಷ ವಯಸ್ಸಾಗಿತ್ತು. ಅನಾರೋಗ್ಯದಿಂದ ಬಳಲುತ್ತಿದ್ದ ಇವರು ಬೆಂಗಳೂರಿನ ಸೇಂಟ್ ಜೋನ್ಸ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು. ಇಂದು ಮಧ್ಯಾಹ್ನ ಚಾಮರಾಜಪೇಟೆ ರುದ್ರಭೂಮಿಯಲ್ಲಿ ಅಂತ್ಯ ಸಂಸ್ಕಾರ ನೆರವೇರಲಿದೆ. 1947ರ ಫೆಬ್ರವರಿ 15ರಂದು ಜನಿಸಿದ್ದ ಕಟ್ಟೆ ರಾಮಚಂದ್ರ ಅವರು ನಿರ್ದೇಶನ, ನಿರ್ಮಾಣ, ನಟನೆಯಲ್ಲೂ ತೊಡಗಿಸಿಕೊಂಡಿದ್ದರು. ತಬ್ಬಲಿ ನೀನಾದೆ ಮಗನೆ, ಒಂದು ಪ್ರೇಮದ ಕಥೆ, ಗೀಜಗನ ಗೂಡು, ನಮ್ಮಮ್ಮ ತಾಯಿ ಅಣ್ಣಮ್ಮ, ಗ್ರಹಣ, ಪ್ರೇಮ ಮತ್ಸರ, ಅಂತರಾಳ, ಕಾಡಿನ ಬೆಂಕಿ, ಬಿಂಬ ಸೇರಿದಂತೆ ಚಿತ್ರಗಳಲ್ಲಿ ನಟಿಸಿದ್ದಾರೆ. ಕಟ್ಟೆ ರಾಮಚಂದ್ರರು ನಿರ್ದೇಶಿಸಿದ 'ಅರಿವು' ಚಿತ್ರಕ್ಕೆ ರಾಷ್ಟ್ರ ಮತ್ತು ರಾಜ್ಯ ಮಟ್ಟದ ಪ್ರಶಸ್ತಿ ಬಂದಿದೆ. 'ವೈಶಾಖದ ದಿನಗಳು' ಸಿನಿಮಾ ಕೂಡ ಇವರ ನಿರ್ದೇಶನದಲ್ಲೇ ತೆರೆಕಂಡಿತ್ತು.

### ಶ್ರೀಪಾದರಾಜ ಮಠದ ಹಿರಿಯ ಶ್ರೀ ಕೇಶವನಿಧಿ ತೀರ್ಥರ ನಿಧನ


■ ಸಂಭ್ರಮ ಪ್ರಭ

**ಕೋಲಾರ:** ಜಿಲ್ಲೆಯ ಮುಳಬಾಗಿಲು ಪಟ್ಟಣದಲ್ಲಿರುವ ಶ್ರೀ ಪಾದರಾಜ ಮಠದ ಹಿರಿಯ ಶ್ರೀಗಳಾದ ಶ್ರೀಶ್ರೀ ಕೇಶವನಿಧಿ ತೀರ್ಥರು ಇಂದು ಬೆಳಗ್ಗೆ (ಜ.28) ನಿಧನರಾದರು. ಕಳೆದ ಕೆಲವು ತಿಂಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದು. ಈ ಹಿನ್ನಲೆಯಲ್ಲಿ ಕಳೆದ ಆರು ತಿಂಗಳ ಹಿಂದಷ್ಟೇ ಕಿರಿಯ ಶ್ರೀಗಳಾದ ಸುಜಯ ನಿಧಿ ತೀರ್ಥಸ್ವಾಮಿಗಳಿಗೆ ಅಧಿಕಾರ ವಹಿಸಿಕೊಡಲಾಗಿತ್ತು ಬೆಂಗಳೂರಿನ ಚಾಮರಾಜಪೇಟೆಯ ಮಠದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಮಧ್ಯಾಹ್ನ 12 ಗಂಟೆ ನಂತರ ಮುಳಬಾಗಿಲು ನರಸಿಂಹ ತೀರ್ಥದ ಶ್ರೀಪಾದರಾಜ ಮಠದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಮಧ್ಯಾಹ್ನ 2 ಗಂಟೆಯ ನಂತರ ಬೃಂದಾವನ ಕಾರ್ಯ ನೆರವೇರಲಿದೆ. ಶ್ರೀಗಳು ಕಳೆದ 15 ವರ್ಷದಿಂದ ಮಠದ ಹಿರಿಯ ಶ್ರೀಗಳಾಗಿದ್ದರ.

## ರವಿ ಚನ್ನಣ್ಣನವರ್ ಪೊಲೀಸ್ ಅಧಿಕಾರಿ ಈಗ ವಾಲ್ಮೀಕಿ ನಿಗಮದ ಎಂಡಿ

■ ಸಂಭ್ರಮ ಪ್ರಭ

**ಬೆಂಗಳೂರು:** ಸಿಐಡಿ ಎಸ್ಪಿ ರವಿ ಡಿ ಚನ್ನಣ್ಣನವರ್ ಸೇರಿದಂತೆ 9 ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಗುರುವಾರ ಆದೇಶ ಹೊರಡಿಸಿದೆ. ರವಿ ಚನ್ನಣ್ಣನವರ್ ಅವರಿಗೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಜಾತಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನಿಯೋಜಿಸಲಾಗಿದೆ. ಸಿಐಡಿ ಎಸ್ಪಿ ಭೀಮಾಶಂಕರ್ ಗುಳೇದ್ ಅವರನ್ನು ಬೆಂಗಳೂರು ಪೂರ್ವ ವಲಯದ ಡಿಸಿಪಿಯಾಗಿ ವರ್ಗಾಯಿಸಲಾಗಿದೆ. ಎಸಿಬಿ ಎಸ್ಪಿ ಅಬ್ದುಲ್ ಅಹಾದ್ ಅವರನ್ನು ಕೆಎಸ್‌ಆರ್‌ಟಿಸಿಯ ಭದ್ರತೆ ಮತ್ತು ವಿಚಕ್ಷಣಾ ದಳದ ನಿರ್ದೇಶಕರನ್ನಾಗಿ ವರ್ಗಾಯಿಸಲಾಗಿದೆ. ಕೊಪ್ಪಳ ಎಸ್ಪಿ ಟಿ. ಶ್ರೀಧರ್ ಅವರನ್ನು ಡಿಸಿಆರ್ ಎಸ್ಪಿಯಾಗಿ ವರ್ಗಾಯಿಸಲಾಗಿದೆ. ಎಸಿಬಿ ಎಸ್ಪಿ ಅರುನಾಂಗ್ಶು ಗಿರಿ ಅವರನ್ನು ಕೊಪ್ಪಳ ಎಸ್ಪಿಯಾಗಿ ವರ್ಗಾಯಿಸಲಾಗಿದೆ. ಕಾರಾಗೃಹ ಇಲಾಖೆಯ ಎಸ್ಪಿ ಟಿ.ಪಿ. ಶಿವಕುಮಾರ್ ಅವರನ್ನು ಚಾಮರಾಜನಗರ ಎಸ್ಪಿಯಾಗಿ ವರ್ಗಾವಣೆ ಮಾಡಲಾಗಿದೆ. ಚಾಮರಾಜನಗರ ಎಸ್ಪಿಯಾಗಿದ್ದ ದಿವ್ಯಾ ಸಾರಾ ಥಾಮಸ್ ಅವರನ್ನು ಮೈಸೂರು ಪೊಲೀಸ್ ಅಕಾಡೆಮಿಯ ಉಪ ನಿರ್ದೇಶಕರನ್ನಾಗಿ ವರ್ಗಾಯಿಸಲಾಗಿದೆ. ಸ್ಥಳ ನಿರೀಕ್ಷೆಯಲ್ಲಿದ್ದ ಐಪಿಎಸ್ ಅಧಿಕಾರಿ ಡೆಕ್ಕಾ ಸುರೇಶ್ ಬಾಬು ಅವರನ್ನು ಬೀದರ್ ಎಸ್ಪಿಯಾಗಿ ವರ್ಗಾಯಿಸಲಾಗಿದೆ. ಬೀದರ್ ಎಸ್ಪಿ ನಾಗೇಶ್ ಡಿಎಲ್ ಅವರನ್ನು ಬೆಂಗಳೂರು ಸಿಐಡಿ ಎಸ್ಪಿಯಾಗಿ ವರ್ಗಾಯಿಸಲಾಗಿದೆ.



## ಮಾಜಿ ಸಂಸದನ ಮಗನ ಮೇಲೆ ಹಲ್ಲೆ ವಿಧಾನಸೌಧ ಠಾಣೆಯಲ್ಲಿ ಎಫ್‌ಐಆರ್

■ ಸಂಭ್ರಮ ಪ್ರಭ

**ಬೆಂಗಳೂರು:** ಮಾಜಿ ಸಂಸದ ಮಂಜುನಾಥ್ ಕುನ್ನೂರ ಅವರ ಮಗ ಚಂದ್ರಶೇಖರ್ ಹಾಗೂ ಸ್ನೇಹಿತನ ಮೇಲೆ ಹಲ್ಲೆ ನಡೆದಿದ್ದು, ಈ ಬಗ್ಗೆ ವಿಧಾನಸೌಧ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 'ಜ. 23ರಂದು ರಾತ್ರಿ ನಡೆದಿರುವ ಘಟನೆ ಬಗ್ಗೆ ಚಂದ್ರಶೇಖರ್ ಹೇಳಿಕೆ ನೀಡಿದ್ದಾರೆ. ಆರೋಪಿಗಳು ಎನ್ನಲಾದ ಚೇತನ್ ಹಾಗೂ ಪ್ರಶಾಂತ್ ಎಂಬುವವರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿದೆ' ಎಂದು ಪೊಲೀಸ್ ಮೂಲಗಳು ಹೇಳಿವೆ. 'ಉದ್ಯಮಿಯೂ ಆಗಿರುವ ಚಂದ್ರಶೇಖರ್, ಸ್ನೇಹಿತನ ಜೊತೆ ಊಟಕ್ಕೆಂದು ಹೋಟೆಲೊಂದಕ್ಕೆ ಹೋಗಿದ್ದರು. ಊಟದ ಟೇಬಲ್ ಬಳಿ ಕುಳಿತು ಮಾತನಾಡುತ್ತಿದ್ದರು. ಪಕ್ಕದ ಟೇಬಲ್ನಲ್ಲಿ ಕುಳಿತಿದ್ದ ಆರೋಪಿಗಳು, ಊಟ ಮಾಡದಂತೆ ಎಚ್ಚರಿಕೆ ನೀಡಿ ಜಗಳ ತೆಗೆದಿದ್ದರು.' 'ಚಂದ್ರಶೇಖರ್ ಹಾಗೂ ಸ್ನೇಹಿತನನ್ನು ಸಮೀಪದಲ್ಲೇ ಇದ್ದ ಮತ್ತೊಂದು ಬಾರ್ ಆಂಡ್ ರೆಸ್ಟೋರೆಂಟ್ಗೆ ಆರೋಪಿಗಳು ಎಳೆದೊಯ್ದಿದ್ದರು. ಅಲ್ಲಿಯೇ ಚಂದ್ರಶೇಖರ್ ಕಪಾಳಕ್ಕೆ ಹೊಡೆದು, ಹಲ್ಲೆ ಮಾಡಿ ಅಕ್ರಮ ಬಂಧನದಲ್ಲಿಟ್ಟಿದ್ದರು. ಅಲ್ಲಿಂದ ತಪ್ಪಿಸಿಕೊಂಡು ಬಂದು ಚಂದ್ರಶೇಖರ್ ದೂರು ನೀಡಿದ್ದಾರೆ' ಎಂದೂ ಮೂಲಗಳು ತಿಳಿಸಿವೆ. 'ಕರ್ಫ್ಯೂ ಜಾರಿಯಲ್ಲಿದ್ದರೂ ವಹಿವಾಟು ನಡೆಸುತ್ತಿದ್ದ ಆರೋಪದಡಿ ಬಾರ್ ಆಂಡ್ ರೆಸ್ಟೋರೆಂಟ್ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಹಲ್ಲೆ ಪ್ರಕರಣದ ಆರೋಪಿಗಳು ತಲೆಮರೆಸಿಕೊಂಡಿದ್ದಾರೆ. ಹಲ್ಲೆಗೆ ಕಾರಣವೇನು ಎಂಬುದು ಸದ್ಯಕ್ಕೆ ಗೊತ್ತಾಗಿಲ್ಲ' ಎಂದೂ ಮೂಲಗಳು ಹೇಳಿವೆ.

## ಆಮ್ಲೆಟ್‌ಗಾಗಿ ಆರಂಭವಾದ ಜಗಳ ಕೊಲೆಯಲ್ಲಿ ಅಂತ್ಯ

■ ಸಂಭ್ರಮ ಪ್ರಭ

**ತುಮಕೂರು:** ಆಮ್ಲೆಟ್ ಗಾಗಿ ಆರಂಭವಾದ ಜಗಳ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ನಡೆದಿದೆ. ಈ ಘಟನೆ ಜಿಲ್ಲೆಯ ಹುಲಿಯೂರುದುರ್ಗ ಡಿ. ಹೊಸಹಳ್ಳಿಯಲ್ಲಿ ನಡೆದಿದ್ದು, ಅಂಜನಪ್ಪ ಎಂಬ ವ್ಯಕ್ತಿಯೇ ಕೊಲೆಯಾಗಿದ್ದಾನೆ.

ಕೊಲೆ ಮಾಡಿರುವ ಗಂಗರಾಜು ಹಾಗೂ ಅಂಜನಪ್ಪ ಇಬ್ಬರು ಸೇರಿಕೊಂಡು ಎಣ್ಣೆ ಪಾರ್ಟಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಆಮ್ಲೆಟ್ ತಿನ್ನುವ ವಿಚಾರಕ್ಕೆ ಇಬ್ಬರ ಮಧ್ಯೆ ಜಗಳ ಆರಂಭವಾಗಿದೆ. ಆ ಸಂದರ್ಭದಲ್ಲಿ ಅಂಜನಪ್ಪ ಮಚ್ಚಿನಿಂದ ಗಂಗರಾಜು ಮೇಲೆ ಹಲ್ಲೆ ನಡೆಸಿದ್ದಾನೆ.

ಘಟನೆಯಲ್ಲಿ ಗಾಯಗೊಂಡಿದ್ದ ಗಂಗರಾಜು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾನೆ. ಆ ನಂತರ ಹೇಗಾದರೂ ಮಾಡಿ ಅಂಜನಪ್ಪನನ್ನು ಮುಗಿಸಬೇಕು ಎಂದು ಸಂಚು ರೂಪಿಸಿದ್ದಾನೆ. ಆಗ ಆತನಿಗೆ ಸ್ನೇಹಿತ ವಿಜಯಕುಮಾರ್ ಸಹಾಯ ಮಾಡಲು ಮುಂದಾಗಿದ್ದಾನೆ. ಸೈಕಲ್ ನಲ್ಲಿ ತೆರಳುತ್ತಿದ್ದ ಅಂಜನಪ್ಪನನ್ನು ಅಡ್ಡಗಟ್ಟಿ ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿದ್ದಾರೆ. ನಂತರ ಮೃತ ದೇಹವನ್ನು ಕೆರೆಗೆ ಎಸೆದು ಪರಾರಿಯಾಗಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿ, ದೂರು ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಗಂಗರಾಜು(26) ಹಾಗೂ ವಿಜಯಕುಮಾರ್(25) ಎಂಬುವವರನ್ನು ಬಂಧಿಸಿದ್ದಾರೆ.

## ಮೂಲೆ ನಿವೇಶನಕ್ಕೆ ಬದಲಿ ನಿವೇಶನ!

■ ಸಂಭ್ರಮ ಪ್ರಭ

**ಬೆಂಗಳೂರು:** ಬದಲಿ ನಿವೇಶನದ ರೂಪದಲ್ಲಿ ಮೂಲೆ ನಿವೇಶನವನ್ನು ಹಂಚಿಕೆ ಮಾಡುವ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಿರುವ ಆರೋಪದ ಮೇರೆಗೆ ಪ್ರಾಧಿಕಾರದಲ್ಲಿ ಈ ಹಿಂದೆ ಉಪಕಾರ್ಯದರ್ಶಿ‌2 ಆಗಿ ಕಾರ್ಯನಿರ್ವಹಿಸಿದ್ದ ದಯಾನಂದ ಭಂಡಾರಿ, ದಕ್ಷಿಣ ವಲಯದಲ್ಲಿ ಕಾರ್ಯಪಾಲಕ ಎಂಜಿನಿಯರ್ (ಇ.ಇ) ಆಗಿದ್ದ ಎನ್.ವಿಶ್ವನಾಥ್ ಹಾಗೂ ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ) ಆಗಿದ್ದ ಎಚ್.ಎಸ್.ಮಂಜುನಾಥ್ ಅವರು ಭ್ರಷ್ಟಾಚಾರ ನಿಗ್ರಹ ದಳದ (ಎಸಿಬಿ) ವಿಚಾರಣೆಯ ತೂಗುಗತ್ತಿ ಎದುರಿಸುತ್ತಿದ್ದಾರೆ. ನಿಯಮಗಳನ್ನು ಮೀರಿ ಮೂಲೆ ನಿವೇಶನವನ್ನು ಬದಲಿ ನಿವೇಶನದ ರೂಪದಲ್ಲಿ ಹಂಚಿಕೆ ಮಾಡಿದ್ದ ಬಗ್ಗೆ ವೇಣುಗೋಪಾಲಕೃಷ್ಣ ಎಂಬುವವರು ಎಸಿಬಿಗೆ ದೂರು ಸಲ್ಲಿಸಿದ್ದರು. ಈ ಅರ್ಜಿಯಲ್ಲಿರುವ ಆರೋಪಗಳನ್ನು ಪ್ರಾಧಿಕಾರದ ವಿಶೇಷ ಕಾರ್ಯಪಡೆ ಮತ್ತು ವಿಜಿಲೆನ್ಸ್ ವಿಭಾಗವು ಆಂತರಿಕ ತನಿಖೆಗೆ ಒಳಪಡಿಸಿತ್ತು. ಈ ಮೂವರು ಅಧಿಕಾರಿಗಳನ್ನು ಎಸಿಬಿಯಿಂದ ವಿಚಾರಣೆ / ತನಿಖೆ ನಡೆಸಲು 1988ರ ಭ್ರಷ್ಟಾಚಾರ ತಡೆ ಕಾಯ್ದೆಯ ನಿಯಮ 17(ಎ) ಅನ್ವಯ ಎಸಿಬಿಗೆ ಅನುಮತಿ ನೀಡಬಹುದು ಎಂದು ಬಿಡಿಎ ಆಯುಕ್ತ ಎಂ.ಬಿ.ರಾಜೇಶ ಗೌಡ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಿದ್ದಾರೆ.




'ಬಿಡಿಎಗೆ ನಷ್ಟ ಉಂಟು ಮಾಡಿರುವ ಅಧಿಕಾರಿಗಳ ವಿರುದ್ಧ ಎಸಿಬಿ ವಿಚಾರಣೆಗೆ ಅನುಮತಿ ನೀಡುವ ಬಗ್ಗೆ ಬಿಡಿಎ ಮಾಡಿರುವ ಶಿಫಾರಸುಗಳನ್ನು ಮುಖ್ಯಮಂತ್ರಿ ಅವರಿಗೆ ಸಲ್ಲಿಸಿದ್ದೇವೆ. ಅವರಿಂದ ಒಪ್ಪಿಗೆ ಸಿಕ್ಕ ತಕ್ಷಣವೇ, ಕೆಎಎಸ್ ಅಧಿಕಾರಿಗಳನ್ನು ಎಸಿಬಿಯಿಂದ ವಿಚಾರಣೆ ಒಳಪಡಿಸುವ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಕೋರುತ್ತೇವೆ.
**– ರಾಕೇಶ್ ಸಿಂಗ್** ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ


**ಏನಿದು ಪ್ರಕರಣ?:** ಶ್ರೀನಿವಾಸಗೌಡ ಅವರಿಗೆ ಬನಶಂಕರಿ ಬಡಾವಣೆಯ ಆರನೇ ಹಂತದ 4ನೇ ಬ್ಲಾಕ್‌ನಲ್ಲಿ 12ಥ18 ಮೀಟರ್ ಅಳತೆಯ ನಿವೇಶನವನ್ನು (ಸಂಖ್ಯೆ 927) ಬಿಡಿಎ 2003–04ರಲ್ಲಿ ಹಂಚಿಕೆ ಮಾಡಿತ್ತು. ಇದು ಮೂಲೆ ನಿವೇಶನವಾಗಿದ್ದರಿಂದ ಹಂಚಿಕೆಯನ್ನು ರದ್ದುಪಡಿಸಿದ್ದ ಬಿಡಿಎ, ಅದೇ ಬಡಾವಣೆಯ 4ನೇ ಬಿ ಬ್ಲಾಕ್‌ನಲ್ಲಿ ಅಷ್ಟೇ ವಿಸ್ತೀರ್ಣದ ಬದಲಿ ನಿವೇಶನವನ್ನು (ಸಂಖ್ಯೆ 1116ಎ) 2004ರ ನ.2ರಂದು ಹಂಚಿಕೆ ಮಾಡಿತ್ತು.

ಇದಾಗಿ 10 ವರ್ಷಗಳ ನಂತರ (2015ರ ನ.3ರಂದು) ಶ್ರೀನಿವಾಸ ಗೌಡ ಅವರು 'ತನಗೆ ಮಂಜೂರಾದ ನಿವೇಶನವು ಕಲ್ಲುಬಂಡೆಗಳಿಂದ ಕೂಡಿದೆ. ಇದು ವಾಸ ಯೋಗ್ಯವಾಗಿಲ್ಲದ ಕಾರಣ ಮತ್ತೆ ಬದಲಿ ನಿವೇಶನವನ್ನು ಹಂಚಿಕೆ ಮಾಡಬೇಕು' ಎಂದು ಕೋರಿ ಬಿಡಿಎ ಆಯುಕ್ತರಿಗೆ ಅರ್ಜಿ ಸಲ್ಲಿಸಿದ್ದರು.

## ರಸ್ತೆಗುಂಡಿ: ಎಂಜಿನಿಯರ್ ಜೈಲಿಗೆ ಕಳಿಸಿದರೆ ಬುದ್ದಿ ಬರಲಿದೆ- ಹೈಕೋರ್ಟ್

■ ಸಂಭ್ರಮ ಪ್ರಭ

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವ್ಯಾಪ್ತಿಯಲ್ಲಿನ ರಸ್ತೆ ಗುಂಡಿ ಮುಚ್ಚಲು ವಿಫಲವಾಗಿರುವ ಪಾಲಿಕೆಯ ಎಂಜಿನಿಯರ್‌ಗಳನ್ನು ಜೈಲಿಗೆ ಕಳಿಸಿದರೆ ಬುದ್ಧಿ ಬರುತ್ತದೆ' ಎಂದು ಹೈಕೋರ್ಟ್ ಕಠಿಣ ಎಚ್ಚರಿಕೆ ನೀಡಿದೆ.



ಈ ಕುರಿತಂತೆ ಕೋರಮಂಗಲದ ವಿಜಯ್ ಮೆನನ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಋತುರಾಜ್ ಅವಸ್ಥಿ ನೇತೃತ್ವದ ವಿಭಾಗೀಯ ನ್ಯಾಯಪೀಠ, 'ಫೆಬ್ರುವರಿ 7ಕ್ಕೆ ಪಾಲಿಕೆಯ ಮುಖ್ಯ ಎಂಜಿನಿಯರ್ ಕೋರ್ಟ್‌ಗೆ ಖುದ್ದು ಹಾಜರಾಗಬೇಕು ಮತ್ತು ಗುಂಡಿ ಮುಚ್ಚುವ ಬಗ್ಗೆ ಹೊಸ ಪ್ರಮಾಣಪತ್ರ ಸಲ್ಲಿಸಬೇಕು' ಎಂದು ತಾಕೀತು ಮಾಡಿದೆ.

'ಸಾಕಷ್ಟು ಸಮಯ ನೀಡಿದರೂ ತೃಪ್ತಿಕರ ಕೆಲಸ ನಡೆದಿಲ್ಲ. ಬೆಂಗಳೂರಿನ ರಸ್ತೆಗಳ ನಿರ್ವಹಣೆಯಲ್ಲಿ ಪಾಲಿಕೆ ವಿಫಲವಾಗಿದೆ. ಆದ್ದರಿಂದ, ಈ ಹೊಣೆಯನ್ನು ಬೇರೆ ಏಜೆನ್ಸಿಗೆ ನೀಡಿ ಎಂದು ಸರ್ಕಾರಕ್ಕೆ ಆದೇಶಿಸಬೇಕಾಗುತ್ತದೆ' ಎಂದು ಬಿಬಿಎಂಪಿಗೆ ಎಚ್ಚರಿಸಿದೆ. 'ಪಾಲಿಕೆ ನೀಡಿರುವ ಮಾಹಿತಿಯಂತೆ 30 ಕಿ.ಮೀ ಉದ್ದದ ಪ್ರಮುಖ ರಸ್ತೆಗಳು ಮತ್ತು 482 ಕಿ.ಮೀ ಉಪ ರಸ್ತೆಗಳು ಗುಂಡಿ ಮುಕ್ತವಾಗಿಲ್ಲ. ಇದನ್ನು ಅಳೆಯಲು ಯಾವ ತಂತ್ರಜ್ಞಾನ ಬಳಸುತ್ತಿದ್ದೀರಿ? ಯಾವ ತಜ್ಞರ ಸಲಹೆ ಪಡೆಯಲಾಗುತ್ತಿದೆ ಎಂದು ಬಗ್ಗೆಯೂ ವಿವರ ಇಲ್ಲ. ಇಂತಹ ವರದಿಯನ್ನು ಕೋರ್ಟ್ ಒಪ್ಪಲಾಗದು' ಎಂದು ಬಿಬಿಎಂಪಿ ನೀಡಿದ ವರದಿಯನ್ನು ನ್ಯಾಯಪೀಠ ಸಾರಾಸಗಟಾಗಿ ತಿರಸ್ಕರಿಸಿದೆ.

'ಇವತ್ತು ರಸ್ತೆ ರಿಪೇರಿ ಮಾಡಿದರೆ ನಾಳೆ ಪುನಃ ಅಗೆಯಲಾಗುತ್ತದೆ. ಇದರಿಂದ ಪಾಲಿಕೆ ಮತ್ತು ಇತರೆ ನಗರಾಡಾಳಿತ ಸಂಸ್ಥೆಗಳ ನಡುವೆ ಸಮನ್ವಯತೆ ಇಲ್ಲ ಎಂದು ಕಾಣುತ್ತದೆ' ಎಂದು ನ್ಯಾಯಪೀಠ ಅಸಮಾಧಾನ ವ್ಯಕ್ತಪಡಿಸಿದೆ.

ಜಾಹೀರಾತಿಗಾಗಿ ಸಂಪರ್ಕಿಸಿ 9844344445 080-23482445 sambramaprabha@gmail.com

## ಸಣ್ ಸುದ್ದಿ

### ಅಪೆಕ್ಸ್, ಡಿಸಿಸಿ ಬ್ಯಾಂಕ್ ನಿಯೋಗ ಸಿಎಂ ಭೇಟಿ

■ ಸಂಭ್ರಮ ಪ್ರಭ

**ಬೆಂಗಳೂರು:** ಸಹಕಾರ ಸಚಿವರಾದ ಎಸ್.ಟಿ.ಸೋಮಶೇಖರ್ ಅವರ ನೇತೃತ್ವದಲ್ಲಿ ಅಪೆಕ್ಸ್ ಬ್ಯಾಂಕಿನ ಅಧ್ಯಕ್ಷರು ಹಾಗೂ ನಿರ್ದೇಶಕರುಗಳು, ಡಿಸಿಸಿ ಬ್ಯಾಂಕುಗಳ ಅಧ್ಯಕ್ಷರುಗಳನ್ನು ಒಳಗೊಂಡ ನಿಯೋಗ ಗುರುವಾರ ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಅವರನ್ನು ಭೇಟಿ ಮಾಡಿತು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಗಣಕೀಕರಣಕ್ಕೆ ಸಂಬಂಧಪಟ್ಟಂತೆ ಹಾಗೂ ಕೃಷಿ ಸಾಲ ವಿತರಣೆ ವಿಷಯಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳ ಜೊತೆಯಲ್ಲಿ ಪ್ರಸ್ತಾಪಿಸಲಾಯಿತು. ಸಭೆಯಲ್ಲಿ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಪ್ರಸಾದ್, ಸಹಕಾರ ಸಂಘಗಳ ನಿಬಂಧಕರಾದ ಎಸ್.ಜಿಯಾವುಲ್ಲಾ, ಸಹಕಾರ ಸಂಘಗಳ ಅಪರ ನಿಬಂಧಕರು (ಪತ್ತು) ಎ.ಸಿ.ದಿವಾಕರ್ ಹಾಗೂ ಅಪೆಕ್ಸ್ ಬ್ಯಾಂಕ್ ನ ವ್ಯವಸ್ಥಾಪಕ ನಿರ್ದೇಶಕರಾದ ಸಿ.ಎನ್.ದೇವರಾಜ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

### ಪರೀಕ್ಷೆ ಮುಗಿದ ಒಂದು ಗಂಟೆಯಲ್ಲೇ ಫಲಿತಾಂಶ

■ ಸಂಭ್ರಮ ಪ್ರಭ

**ಬೆಂಗಳೂರು:** ಪರೀಕ್ಷೆ ಮುಗಿದ ಒಂದೇ ಗಂಟೆಯಲ್ಲಿ ಫಲಿತಾಂಶ ನೀಡುವ ಮೂಲಕ ಬೆಂಗಳೂರು ವಿಶ್ವವಿದ್ಯಾಲಯ ದಾಖಲೆ ನಿರ್ಮಿಸಿದೆ.



ಬೆಂಗಳೂರು ವಿವಿ ವ್ಯಾಪ್ತಿಯಲ್ಲಿರುವ ಯುವಿಸಿಇ ಕಂಪ್ಯೂಟರ್ ಸೈನ್ಸ್ ಆಯಂಡ್ ಇಂಜಿನಿಯರಿಂಗ್ ಕೋರ್ಸ್‌ನಲ್ಲಿ 72 ವಿದ್ಯಾರ್ಥಿಗಳ ಪಿಎಚ್.ಡಿ ಕೋರ್ಸ್ ವರ್ಕ್ ಪರೀಕ್ಷೆಯು ಗುರುವಾರ ಮುಕ್ತಾಯವಾಗಿದ್ದು, ಪರೀಕ್ಷೆ ಮುಗಿದ ಒಂದು ಗಂಟೆಯಲ್ಲೇ ಫಲಿತಾಂಶ ನೀಡಿದೆ. ಈವರೆಗೆ ಕೇವಲ ಒಂದು ಗಂಟೆಯಲ್ಲಿ ಫಲಿತಾಂಶ ನೀಡಿದ್ದೇ ಇಲ್ಲ. ನಾವು ನೀಡಿದ್ದೇವೆ. ಇದರಿಂದ ವಿದ್ಯಾರ್ಥಿಗಳಿಗೂ ಖುಷಿಯಾಗಿದೆ ಎಂದು ಕುಲಪತಿ ಡಾ.ಕೆ.ಆರ್ .ವೇಣುಗೋಪಾಲ್ ತಿಳಿಸಿದ್ದಾರೆ.

### 3ನೇ ತ್ರೈಮಾಸಿಕದಲ್ಲಿ ಕೆನರಾ ಬ್ಯಾಂಕ್ ನಿವ್ವಳ ಲಾಭ 1,502 ಕೋಟಿ

■ ಸಂಭ್ರಮ ಪ್ರಭ

**ನವದೆಹಲಿ:** ಸರ್ಕಾರಿ ಸ್ವಾಮ್ಯದ ಕೆನರಾ ಬ್ಯಾಂಕ್ ಪ್ರಸಕ್ತ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ 1,502 ಕೋಟಿ ನಿವ್ವಳ ಲಾಭ ಗಳಿಸಿದೆ. ಹಿಂದಿನ ಹಣಕಾಸು ವರ್ಷದ ಇದೇ ಅವಧಿಯಲ್ಲಿ ಬ್ಯಾಂಕ್ 696



ಕೋಟಿ ನಿವ್ವಳ ಲಾಭ ಗಳಿಸಿತ್ತು. ಆ ಅವಧಿಗೆ ಹೋಲಿಸಿದರೆ ಈ ಬಾರಿ ಲಾಭವು ಎರಡು ಪಟ್ಟು ಹೆಚ್ಚಾಗಿದೆ. ಭವಿಷ್ಯದಲ್ಲಿ ಎದುರಾಗಬಹುದಾದ ಆರ್ಥಿಕ ನಷ್ಟ ಭರಿಸಲು ತೆಗೆದಿರಿಸುವ ಮೊತ್ತವು 4,210 ಕೋಟಿಯಿಂದ 2,245 ಕೋಟಿಗೆ ಇಳಿಕೆ ಆಗಿದೆ. ಹೀಗಾಗಿಯೇ ನಿವ್ವಳ ಲಾಭದಲ್ಲಿ ಹೆಚ್ಚಳ ಆಗಿದೆ ಎಂದು ಬ್ಯಾಂಕ್ ಹೇಳಿದೆ. ಬ್ಯಾಂಕ್‌ನ ವರಮಾನವು 21,365 ಕೋಟಿಯಿಂದ 21,312 ಕೋಟಿಗೆ ಅಲ್ಪ ಇಳಿಕೆ ಕಂಡಿದೆ ಎಂದು ಷೇರುಪೇಟೆಗೆ ಮಾಹಿತಿ ನೀಡಿದೆ. ಬ್ಯಾಂಕ್‌ನ ವಸೂಲಾಗದ ಸಾಲದ ಸರಾಸರಿ ಪ್ರಮಾಣವು (ಎನ್‌ಪಿಎ) ಶೇ 7.46ರಿಂದ ಶೇ 7.80ಕ್ಕೆ ಏರಿಕೆ ಆಗಿದೆ. ನಿವ್ವಳ ಎನ್‌ಪಿಎ ಶೇ 2.64ರಿಂದ ಶೇ 2.86ಕ್ಕೆ ಏರಿಕೆ ಆಗಿದೆ.

# ಸಶಕ್ತ ಕರ್ನಾಟಕ ನಿರ್ಮಾಣಕ್ಕೆ ಸರ್ಕಾರ ಬದ್ಧ

## ತಾವು ಅಧಿಕಾರ ಸ್ವೀಕರಿಸಿ 6 ತಿಂಗಳಾದ ಪ್ರಯುಕ್ತ ವಿಶೇಷ ಕಾರ್ಯಕ್ರಮದಲ್ಲಿ ಸಿಎಂ ಬೊಮ್ಮಾಯಿ ಹೇಳಿಕೆ

■ ಸಂಭ್ರಮ ಪ್ರಭ

**ಬೆಂಗಳೂರು:** ಸಚಿವರನ್ನು ಟೀಂ ಕರ್ನಾಟಕ ಎಂದು ಕರೆದಿರುವ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು, ನಾನು ಈ ಟೀಂನ ಸದಸ್ಯನಾಗಿದ್ದು, ನಮ್ಮ ಟೀಂ ಸಶಕ್ತ ಕರ್ನಾಟಕ ನಿರ್ಮಾಣಕ್ಕೆ ಕೆಲಸ ಮಾಡುತ್ತಿದೆ ಎಂದು ಶುಕ್ರವಾರ ಹೇಳಿದ್ದಾರೆ.

ತಮ್ಮ ಸರ್ಕಾರ 6 ತಿಂಗಳು ಪೂರೈಸಿದ ಹಿನ್ನೆಲೆ ಬ್ಯಾಕ್ವೆಂಟ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವೇದಿಕೆ ಮೇಲೆ ಕುಳಿತಿದ್ದ ಸಚಿವರನ್ನು ಟೀಂ ಕರ್ನಾಟಕ ಎಂದು ಕರೆದರು. ನಾನು ಟೀಂನ ಸದಸ್ಯನಾಗಿದ್ದು, ನಮ್ಮ ಟೀಂ ಸಶಕ್ತ ಕರ್ನಾಟಕ ನಿರ್ಮಾಣಕ್ಕೆ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಬಳಿಕ ರಾಜ್ಯವನ್ನು ಕೊಂಡಾಡಿದ ಮುಖ್ಯಮಂತ್ರಿಗಳು, ಕರ್ನಾಟಕ ದೇವರ ಆಶೀರ್ವಾದ ಇರೋ ನಾಡು. ನೈಸರ್ಗಿಕವಾಗಿ ಶ್ರೀಮಂತವಾಗಿರೋ ನಾಡು ಕರ್ನಾಟಕ. ಕರ್ನಾಟಕದಲ್ಲಿ ಹುಟ್ಟುವ ನದಿಗಳು ಪೂರ್ವ ದಿಂದ ಪಶ್ಚಿಮಕ್ಕೆ ಹರಿಯುತ್ತವೆ. ಗಂಗಾ ಮಾತೆ ನಮ್ಮನ್ನು ಹರಸಿದ್ದಾಳೆ. 365 ದಿನವೂ ತೋಟಗಾರಿಕೆ ಉತ್ಪನ್ನ ಬೆಳೆಯುವ ನಾಡು ನಮ್ಮದು. ಬೇರೆ ಯಾವ ರಾಜ್ಯಕ್ಕೂ ಈ ಹೆಮ್ಮೆ ಇಲ್ಲ. ಖನಿಜ ಸಂಪತ್ತು, ಅರಣ್ಯ ಸಂಪತ್ತು ಅಪಾರವಾಗಿ ನಮ್ಮಲ್ಲಿ ಇದೆ. ಗಂಗರು, ಚೋಳರು, ಮೈಸೂರು ಅರಸರು ವಿಜಯನ ನಗರ ಅರಸರು ದೊಡ್ಡ ಸಂಸ್ಕೃತಿ ನಮಗೆ ಬಿಟ್ಟು ಹೋಗಿದ್ದಾರೆಂದು ಹೊಗಳಿದರು.

ನಮ್ಮ ರಾಜ್ಯದ ಮಹನೀಯರಾದ ರಾಯಣ್ಣ, ಚೆನ್ನಮ್ಮ, ಅಬ್ಬಕ್ಕ ಸೇರಿ ಅನೇಕ ಸ್ವಾತಂತ್ರ್ಯ ಹೋರಾಟಗಾರು ಪ್ರಾಣ ತ್ಯಾಗ ಮಾಡಿದ್ದಾರೆ. ಸ್ವಾತಂತ್ರ್ಯದ ನಂತರ ಶ್ರೇಷ್ಠ ಆಡಳಿತ ಕೊಟ್ಟ ಪರಂಪರೆ ನಮ್ಮ ಕರ್ನಾಟಕದಲ್ಲಿ ಇದೆ. ಕರ್ನಾಟಕಕ್ಕೆ ಎಲ್ಲರೂ ಕೊಟ್ಟ ಪರಂಪರೆ ನೆನಪು ಮಾಡಿಕೊಳ್ಳುತ್ತೇನೆ. ರಾಜ್ಯದ ಹಿತ ಕಾಪಾಡಲು ನಾವು ಯಾವತ್ತು ಕೆಲಸ ಮಾಡುತ್ತೇವೆ. ಕೃಷಿಯಲ್ಲಿ ನಾವು ಮುಂದೆ ಇದ್ದೇವೆ. ನಮ್ಮ ಕರ್ನಾಟಕ ಕೃಷಿಯಲ್ಲಿ ಮುಂದೆ ಇದೆ. ರಾಜ್ಯದಲ್ಲಿ ಕೈಗಾರಿಕೆ ವಲಯವೂ ಮುಂದಿದೆ. ಸಂಶೋಧನಾ ವಲಯದಲ್ಲಿ ನಾವು ಮುಂದೆ ಇದ್ದೇವೆ.

ಸರ್ಕಾರದ ಯಶಸ್ಸು ಆಗೋದು ತನಗಿರುವ ಸಂಪನ್ಮೂಲಗಳನ್ನು ಕ್ರೋಢೀಕರಿಸಿ ರಾಜ್ಯ ಕಟ್ಟುವುದರಿಂದ. ಐದು ಜನ ಮುಖ್ಯಮಂತ್ರಿಗಳ ಜೊತೆ ನಾನು ಹತ್ತಿರದಿಂದ ಆಡಳಿತ ನೋಡಿದ್ದೇನೆ. ಆದರೆ, ಆರೋಗ್ಯ ಸಮಸ್ಯೆ ಮತ್ತು ಪ್ರವಾಹದ ಸ್ಥಿತಿ ಒಟ್ಟಿಗೆ ಬಂದಿರಲಿಲ್ಲ. ಜನರ ಜೀವ ಉಳಿಸೋದು, ಜನರ ಜೀವನ ಕಟ್ಟಿಕೊಡೋದು ನಮ್ಮ ಮುಂದೆ ಇತ್ತು.

ಕೊರೊನಾದಿಂದ ಆರ್ಥಿಕ ಸವಾಲು ಕಂಡಿದ್ದೇವೆ. ರೈತರು, ಯುವಕರು, ಎಲ್ಲಾ ವರ್ಗಕ್ಕೆ ಹೊಸ ಹೊಸ ಕಾರ್ಯಕ್ರಮ ಮಾಡೋ ಆಸೆ ತುಡಿಯುತ್ತೆ. ಆದರೆ, ಆರ್ಥಿಕ ಪರಿಸ್ಥಿತಿ ನಮಗೆ ಸಮಸ್ಯೆ ಆಗಿದೆ. ನಮ್ಮದು ಅರಿವು ಇರುವ ಸರ್ಕಾರ. ಏನೇ ಕಷ್ಟ ಬಂದರು ಜನರ ಪರ ಇರುತ್ತೇವೆ. ವೈಯಕ್ತಿಕ ಹಿತಾಸಕ್ತಿಗೆ ನಾವು ಅವಕಾಶ ಕೊಟ್ಟಿಲ್ಲ. ಜನರ ಪರ ಕೆಲಸ ಮಾಡಿದ್ದೇವೆ. ಎಂತಹ ಕಷ್ಟ ಬಂದರು ನಮ್ಮ ಸರ್ಕಾರ ಮಾನವೀಯತೆ ಬಿಟ್ಟುಕೊಟ್ಟಿಲ್ಲ.

ಪ್ರವಾಹ ಸಮಯದಲ್ಲಿ ಕೇಂದ್ರ ಸರ್ಕಾರದ ನಿಯಮ ಮೀರಿ ದುಪ್ಪಟ್ಟು ಹಣ ಬಿಡುಗಡೆ ಮಾಡಿದ್ದೇವೆ. ಸರ್ಕಾರಕ್ಕೆ ಎಷ್ಟೇ ಕಷ್ಟ ಇದ್ದರು ರೈತರಿಗೆ ಕಷ್ಟ ಆಗಲು ಬಿಡಲಿಲ್ಲ. 14 ಲಕ್ಷಕ್ಕೂ ಹೆಚ್ಚು ರೈತರಿಗೆ ಇದರಿಂದ ಲಾಭ ಸಿಕ್ಕಿದೆ ಎಂದು ತಿಳಿಸಿದರು. ಅಂಗವೈಕಲ್ಯರು, ವಿಧವೆಯರ ಮಾಶಾಸನ, ಸಂಧ್ಯಾ ಸುರಕ್ಷಾ ಮಾಶಾಸನದ ಹಣ ಹೆಚ್ಚಳ ಮಾಡಿದ್ದೇವೆ. 58 ಲಕ್ಷ ಜನರಿಗೆ ಇದರಿಂದ ಲಾಭವಾಗಿದೆ. ಸೂಕ್ಷ್ಮತೆಯಿಂದ ಸರ್ಕಾರ ನಡೆಸಬೇಕು. ರೈತನ ಕೃಷಿ ಬೆಳೆಗೆ ಸುರಕ್ಷತೆ ನೀಡುವ ಕೆಲಸ ಮಾಡಿದ್ದೇವೆ. ರೈತ ಮಕ್ಕಳಿಗೆ ರೈತ ವಿದ್ಯಾನಿಧಿ ಜಾರಿ ಮಾಡಿದ್ದೇವೆ. ಕಾರ್ಮಿಕರ ಮಕ್ಕಳಿಗೆ ವಿದ್ಯಾನಿಧಿ ಸ್ಥಾಪನೆ ಮಾಡಿದ್ದೇವೆ. ಎಲ್ಲಾ ಯೋಜನೆ ಹಣ ಆನ್‌ಲೈನ್ ಮೂಲಕ ಹಣ ತಲುಪಿದೆ. ಕೋವಿಡ್ ನಿಂದ ಮೃತರಾದವರಿಗೆ ರಾಜ್ಯ 1 ಲಕ್ಷ ಕೇಂದ್ರ 50 ಸಾವಿರ ಪರಿಹಾರ ಕೊಟ್ಟಿದ್ದೇವೆ. ಸಮಗ್ರ ಅಭಿವೃದ್ಧಿ ನಮ್ಮ ಸರ್ಕಾರದ ಆಶಯ. ಜನರನ್ನ ಪಾಲುದಾರರನ್ನಾಗಿ ಮಾಡೋದು ಇದರ ಉದ್ದೇಶ. ರಾಜ್ಯ ಕಟ್ಟಲು ಅವ್ರನ್ನು ಸಶಕ್ತರಾಗಿ ಮಾಡೋದು ನಮ್ಮ ಗುರಿ. 7,500 ಸ್ತ್ರೀ ಶಕ್ತಿ ಸಂಘಕ್ಕೆ ಹಣ ಸಹಾಯ ಮಾಡಲಾಗಿದೆ. ಹೊಸ ಉದ್ಯೋಗ ನೀತಿ ಜಾರಿ ಮಾಡಿದ್ದೇವೆ. ಕೆಲವರು ದುಡ್ಡೇ ದೊಡ್ಡಪ್ಪ ಅಂದು ಕೊಂಡಿದ್ದಾರೆ. ಆದ್ರೆ ದುಡಿಮೆಯೇ ದೊಡ್ಡಪ್ಪ ಅನ್ನೋದು ನಮ್ಮ ಸರ್ಕಾರ ತಿಳಿದಿದೆ ಎಂದು ಅಭಿಪ್ರಾಯಪಟ್ಟರು.

ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್, ಸಚಿವರಾದ ಕೆ.ಎಸ್. ಈಶ್ವರಪ್ಪ, ಎಸ್.ಟಿ. ಸೋಮಶೇಖರ್, ಬಿ.ಸಿ. ಪಾಟೀಲ್, ಉಮೇಶ್ ಕತ್ತಿ, ಗೋಪಾಲಯ್ಯ, ಡಾ. ಸುಧಾಕರ್, ಭೈರತಿ ಬಸವರಾಜ, ವಿ. ಸೋಮಣ್ಣ, ಗೋವಿಂದ ಕಾರಜೋಳ, ಬಿ.ಸಿ. ನಾಗೇಶ್, ಎಂಟಿಬಿ ನಾಗರಾಜ್, ಸಂಸದ ಪಿ.ಸಿ. ಮೋಹನ್ ಉಪಸ್ಥಿತರಿದ್ದಾರೆ.



### ವರಿಷ್ಠರ ಭೇಟಿಗೆ ಸಮಯ ಕೇಳಿದ್ದೇನೆ, ಶೀಘ್ರದಲ್ಲೇ ಸಂಪುಟ ವಿಸ್ತರಣೆ

ಬೆಂಗಳೂರು: ಸಂಪುಟ ವಿಸ್ತರಣೆ ಸಂಬಂಧ ವರಿಷ್ಠರ ಭೇಟಿಗೆ ಸಮಯ ಕೇಳಿದ್ದೇನೆ. ಅವಕಾಶ ಸಿಕ್ಕ ಕೂಡಲೇ ದೆಹಲಿಗೆ ತೆರಳಿ ಅವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇಂದಿಲ್ಲಿ ಹೇಳಿದರು. ತಮ್ಮ ಹುಟ್ಟುಹಬ್ಬ ಹಾಗೂ 6 ತಿಂಗಳು ಆಡಳಿತ ಪೂರೈಸಿದ ಅಂಗವಾಗಿ ಇಂದು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಯಡಿಯೂರಪ್ಪನವರು ನನಗೆ ಆಶೀರ್ವಾದ ಮಾಡಿದ್ದಾರೆ. ಅಲ್ಲದೆ ಒಳ್ಳೆಯ ಆಡಳಿತ ನೀಡಿದ್ದೀರಿ. ಹೀಗೆ ಮುಂದುವರೆಯಿರಿ ಎಂದು ಹಾರೈಸಿದ್ದಾರೆ ಎಂದು ತಿಳಿಸಿದರು. ಇದೇ ವೇಳೆ ಸಂಪುಟ ವಿಸ್ತರಣೆ ಕುರಿತು ಸಮಾಲೋಚನೆ ನಡೆಸಿದೆವು. ದೆಹಲಿ ವರಿಷ್ಠರ ಭೇಟಿಗೆ ಸಮಯ ಕೇಳಲಾಗಿದೆ. ಅವರು ಅವಕಾಶ ಕೊಟ್ಟ ಕೂಡಲೇ ಅವರೊಂದಿಗೆ ಚರ್ಚೆ ನಡೆಸಿ ಸಂಪುಟ ವಿಸ್ತರಣೆ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದರು. ಅಲ್ಲದೆ ದೆಹಲಿಯಲ್ಲಿ ಸಂಸದರೊಂದಿಗೆ ಸಭೆ ನಡೆಸುವುದಾಗಿ ಕೂಡ ತಿಳಿಸಿದರು. ನಾನ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ. ಆದರೂ ರಾಜ್ಯಾದ್ಯಂತ ನನ್ನ ಜನರು, ಸ್ನೇಹಿತರು, ಶಾಸಕರು, ಕ್ಷೇತ್ರದ ಜನತೆ ಶುಭಾಶಯ ತಿಳಿಸಿದ್ದಾರೆ ಎಂದರು. ನಿನ್ನೆ ಪ್ರಧಾನಿ ಮೋದಿ ಅವರು ಟ್ವೀಟ್ ಮೂಲಕ ನನ್ನ ಹುಟ್ಟುಹಬ್ಬಕ್ಕೆ ಶುಭ ಕೋರಿದ್ದು, ರಾಷ್ಟ್ರಪತಿ ಕೂಡ ವಿಶ್ ಮಾಡಿದ್ದಾರೆ. ಅವರೆಲ್ಲರಿಗೂ ನಾನು ಧನ್ಯವಾದ ಹೇಳಬಯಸುತ್ತೇನೆ. ಇಂದು ನಮ್ಮ ಸರ್ಕಾರಕ್ಕೆ 6 ತಿಂಗಳು ತುಂಬಿದೆ. ಹಾಗಾಗಿ ಆಡಳಿತ ಪಕ್ಷಿನೋಟದ ಒಂದು ಕಿರು ಹೊತ್ತಿಗೆ ತರಲಾಗಿದೆ ಎಂದು ತಿಳಿಸಿದರು.

### 82 ಪುಟಗಳ ಪುಸ್ತಕ ಬಿಡುಗಡೆ

ಕಾರ್ಯಕ್ರಮದಲ್ಲಿ ಸರ್ಕಾರದ 6 ತಿಂಗಳ ಸಾಧನೆಯ ಕಿರು ಹೊತ್ತಿಗೆ ಬಿಡುಗಡೆ ಮಾಡಲಾಗಿದೆ. ಭವ್ಯ ಭವಿಷ್ಯಕ್ಕಾಗಿ ಭರವಸೆಯ ಹೆಜ್ಜೆಗಳು ಎಂಬ 82 ಪುಟಗಳ ಪುಸ್ತಕವನ್ನು ಸಿಎಂ ಬಿಡುಗಡೆ ಮಾಡಿದರು.

# ರಾಷ್ಟ್ರೀಯ ಪಕ್ಷಗಳತ್ತ ಹೋಗಿಲ್ಲ, ಮುಂದೆಯೂ ಹೋಗಲ್ಲ: ಎಚ್‌ಡಿಕೆ

■ ಸಂಭ್ರಮ ಪ್ರಭ

**ಬೆಂಗಳೂರು:** 'ಅಧಿಕಾರಕ್ಕಾಗಿ ರಾಷ್ಟ್ರೀಯ ಪಕ್ಷಗಳ ಮನೆಬಾಗಿಲಿಗೆ ನಾನು ಈವರೆಗೆ ಹೋಗಿಲ್ಲ. ಮುಂದೆಯೂ ಹೋಗುವುದಿಲ್ಲ' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಅವರು, 'ಬೇರೆ ಪಕ್ಷಗಳು ಅತಂತ್ರವಾದಾಗ ಜೆಡಿಎಸ್ ಸ್ವತಂತ್ರವಾಗುತ್ತದೆ. ಅದು ಕುಮಾರಸ್ವಾಮಿ ಸದಾಶಯ ಆಗಿರಬಹುದು' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ನಮ್ಮ ಪಕ್ಷ ಅತಂತ್ರವಾಗಿಲ್ಲ. ಅತಂತ್ರ ವಿಧಾನಸಭೆ ನಿರ್ಮಾಣವಾದಾಗ ರಾಷ್ಟ್ರೀಯ ಪಕ್ಷಗಳೇ ನಮ್ಮ ಮನೆ ಬಾಗಿಲಿಗೆ ಬಂದಿವೆ' ಎಂದು ಹೇಳಿದರು. ಸಿ.ಎಂ ಪ್ರತಿನಿಧಿಸುವ ಪಕ್ಷದ ಶಾಸಕರು, ಸಚಿವರು ಸಿದ್ದರಾಮಯ್ಯ ಸಂಪರ್ಕದಲ್ಲಿದ್ದಾರೆ ಎಂದರೆ, ಅವರನ್ನು ಹದ್ದುಬಸ್ತಿನಲ್ಲಿಡಲು ಬಿಜೆಪಿ ನಾಯಕರಿಗೆ ಆಗಿಲ್ಲ ಎಂದು ಕುಟುಕಿದ ಅವರು, 'ಬಿಜೆಪಿ ಉಳಿವಿಗೆ ಅಲ್ಲಿನ ನಾಯಕರು ಏನು ಮಾಡುತ್ತಿದ್ದಾರೋ ಅದನ್ನೇ ನಾವು ಮಾಡುತ್ತಿದ್ದೇವೆ' ಎಂದರು.



'ನಮಗೂ ಸವಾಲಿದೆ. ಗುರಿ ಬಗ್ಗೆ ಸ್ಪಷ್ಟತೆ ಇದೆ. ಪ್ರತ್ಯುತ್ತರ ಕೊಡಲು ಸಿದ್ಧರಿದ್ದೇವೆ. 2023ರ ಚುನಾವಣೆಯಲ್ಲಿ 123 ಕ್ಷೇತ್ರ ಗೆಲ್ಲಲು ಎಲ್ಲ ಪ್ರಯತ್ನ ಮಾಡುತ್ತೇವೆ. ಅದಕ್ಕೆ ತಯಾರಿಯನ್ನೂ ಮಾಡಿಕೊಳ್ಳುತ್ತಿದ್ದೇವೆ' ಎಂದರು. '2023ರಲ್ಲಿ ಜೆಡಿಎಸ್ ಶಕ್ತಿ ಏನು ಎಂದು ತೋರಿಸುತ್ತೇವೆ. ನಮ್ಮನ್ನು ಬಿಟ್ಟು ಏನು ಮಾಡಲು ಆಗುವುದಿಲ್ಲ ಎಂದಷ್ಟೇ ಹೇಳಿದ್ದೆ. ಬೇರೆ ಪಕ್ಷಗಳು ಕಡಿಮೆ ಸ್ಥಾನ ಗೆದ್ದರೆ ಅವರ ಜತೆ ಸೇರಿ ಅಧಿಕಾರ ಮಾಡುತ್ತೇವೆ ಎಂದಲ್ಲ. ನನ್ನ ಹೇಳಿಕೆಯ ಬಗ್ಗೆ ಅನ್ಯ ಅರ್ಥ ಬೇಡ. ಜನರಿಗೆ ತಪ್ಪು ಸಂದೇಶ ಹೋಗುವುದು ಬೇಡ' ಎಂದು ಸ್ಪಷ್ಟಪಡಿಸಿದರು. ಜೆಡಿಎಸ್ ಪ್ರಮುಖರ ಸಮಿತಿ ಅಧ್ಯಕ್ಷ ಬಂಡೆಪ್ಪ ಕಾಶೆಂಪೂರ, ಶಾಸಕರಾದ ಮಂಜುನಾಥ್, ಕೃಷ್ಣಾರೆಡ್ಡಿ, ಮುಖಂಡ ಟಿ.ಎ.ಶರವಣ ಇದ್ದರು.

**ಜೆಡಿಎಸ್‌ಗೆ ನಾಲ್ವರು ಕಾರ್ಯಾಧ್ಯಕ್ಷರು?:** 'ಪಕ್ಷದ ಸಂಘಟನೆ ಬಲಪಡಿಸಲು ನಾಲ್ವರು ಕಾರ್ಯಾಧ್ಯಕ್ಷರನ್ನು ನೇಮಿಸುವ ಬಗ್ಗೆ ಚರ್ಚೆ ನಡೆದಿದೆ' ಎಂದು ಪಕ್ಷದ ಪ್ರಮುಖರ ಸಮಿತಿ ಅಧ್ಯಕ್ಷ ಬಂಡೆಪ್ಪ ಕಾಶೆಂಪೂರ ಹೇಳಿದರು. ಗುರುವಾರ ಸಮಿತಿಯ ಮೊದಲ ಸಭೆ ಬಳಿಕ ಅವರು, 'ನಾಲ್ಕೂ ದಿಕ್ಕುಗಳಲ್ಲಿ ತಳಮಟ್ಟದಿಂದ ಪಕ್ಷ ಗಟ್ಟಿಗೊಳಿಸಲು ಕಾರ್ಯಾಧ್ಯಕ್ಷರ ನೇಮಿಸಲು ಸಮಾಲೋಚನೆ ನಡೆಸಲಾಯಿತು' ಎಂದರು. ಮಹಿಳೆ, ಕೈಗಾರಿಕಾ ವಿಭಾಗದ ಅಧ್ಯಕ್ಷರು, ಪದಾಧಿಕಾರಿಗಳ ನೇಮಕ ಹಾಗೂ ಬಿಬಿಎಂಪಿ ಚುನಾವಣೆಗೆ ತಯಾರಿ ನಡೆಸುವ ಕುರಿತು ಚರ್ಚೆ ನಡೆಸಲಾಯಿತು ಎಂದು ಹೇಳಿದರು.

## ಅಲ್ಪಸಂಖ್ಯಾತರು ಕಾಂಗ್ರೆಸ್ ಜೊತೆಗಿದ್ದಾರೆ: ಎಂ.ಬಿ.ಪಾಟೀಲ್

■ ಸಂಭ್ರಮ ಪ್ರಭ

**ಬೆಂಗಳೂರು:** ಮುಸ್ಲಿಂ ಸಮುದಾಯ 2018ರಲ್ಲೂ ಕಾಂಗ್ರೆಸ್ ಜೊತೆಗಿತ್ತು, ಮುಂದೆಯೂ ಇರಲಿದೆ. ಅಲ್ಪಸಂಖ್ಯಾತ ನಾಯಕರಿಗೆ ಪಕ್ಷದಲ್ಲಿ ಸಾಕಷ್ಟು ಸ್ಥಾನ ನೀಡಲಾಗಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ




ಎಂ.ಬಿ.ಪಾಟೀಲ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನ ಪರಿಷತ್ ಸದಸ್ಯ ಸಿ.ಎಂ.ಇಬ್ರಾಹಿಂ ಕಾಂಗ್ರೆಸ್ ತೊರೆಯುವುದಾಗಿ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಲು ಅವರು ನಿರಾಕರಿಸಿದರು. ಪಕ್ಷ ತಮಗೆ ಜವಾಬ್ದಾರಿ ನೀಡಿದೆ. ಅದನ್ನು ಸಮರ್ಥವಾಗಿ ನಿಭಾಯಿಸುತ್ತೇನೆ. ಎಲ್ಲಾ ಹಿರಿಯ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಟ್ಟಾಗಿ ಕೆಲಸ ಮಾಡುತ್ತೇವೆ. ಸಿ.ಎಂ.ಇಬ್ರಾಹಿಂ ಅವರು ಪಕ್ಷ ತೊರೆಯುತ್ತಿರುವ ಬಗ್ಗೆ ಹೇಳಿಕೆ ನೀಡಲು ನಾನಿನ್ನು ಚಿಕ್ಕವನು. ಪಕ್ಷದ ಹೈಕಮಾಂಡ್ ನಿರ್ಧಾರದ ಬಗ್ಗೆ ನಾನು ಮಾತನಾಡುವುದಿಲ್ಲ. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅವರು ಈ ಕುರಿತು ಹೇಳಿಕೆ ನೀಡುತ್ತಾರೆ ಎಂದು ಅವರು ಹೇಳಿದರು. ರಾಜ್ಯದ ಜನ ಪ್ರಬುದ್ಧರಿದ್ದಾರೆ, ಮುಸ್ಲಿಂ ಸಮುದಾಯ ಮೊದಲಿನಿಂದಲೂ ನಮ್ಮ ಜೊತೆಗಿದೆ. ಈಗಲೂ ನಮ್ಮೊಂದಿಗೆ ಅಲ್ಪಸಂಖ್ಯಾತರಿದ್ದಾರೆ. ಪಕ್ಷದಲ್ಲಿ ಯು.ಟಿ.ಖಾದರ್, ಜಮೀರ್ ಅಹಮ್ಮದ್ ಖಾನ್ ಸೇರಿ ಹಲವು ನಾಯಕರಿದ್ದಾರೆ. ಅವರಿಗೆಲ್ಲಾ ಸೂಕ್ತ ಸ್ಥಾನ ನೀಡಲಾಗಿದೆ ಎಂದರು.

## ಕಾರಾಗೃಹದಲ್ಲಿ ಕೈದಿಗಳಿಗೆ ರಾಜಾತಿಥ್ಯ; ತನಿಖೆ ಆರಂಭ

■ ಸಂಭ್ರಮ ಪ್ರಭ

**ಬೆಂಗಳೂರು:** ಪರಪ್ಪನ ಅಗ್ರಹಾರದ ಕೇಂದ್ರ ಕಾರಾಗೃಹದಲ್ಲಿ ಕೈದಿಗಳಿಗೆ ರಾಜಾತಿಥ್ಯ ನೀಡುತ್ತಿರುವ ಆರೋಪ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸರ್ಕಾರ ಸಮಗ್ರ ತನಿಖೆ ನಡೆಸಿ ವರದಿ




ನೀಡುವಂತೆ ಕಾರಾಗೃಹ ಉತ್ತರ ವಲಯ ಡಿಐಜಿ ಸೋಮಶೇಖರ್ ಅವರಿಗೆ ಸೂಚಿಸಿದೆ. ಬೆಂಗಳೂರು ಸೆಂಟ್ರಲ್ ಜೈಲ್ ಅಧೀಕ್ಷಕರಾಗಿ ಈ ಹಿಂದೆ ಕಾರ್ಯನಿರ್ವಹಿಸಿದ ಅನುಭವವಿರುವ ಆಧಾರದ ಮೇಲೆ ಸೋಮಶೇಖರ್ ಅವರನ್ನು ತನಿಖಾಧಿಕಾರಿಯನ್ನಾಗಿ ನೇಮಿಸಿದ್ದು, ಅವರು ಖುದ್ದು ಜೈಲಿಗೆ ಭೇಟಿ ಕೊಟ್ಟು ಪ್ರಕರಣದ ತನಿಖೆ ನಡೆಸಲಿದ್ದಾರೆ. ಎರಡು ದಿನಗಳಲ್ಲಿ ಸಂಪೂರ್ಣ ತನಿಖೆ ನಡೆಸಿ ಮುಖ್ಯಮಂತ್ರಿ, ಗೃಹ ಸಚಿವರು ಮತ್ತು ಕಾರಾಗೃಹ ಡಿಜಿಪಿಗೆ ವರದಿ ನೀಡಲು ತನಿಖಾಧಿಕಾರಿಗಳಿಗೆ ಸೂಚಿಸಲಾಗಿದೆ. ಕೇಂದ್ರ ಕಾರಾಗೃಹದಲ್ಲಿ ನಡೆದಿರುವ ಘಟನೆಗಳ ಸಂಬಂಧ ಕಾರಾಗೃಹ ಡಿಜಿಪಿ ಅಲೋಕ್ ಮೋಹನ್ ಅವರನ್ನು ಭೇಟಿ ಮಾಡಿ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಜೈಲಿನ ಸೂಪರಿಡೆಂಟ್ ರಂಗನಾಥ್ ಅವರು ಈಗಾಗಲೇ ಪ್ರಾಥಮಿಕ ವರದಿ ಸಲ್ಲಿಸಿದ್ದಾರೆ. 19 ಮಂದಿ ವಿರುದ್ಧ 12 ಎಫ್‌ಐಆರ್ ದಾಖಲಾಗಿದೆ. ಹೆಚ್ಚು ವರ್ಷ ಜೈಲಿನಲ್ಲಿ ಕೆಲಸ ಮಾಡಿದ್ದ 52 ಸಿಬ್ಬಂದಿಯನ್ನು ಈಗಾಗಲೇ ವರ್ಗಾವಣೆ ಮಾಡಲಾಗಿದೆ.

## ಪ್ರವಾಸಿ ತಾಣಗಳಾಗಲಿವೆ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದ ರಾಜ್ಯದ ಸ್ಥಳಗಳ

■ ಸಂಭ್ರಮ ಪ್ರಭ

**ಬೆಂಗಳೂರು:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಭಾರತ ಸ್ವಾತಂತ್ರ್ಯ ಹೋರಾಟದಲ್ಲಿ ಕರ್ನಾಟಕದ ಮಹತ್ವ ಸಾರಲು ಹಾಗೂ ರಾಜ್ಯ ಪ್ರವಾಸೋದ್ಯಮ ಇಲಾಖೆಯು ಹೋರಾಟದಲ್ಲಿ ಕೊಡುಗೆ ನೀಡಿದ ರಾಜ್ಯದ ಸ್ಥಳಗಳನ್ನು ಪ್ರವಾಸಿ ತಾಣವಾಗಿ ಮಾಡಲು ಸರ್ಕಾರ ಮುಂದಾಗಿದೆ. ಸ್ವಾತಂತ್ರ್ಯ ಹೋರಾಟದ ಸಂದರ್ಭ ದಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದ್ದ



ಸ್ಥಳಗಳ ಕುರಿತು ಮಾಹಿತಿ ಕಲೆ ಹಾಕುವ ಕೆಲಸ ಮಾಡಲಾಗುತ್ತಿದೆ. ಈ ಕಾರ್ಯದಲ್ಲಿ ಸಾರ್ವಜನಿಕ ಸಹಭಾಗಿತ್ವ ಕೋರಲಾಗುತ್ತಿದ್ದು, ಜನರು ತಮಗೆ ತಿಳಿದ ಸ್ಥಳಗಳ ಕುರಿತ ಮಾಹಿತಿಗಳನ್ನು ಇಲಾಖೆಯೊಂದಿಗೆ ಹಂಚಿಕೊಳ್ಳಬಹುದಾಗಿದೆ ಎಂದು ಪ್ರವಾ ಸೋದ್ಯಮ ಇಲಾಖೆ ಅಧಿಕಾರಿಯೊಬ್ಬರು ಹೇಳಿದ್ದಾರೆ. ಜನರು ತಮಗೆ ತಿಳಿದ ವ್ಯಕ್ತಿಗಳ ಬಗ್ಗೆ ಕಥೆಗಳನ್ನು ನಮ್ಮೊಂದಿಗೆ ಹಂಚಿಕೊಳ್ಳಬಹುದು. ಹಾಗೆಯೇ ತಮಗೆ ತಿಳಿದ ಸ್ಥಳಗಳ ಕುರಿತ ಮಾಹಿತಿ ನೀಡಿದರೆ, ಆ ಸ್ಥಳಗಳನ್ನು ಪ್ರವಾಸೋದ್ಯಮದ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲಾಗುತ್ತದೆ. ಸ್ವಾತಂತ್ರ್ಯ ಹೋರಾಟದ ಬಗ್ಗೆ ಸಾಕಷ್ಟು ಸ್ಥಳೀಯ ಮಾಹಿತಿಗಳಿದ್ದು, ಕಲ್ಯಾಣ ಕರ್ನಾಟಕ ಪ್ರದೇಶವು ಅಂತಹ ಅನೇಕ ಸ್ಥಳಗಳನ್ನು ಹೊಂದಿದೆ. ಇಲಾಖೆಯು ರಾಜ್ಯದಲ್ಲಿ 770 ಪ್ರವಾಸೋದ್ಯಮ ತಾಣಗಳನ್ನು ಪಟ್ಟಿ ಮಾಡಿದೆ. ಅದರಲ್ಲಿ 25 ಕಡಿಮೆ ಪ್ರಸಿದ್ಧ ಸ್ಥಳಗಳನ್ನು ಅಂತಿಮಗೊಳಿಸಿದೆ ಎಂದು ಮಾಹಿತಿ ನೀಡಿದ್ದಾರೆ.

# ಕಾಂಗ್ರೆಸ್ ಬಿಡಲು ಇಬ್ರಾಹಿಂ ತೀರ್ಮಾನ

■ ಸಂಭ್ರಮ ಪ್ರಭ

**ಬೆಂಗಳೂರು:** ವಿಧಾನಪರಿಷತ್ ಪ್ರತಿಪಕ್ಷ ನಾಯಕ ಸ್ಥಾನ ಕರುಣಿಸದ ಕಾಂಗ್ರೆಸ್ ವಿರುದ್ಧ ವಿಧಾನಪರಿಷತ್ ಸದಸ್ಯ ಸಿ.ಎಂ. ಇಬ್ರಾಹಿಂ ತಿರುಗಿಬಿದ್ದಿದ್ದು, ಕಾಂಗ್ರೆಸ್ ಜತೆಗಿನ ನಂಟು ಮುಗಿದ ಅಧ್ಯಾಯ ಎಂದು ತಿಳಿಸಿದ್ದಾರೆ. ಗುರುವಾರ ಸುದ್ದಿಗಾರರ ಮುಂದೆ ಹಾಜರಾದ ಅವರು, ಎಐಸಿಸಿ ತೀರ್ವನವನ್ನು ನೋಡಿ ಬಹಳ ಸಂತೋಷ ಆಯಿತು.

ನನ್ನ ಮೇಲಿದ್ದ ಭಾರವನ್ನು ಸೋನಿಯಾ ಗಾಂಧಿ ಹಗುರ ಮಾಡಿದ್ದಾರೆ. ತೀರ್ಮಾನ ತೆಗೆದುಕೊಳ್ಳಲು ನಾವು ಸ್ವಾತಂತ್ರರಾಗಿದ್ದೇವೆ ಎಂದು ಹೇಳಿದರು.

ಯಾರ ಹೆಸರಿಗಿರೋ ಜಮೀನಿನಲ್ಲಿ ಬೆಳೆ ಬೆಳೆದೆವು, ಬೆಳೆ ಬಂದ ಮೇಲೆ ಬೆಳೆ ಕೊಯ್ದುಕೊಂಡು ನಮ್ಮನ್ನು ಹೊರ ಹಾಕಿದರು. ಎಂಎಲ್‌ಸಿ ಪದವಿಗೂ ರಾಜೀನಾಮೆ ಕೊಡಲು ತೀರ್ವನಿಸಿದ್ದೇನೆ. ಇವತ್ತು 27ರ ಗುರುವಾರ ದಿವಸ. ಉಪವಾಸ ಇದ್ದು ನೊಂದ ಮನಸ್ಸಿನಿಂದ ಹೇಳುತ್ತಿದ್ದೇನೆ, ಕಾದು ನೋಡಿ ಮುಂದೇನಾಗುತ್ತದೆ ಎಂದ ಅವರು, ನನ್ನ ಬಳಿ ಜಾತಿ ಬಲ ಇಲ್ಲ, ತೋಳುಬಲ ಇಲ್ಲ. ಸಾವಿರಾರು ಜನರಿಗೆ ಚಿತ್ರಾನ್ನ, ಹೋಳಿಗೆ ಕೊಟ್ಟು ಕರೆಸುವ ಶಕ್ತಿ ಇಲ್ಲ. ಆದರೆ, ಹಳ್ಳಿಹಳ್ಳಿಗೆ ಹೋದರೆ ಜನರಿದ್ದಾರೆ ಎಂದು ಹೇಳಿದರು.

ಸಿದ್ದರಾಮಯ್ಯ ವಿರುದ್ಧ ಸಿಡಿಮಿಡಿ: ಕಾಂಗ್ರೆಸ್‌ಗೆ ನಾನು ಹೋಗಿದ್ದೇ ಸಿದ್ದರಾಮಯ್ಯ ಕಡೆಯಿಂದ. ಕುರುಬನಾಯಕ ಸಿಎಂ ಆಗಬೇಕೆಂದು ಬಳ್ಳಾರಿ ಯಾತ್ರೆಯಲ್ಲಿ ಪಾಲ್ಗೊಂಡೆನು. ಸಿದ್ದರಾಮಯ್ಯ ಸಲುವಾಗಿಯೇ ದೇವೇಗೌಡರಂತಹ ನಾಯಕರನ್ನು ಬಿಟ್ಟೆವು, ಜೈಲಲ್ಲಿದ್ದು ಕಟ್ಟಿದ ಪಕ್ಷ ಬಿಟ್ಟೆವು. ಸಿದ್ದರಾಮಯ್ಯ ಮನೆಗೆ ಹೋಗಿ ಚಾಮುಂಡಿಯಲ್ಲಿ ಸೋಲುತ್ತೀರಿ, ನಿಮ್ಮ ಕಾಲಿಗೆ ಬೀಳುತ್ತೇನೆ ಬಾದಾಮಿಯಲ್ಲಿ ಕಣಕ್ಕಿಳಿಯಿರಿ ಎಂದು ಮನವೊಲಿಸಿದೆ. ತಿಮ್ಮಾಪುರ, ಎಸ್. ಆರ್.ಪಾಟೀಲ್ ಜೀವಂತ ಇದ್ದಾರೆ, ಅವರಿಗೆ ಒಪ್ಪಿಸಿ ಅವರಿಗೆ ಹೊಸ ರಾಜಕೀಯ ಜೀವನ ಕೊಟ್ಟೆವು, ಅದಕ್ಕೆ ಅವರು ಉಡುಗೊರೆ ಕೊಟ್ಟಿದ್ದಾರೆ. ಈ ಉಡುಗೊರೆಯನ್ನು ಸಂತೋಷದಿಂದ ಸ್ವೀಕರಿಸಿದ್ದೇನೆ. ಕಾಲಾಯ ತಸ್ಮೈನಮಃ ಎಂದು ಬೇಸರ ವ್ಯಕ್ತಪಡಿಸಿದರು.



**ನನಗೆ ಸ್ಥಾನ ತಪ್ಪಿಸಿದ್ದು ಯಾರೆ–ಂದು ಸಿದ್ದರಾಮಯ್ಯ ಉತ್ತರ ಕೊಡಲಿ. ನನಗೂ ಡಿಕೆಶಿಗೂ ಯಾವುದೇ ಕಾರಣಕ್ಕೂ ಹೊಂದಾಣಿಕೆ ಆಗಲ್ಲ. ಅವರ ವಿಚಾರ ಧಾರೆ ಬೇರೆ. ಸಿದ್ದರಾಮಯ್ಯ ತಬ್ಬಲಿಯಾದರು. ಧೈರ್ಯವಾಗಿ ಹೇಳುವ ಶಕ್ತಿ ಕಳೆದುಕೊಂಡರು. ಚುನಾವಣೆಯಲ್ಲಿ ಎದುರು ಬದರು ಆಗಲಿ, ಜನರಿಗೆ ನೋಡಲು ಆನಂದ ಇರುತ್ತದೆ.**

| ಸಿ.ಎಂ.ಇಬ್ರಾಹಿಂ ವಿಧಾನಪರಿಷತ್ ಸದಸ್ಯ

## ಅಕ್ರಮ ವಾಸ; ಬಾಂಗ್ಲಾ ಮಹಿಳೆ ಬಂಧನ

■ ಸಂಭ್ರಮ ಪ್ರಭ

**ಬೆಂಗಳೂರು:** ದೇಶದಲ್ಲಿ 15 ವರ್ಷಗಳಿಂದ ಅಕ್ರಮವಾಗಿ ವಾಸಿಸುತ್ತಿದ್ದ ಬಾಂಗ್ಲಾದೇಶದ ರೋನಿ ಬೇಗಂ ಎಂಬಾಕೆಯನ್ನು ಬ್ಯಾಡರಹಳ್ಳಿ ಪೊಲೀಸರು ಬಂಧಿಸಿದ್ದಾರೆ.

'ದೇಶದೊಳಗೆ ನುಸುಳಿದ್ದ ರೋನಿ, 'ಪಾಯಲ್ ಘೋಷ್' ಎಂಬುದಾಗಿ ಹೆಸರು ಬದಲಾಯಿಸಿಕೊಂಡಿದ್ದಳು. ತಾನೊಬ್ಬ ಹಿಂದೂ ಮಹಿಳೆ ಎಂಬುದಾಗಿ ಹೇಳಿಕೊಂಡು ಮುಂಬೈ, ಬೆಂಗಳೂರು ಹಾಗೂ ಮಂಗಳೂರಿನಲ್ಲಿ ಸುತ್ತಾಡಿದ್ದಳು' ಎಂದು ಪೊಲೀಸ್ ಮೂಲಗಳು ಹೇಳಿವೆ.



'ಆರೋಪಿ ರೋನಿ, ಏಜೆಂಟರೊಬ್ಬರ ಮೂಲಕ ನಕಲಿ ಚುನಾವಣಾ ಗುರುತಿನ ಚೀಟಿ, ಆಧಾರ್ ಹಾಗೂ ಇತರೆ ದಾಖಲೆ ಮಾಡಿಸಿಕೊಂಡಿದ್ದಳು. ಆರಂಭದಲ್ಲಿ ಮುಂಬೈನಲ್ಲಿ ವಾಸವಿದ್ದ ಆಕೆ, ಅಲ್ಲಿಯ ಬಾರ್‌ನಲ್ಲಿ ನೃತ್ಯಗಾರ್ತಿ ಆಗಿ ಕೆಲಸ ಮಾಡಲಾರಂಭಿಸಿದ್ದಳು.'

'ಕೆಲಸದ ಸ್ಥಳದಲ್ಲಿ ಆಕೆಗೆ ಮಂಗಳೂರಿನ ಯುವಕನೊಬ್ಬನ ಪರಿಚಯವಾಗಿತ್ತು. ಸ್ನೇಹ ಏರ್ಪಟ್ಟು, ಇಬ್ಬರೂ ಪರಸ್ಪರ ಪ್ರೀತಿಸಲಾರಂಭಿಸಿದ್ದರು. ಮದುವೆ ಮಾಡಿಕೊಳ್ಳಲು ತೀರ್ಮಾನಿಸಿದ್ದ ಇಬ್ಬರೂ 2015ರಲ್ಲಿ ಬೆಂಗಳೂರಿಗೆ ಬಂದಿದ್ದರು. ಬೆಂಗಳೂರಿನಲ್ಲೇ ಹಿಂದೂ ಸಂಪ್ರದಾಯದಂತೆ ಮದುವೆಯಾಗಿದ್ದರು' ಎಂದೂ ಮೂಲಗಳು ತಿಳಿಸಿವೆ.

'ಮದುವೆ ನಂತರ ರೋನಿ, ಗಾರ್ಮೆಂಟ್ಸ್ ಕಾರ್ಖಾನೆಯೊಂದರಲ್ಲಿ ಕೆಲಸಕ್ಕೆ ಹೋಗಲಾರಂಭಿಸಿದ್ದಳು. ಆಗಾಗ ಬಾಂಗ್ಲಾದೇಶಕ್ಕೂ ಹೋಗಿ ಬರುತ್ತಿದ್ದಳು. ಕಳೆದ ವರ್ಷ ಬಾಂಗ್ಲಾದೇಶಕ್ಕೆ ಹೋಗುವಾಗ ಕೊಲ್ಕತ್ತಾದ ವಿಮಾನ ನಿಲ್ದಾಣದ ವಲಸೆ ಅಧಿಕಾರಿಗಳು ಆಕೆಯನ್ನು ಪರಿಶೀಲಿಸಿದ್ದರು. ತಾನೊಬ್ಬ ಹಿಂದೂ ಮಹಿಳೆ ಎಂಬುದಾಗಿ ವಾದಿಸಿ ರೋನಿ ಅವರಿಂದ ತಪ್ಪಿಸಿಕೊಂಡಿದ್ದಳು. ಆದರೆ, ಅಧಿಕಾರಿಗಳು ದಾಖಲೆಗಳ ಪ್ರತಿಗಳನ್ನು ತಮ್ಮ ಬಳಿಯೇ ಇಟ್ಟುಕೊಂಡಿದ್ದರು.' 'ರೋನಿ ಬಗ್ಗೆ ಅನುಮಾನಗೊಂಡಿದ್ದ ಅಧಿಕಾರಿಗಳು, ಬೆಂಗಳೂರಿನಲ್ಲಿರುವ ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ ಹಾಗೂ ಪೊಲೀಸ್ ಇಲಾಖೆಯಿಂದ ಮಾಹಿತಿ ಪಡೆದುಕೊಂಡಿದ್ದರು. ರೋನಿ, ಬಾಂಗ್ಲಾ ಪ್ರಜೆ ಎಂಬುದು ಗೊತ್ತಾಗಿತ್ತು. ಬಳಿಕ, ರೋನಿ ವಿರುದ್ಧ ಬ್ಯಾಡರಹಳ್ಳಿ ಠಾಣೆಯಲ್ಲಿ ಕಳೆದ ವರ್ಷ ಎಫ್‌ಐಆರ್ ದಾಖಲಾಗಿತ್ತು.

ಜಾಹೀರಾತಿಗಾಗಿ ಸಂಪರ್ಕಿಸಿ 9844344445 080-23482445 sambramaprabha@gmail.com

## ಸಣ್ ಸುದ್ದಿ

### ಹಾಫ್ ಹೆಲ್ಮೆಟ್ ನಿಷೇಧಕ್ಕೆ ರಾಜ್ಯ ಸರ್ಕಾರಕ್ಕೆ ನಿಮ್ಹಾನ್ಸ್‌ನಿಂದ ಶಿಫಾರಸು

■ ಸಂಭ್ರಮ ಪ್ರಭ

**ಬೆಂಗಳೂರು:** ಹಾಫ್ ಹೆಲ್ಮೆಟ್ ನಿಷೇಧಿಸುವಂತೆ ರಾಜ್ಯ ಸರ್ಕಾರಕ್ಕೆ ನಿಮ್ಹಾನ್ಸ್ ನಿಂದ ಶಿಫಾರಸು ಮಾಡಲಾಗಿದೆ. ನಿಮಾನ್ಸ್ ನಿಂದ ಬರೋಬ್ಬರಿ ಒಂದು ಲಕ್ಷ ಸವಾರರ ಸರ್ವೇ ಮಾಡಲಾಗಿದೆ. ಶೇಕಡ 26 ರಷ್ಟು ಸವಾರರು ಹಾಫ್ ಹೆಲ್ಮೆಟ್ ಧರಿಸುತಿದ್ದಾರೆ. ಅಪಘಾತಗಳಾದಾಗ ತಲೆಗೆ ಗಂಭೀರ ಗಾಯಗಳಾಗುತ್ತವೆ. ಹೀಗಾಗಿ ಫುಲ್ ಹೆಲ್ಮೆಟ್ ಧರಿಸಿದ್ದರೆ ಸಮಸ್ಯೆ ತಪ್ಪಿಸಬಹುದು ಎಂದು ಹೇಳಲಾಗಿದೆ. ಹೆಲ್ಮೆಟ್ ಬಳಸುವವರ ಮನಸ್ಥಿತಿ ಹೇಗಿರುತ್ತದೆ? ಬೈಕ್ ಸವಾರರು ಹಾಫ್ ಹೆಲ್ಮೆಟ್ ಏಕೆ ಧರಿಸುತ್ತಾರೆ? ನಿಯಮ ಉಲ್ಲಂಘಿಸುವುದಕ್ಕೆ ಸೂಕ್ತ ಕಾರಣವೇನು? ಇದು ಮಾನಸಿಕ ಕಾಯಿಲೆಯಾಗಿ ಪರಿಣಮಿಸುತ್ತದೆಯೇ? ಎಂಬುದರ ಬಗ್ಗೆ ಪೊಲೀಸರ ಜೊತೆಗೂಡಿ ಸಂಶೋಧನೆ ಮಾಡಲು ನಿಮಾನ್ಸ್ ಪ್ಲಾನ್ ಮಾಡಿಕೊಂಡಿದೆ ಎನ್ನಲಾಗಿದೆ.



### ನೇಣಿಗೆ ಕೊರಳೊಡ್ಡಿದ 7ತಿಂಗಳ ಗರ್ಭಿಣಿ

■ ಸಂಭ್ರಮ ಪ್ರಭ

**ರಾಮನಗರ:** ಗಂಡನ ಹಾಗೂ ಆತನ ಕುಟುಂಬದ ಕಿರುಕುಳಕ್ಕೆ ಬೇಸತ್ತ ಮಹಿಳೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಆತ್ಮಹತ್ಯೆ ಮಾಡಿಕೊಂಡ ಮಹಿಳೆ 7 ತಿಂಗಳ ಗರ್ಭಿಣಿಯಾಗಿದ್ದು, ಕುಟುಂಬದ ಆಕ್ರಂದನ ಮುಗಿಲು ಮುಟ್ಟಿದೆ. ಗಂಡನ ಮನೆಯವರ ಕ್ರೌರ್ಯಕ್ಕೆ ಬಲಿಯಾದ 23ರ ಹರೆಯದ ಹುಡುಗಿ ಹೆಸರು ಜಾಹ್ನವಿ. ಈಕೆ ರಾಮನಗರದ ಮಂಜುನಾಥ ನಗರ ಬಡಾವಣೆಯ ನಿವಾಸಿ ದಿ. ಚನ್ನೇಗೌಡ, ಗೀತಾ ದಂತಿಗಳ ಪುತ್ರಿ. 'ನನ್ನಂತ ಹೆಣ್ಣು ಮಕ್ಕಳಿಗೆ ನ್ಯಾಯ ಕೊಡಿಸಿ' ಎಂದು ಡೆತ್ ನೋಟ್ ಬರೆದಿಟ್ಟು 7 ಗರ್ಭಿಣಿ ಜಾಹ್ನವಿ ತನ್ನ ತವರು ಮನೆಯಲ್ಲಿ ನೇಣಿಗೆ ಕೊರಳೊಡ್ಡಿದ್ದಾಳೆ. ಸುಂದರ ಸಂಸಾರ ನಡೆಸುತ್ತಾ ಗಂಡನೊಂದಿಗೆ ಬದುಕು ಕಟ್ಟಿಕೊಳ್ಳುವ ಮಹದಾಸೆ ಇಟ್ಟುಕೊಂಡಿದ್ದ ಸಾವಿಗೆ ಶರಣಾಗಿದ್ದಾಳೆ.

### ನೂತನ ಕೇಂದ್ರ ಮುಖ್ಯ ಆರ್ಥಿಕ ಸಲಹೆಗಾರ ಆಯ್ಕೆ

■ ಸಂಭ್ರಮ ಪ್ರಭ

**ನವದೆಹಲಿ:** ಕೇಂದ್ರ ಸರ್ಕಾರ ಡಾ. ವಿ. ಅನಂತ ನಾಗೇಶ್ವರನ್ ಅವರನ್ನ ಮುಖ್ಯ ಆರ್ಥಿಕ ಸಲಹೆಗಾರರನ್ನಾಗಿ ನೇಮಿಸಿದೆ. ಈ ಕುರಿತು ಹಣಕಾಸು ಸಚಿವಾಲಯ ಅಧಿಕೃತ ಹೇಳಿಕೆ ಬಿಡುಗಡೆ ಮಂಡಿದ್ದು, 'ವಿ ಅನಂತ ನಾಗೇಶ್ವರನ್ ಅವರನ್ನು ಮುಖ್ಯ ಆರ್ಥಿಕ ಸಲಹೆಗಾರರನ್ನಾಗಿ ನೇಮಿಸುತ್ತದೆ' ಎಂದು ತಿಳಿಸಿದೆ.

### ಹೃದಯಾಘಾತ: 24 ವರ್ಷದ ಪೈಲ್ವಾನ್ ಸಾವು!

■ ಸಂಭ್ರಮ ಪ್ರಭ

**ಹಾಸನ:** ರಾಜ್ಯದಲ್ಲಿ ಹೆಚ್ಚಾಗಿ ಕೇಳಿ ಬರುತ್ತಿರುವ ಹೃದಯಾಘಾತ ಪ್ರಕರಣಗಳು ಆತಂಕ ಮೂಡಿಸಿದ್ದು, ಅದನ್ನು ಮತ್ತಷ್ಟು ಹೆಚ್ಚಿಸುವಂಥ ಮತ್ತೊಂದು ಸುದ್ದಿ ಹೊರಬಿದ್ದಿದೆ. ಅದೇನೆಂದರೆ, ಹೃದಯಾಘಾತಕ್ಕೀಡಾದ 24 ವರ್ಷದ ಪೈಲ್ವಾನ್ ಸಾವು! ಪೈಲ್ವಾನ್ ಆಗಿರುವ, ಹಾಸನದ ವಲ್ಲಭಭಾಯ್ ರಸ್ತೆಯ ನಿವಾಸಿ ಮನು (24) ಹೃದಯಾಘಾತಕ್ಕೀಡಾಗಿ ಮೃತಪಟ್ಟಿದ್ದಾನೆ. ಇಲ್ಲಿನ ಚಂದ್ರು-ಶೀಲ ದಂಪತಿಯ ಈ ಪುತ್ರ ಕಟ್ಟುಮಸ್ತಾದ ದೇಹವೊಂದಿದ್ದು, ಪೈಲ್ವಾನ್ ಕೂಡ ಆಗಿದ್ದು, ವಲ್ಲಭಭಾಯ್ ರಸ್ತೆಯ ಗರಡಿ ಮನೆಯಲ್ಲಿ ಪ್ರತಿನಿತ್ಯ ಅಭ್ಯಾಸ ಮಾಡುತ್ತಿದ್ದ. ಇಂದು ಈತನಿಗೆ ಎದೆನೋವು ಕಾಣಿಸಿಕೊಂಡಿದ್ದು, ತಕ್ಷಣ ಆಸ್ಪತ್ರೆಗೆ ಕರೆದೊಯ್ಯುವ ವ್ಯವಸ್ಥೆ ಮಾಡಲಾಗಿತ್ತು. ಆದರೂ ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ಮನು ಮೃತಪಟ್ಟಿದ್ದಾನೆ.

# ಮೈಸೂರು ಬಳಿಕ ಬೆಂಗಳೂರಲ್ಲೂ ನಕಲಿ ತುಪ್ಪ ತಯಾರಿಕೆ ಪತ್ತೆ

■ ಸಂಭ್ರಮ ಪ್ರಭ

**ಬೆಂಗಳೂರು:** ನಕಲಿ ತುಪ್ಪ ಪ್ರಕರಣ ಮೈಸೂರು ಬಳಿಕ ಬೆಂಗಳೂರು ನಗರದಲ್ಲಿ ಕಂಡುಬಂದಿದೆ. ನಗರದಲ್ಲಿ ನಕಲಿ ತುಪ್ಪದ ಜಾಲ ಪತ್ತೆ ಹಚ್ಚಿದ ಕೆಎಂಎಫ್(ಏಒಈ) ಅಧಿಕಾರಿಗಳು, ಮೈಸೂರಿನಲ್ಲಿ ಉತ್ಪಾದಿಸಲ್ಪಟ್ಟ ನಕಲಿ ತುಪ್ಪ ಬೆಂಗಳೂರು ಹಾಗೂ ಸುತ್ತಮುತ್ತ ಮಾರಾಟ ಮಾಡಲಾಗುತ್ತಿದೆ ಎಂಬ ಬಗ್ಗೆ ಪರಿಶೀಲನೆ ವೇಳೆ ನಕಲಿ ಹಾವಳಿ ಬಯಲಾಗಿದೆ. ಬೆಂಗಳೂರಿನಲ್ಲಿ ನಕಲಿ ತುಪ್ಪದ ಬಗ್ಗೆ ಸಂಶಯಗೊಂಡಿದ್ದ ಅಧಿಕಾರಿಗಳು, ನಕಲಿ ತುಪ್ಪ ಪತ್ತೆಗಾಗಿ ಹಲವು ತಂಡಗಳನ್ನು ಕೆಎಂಎಫ್ ರಚನೆ ಮಾಡಿದೆ. ಹೀಗಾಗಿ ಬೆಂಗಳೂರು ನಗರ ಸೇರಿ ಹತ್ತಾರು ಕಡೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

**ಕೆಎಂಎಫ್ ಅಧಿಕಾರಿಗಳಿಂದ ಪರಿಶೀಲನೆ**

ನಗರದ ಹನುಮಂತನಗರ, ಜಯನಗರ, ರಾಜಾಜಿನಗರ, ನೆಲಮಂಗಲ ಬಳಿಯ ಮಾಕಳಿ, ಹೊಸಕೋಟೆಯ ದೇವನಗೊಂದಿ ಹಾಗೂ ಇನ್ನಿತರ ಕಡೆಗಳಲ್ಲಿ ಕೆಎಂಎಫ್ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಮಾರಾಟದ ಅಂಗಡಿಗಳು ಮತ್ತು ಗೋದಾಮುಗಳಿಗೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ.

ಎಫ್‌ಎಸ್‌ಎಸ್‌ಎಐ ಮತ್ತು ಸ್ಥಳೀಯ ಪೊಲೀಸರ ಜೊತೆಗೂಡಿ ಕೆಎಂಎಫ್ ಅಧಿಕಾರಿಗಳು ಪರಿಶೀಲನೆ ನಡೆಸಿದ್ದು, ದಿಢೀರ್ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ನಂದಿನಿ ತುಪ್ಪದ 1000 ಮಿಲಿ ಸ್ಯಾಚಿ ಹಾಗೂ 15 ಕೆಜಿ ತೂಕದ ಟಿನ್‌ಗಳ ಪರಿಶೀಲನೆ ನಡೆಸಿದ್ದಾರೆ. ಬಳಿಕ 1000 ಮಿಲಿ ಸ್ಯಾಚಿ ಮಾದರಿಯನ್ನು ಎಫ್‌ಎಸ್‌ಎಸ್‌ಎಐಗೆ ರವಾನೆ ಮಾಡಿದ್ದಾರೆ.

ಅದೇ ರೀತಿ ಮತ್ತೊಂದು ಮಾದರಿಯನ್ನು ಕೆಎಂಎಫ್ ಗುಣ ಭರವಸೆ ವಿಭಾಗದಲ್ಲಿ ಪರಿಶೀಲನೆ ವೇಳೆ ನಕಲಿ ತುಪ್ಪ ಎಂಬುವುದು ಪತ್ತೆಯಾಗಿದೆ. ಕೆಎಂಎಫ್ ಅಧಿಕಾರಿಗಳ ಪರಿಶೀಲನೆ ವೇಳೆ ನಕಲಿ ತುಪ್ಪ ಬೆಳಕಿಗೆ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ದೂರು ದಾಖಲಿಸಿದ್ದಾರೆ.

ಕೆಎಂಎಫ್ ಮಾರ್ಕೆಟಿಂಗ್ ವಿಭಾಗದ ಅಪರ ನಿರ್ದೇಶಕ ಬಿ. ಪಿ. ಸುರೇಶ್ ತುಪ್ಪ ಸಗಟು ಮಾರಾಟ ಮಾಡುವ ಸಂಸ್ಥೆ ಮೇಲೆ ದೂರು ನೀಡಿದ್ದಾರೆ. ಸುರೇಶ್ ದೂರಿನ ಮೇರೆಗೆ ಎಫ್‌ಐಆರ್ ದಾಖಲಿಸಿದ ಬಸವನಗುಡಿ ಪೊಲೀಸರು, ಕೇಸ್ ದಾಖಲಿಸಿ ನಕಲಿ ತುಪ್ಪದ ತನಿಖೆ ಕೈಗೊಂಡಿದ್ದಾರೆ.



### ಏಜೆನ್ಸಿ ವಿರುದ್ಧ ಎಫ್‌ಐಆರ್ ದಾಖಲು

ಮೈಸೂರಿನಲ್ಲಿ ನಕಲಿ ನಂದಿನಿ ತುಪ್ಪ ಮಾರಾಟ ಜಾಲ ಪತ್ತೆಯಾದ ಪ್ರಕರಣಕ್ಕೆ ಸಂಬಂಧಿಸಿ ತುಪ್ಪ ಪೂರೈಕೆ ಮಾಡಿದ್ದ ಬೆಂಗಳೂರಿನ ಕೆಎಂಎಫ್ ಒಕ್ಕೂಟದ ಸಗಟು ಮಾರಾಟಗಾರ ಏಜೆನ್ಸಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಬೆಂಗಳೂರಿನ ಬಸವನಗುಡಿ ಠಾಣೆಯಲ್ಲಿ ಶ್ರುತಿ ಮಾರ್ಕೆಟಿಂಗ್ ಕಾರ್ಪೊರೇಷನ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಕೆಎಂಎಫ್ ಹೆಚ್ಚುವರಿ ನಿರ್ದೇಶಕ ಡಾ. ಬಿಪಿ ಸುರೇಶ್ ನೀಡಿದ್ದ ದೂರು ಆಧರಿಸಿ ಪ್ರಕರಣ ದಾಖಲಿಸಲಾಗಿದೆ. ಮೈಸೂರು ಜಿಲ್ಲೆಯ ರಿಂಗ್ ರಸ್ತೆಗೆ ಹೊಂದಿಕೊಂಡಿರುವ ಹೊಸಹುಂಡಿ ಗ್ರಾಮದಲ್ಲಿ ನಕಲಿ ನಂದಿನಿ ತುಪ್ಪದ ಗೋಡಾನ್ ಪತ್ತೆಯಾಗಿತ್ತು. ಸ್ಥಳೀಯರಿಗೆ ಮೊದಲು ಈ ಬಗ್ಗೆ ಮಾಹಿತಿ ಸಿಕ್ಕಿತ್ತು. ಹೀಗಾಗಿ ಮಾನವ ಹಕ್ಕುಗಳ ರಕ್ಷಣಾ ಸಮಿತಿ ಸದಸ್ಯರಿಗೆ ಈ ಜಾಲದ ಬಗ್ಗೆ ಮಾಹಿತಿ ನೀಡಿದ್ದರು. ಡಿಸೆಂಬರ್ 16ರಂದು ಸ್ಥಳಕ್ಕೆ ಸಮಿತಿ ಸದಸ್ಯರು ಹೋಗಿ ಪರಿಶೀಲಿಸಿದಾಗ ನಕಲಿ ಜಾಲ ಪತ್ತೆಯಾಗಿತ್ತು. ಇಲ್ಲಿ ನಂದಿನ ತುಪ್ಪದ ಕವರ್ ತಯಾರಿಸುವ ಕೆಲಸ, ಅಸಲಿ ನಂದಿನಿ ತುಪ್ಪಕ್ಕೆ ಕಲಬೆರಕೆ ಮಾಡುವ ಕೆಲಸ ಹಾಗೂ ಟಿನ್‌ಗಳಿಗೆ ತುಂಬುವ ಕೆಲಸ ಮಾಡಲಾಗುತಿತ್ತು. ತಲಾ 15 ಕೆಜಿ ತೂಕದ ಸುಮಾರು 1,000 ಟಿನ್‌ಗಳು ದೊರಕಿವೆ. ರಾಶಿಗಟ್ಟಲೆ ವನಸ್ಪತಿ, ಪಾಮ್ ಆಯಿಲ್, ಕಲರಿಂಗ್ ಕೆಮಿಕಲ್, ನಂದಿನಿ ಬ್ರ್ಯಾಂಡ್ ತುಪ್ಪದ ನಕಲಿ ಕವರ್, ಪ್ಯಾಕಿಂಗ್ ಯೂನಿಟ್ ಎಲ್ಲವನ್ನೂ ಕಂಡು ಸಮಿತಿ ಸದಸ್ಯರೂ ಅವಕ್ಕಾಗಿದ್ದಾರೆ. ಕೂಡಲೇ ಪೊಲೀಸರು, ಕರ್ನಾಟಕ ಹಾಲು ಉತ್ಪನ್ನಗಳ ಸಹಕಾರ ಒಕ್ಕೂಟ, ಫುಡ್ ಸೇಫ್ಟಿ ಅಧಿಕಾರಿಗಳಿಗೆ ದೂರವಾಣಿ ಮೂಲಕ ಮಾಹಿತಿ ನೀಡಿದ್ದರು.

## ಬಿಬಿಎಂಪಿ ಚುನಾವಣೆಗೆ ಸಿದ್ಧತೆ ಆರಂಭಿಸಿದ ಬಿಜೆಪಿ

■ ಸಂಭ್ರಮ ಪ್ರಭ

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಗೆ ರತೀಯ ಜನತಾ ಪಕ್ಷವು ಸಿದ್ಧತೆ ಆರಂಭಿಸಿದೆ. ಚುನಾವಣೆ ಸಿದ್ಧತೆ ಕುರಿತು ಶಾಸಕರು, ಸಚಿವರು, ಲೋಕಸಭಾ ಸದಸ್ಯರ ಜತೆ ಚರ್ಚಿಸಲಾಯಿತು. ಪಕ್ಷ ಸಂಘಟನೆ, ವಾರ್ಡ್, ಗ್ರೂಪ್ ಮಟ್ಟದಲ್ಲಿ ಸಬಲೀಕರಣಕ್ಕೆ ಒತ್ತು ನೀಡಲು ನಿರ್ಧರಿಸಲಾಗಿದೆ ಎಂದರು. ನಗರ ವ್ಯಾಪ್ತಿಯಲ್ಲಿ ಜನರು ಎದುರಿಸುತ್ತಿರುವ ಮುಖ್ಯ ಸಮಸ್ಯೆಗಳು ಹಾಗೂ ಸಂಘಟನೆಯ ವಿಚಾರದಲ್ಲಿ ಆಗಬೇಕಿರುವ ಕೆಲಸಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು. ನಗರ ವ್ಯಾಪ್ತಿಯಲ್ಲಿ ಬಿಜೆಪಿ ಸದೃಢವಾಗಿದೆ. ಕಳೆದ ಬಾರಿಯೂ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಸದಸ್ಯರೇ ಆಯ್ಕೆಯಾಗಿದ್ದರು. ಈ ಬಾರಿಯೂ ಬಿಬಿಎಂಪಿಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ.



ಸಭೆಯ ವಿವರ ನೀಡಿದ ಸಂಸದ ತೇಜಸ್ವಿ ಸೂರ್ಯ, ಬಿಬಿಎಂಪಿ ಚುನಾವಣೆಗೆ ಪಕ್ಷವನ್ನು ಸಿದ್ಧಪಡಿಸುವ ಕುರಿತು ಮುಖ್ಯಮಂತ್ರಿಯ ಜೊತೆಗೆ ಸುದೀರ್ಘ ಚರ್ಚೆ ನಡೆಯಿತು. ಅಭಿವೃದ್ಧಿ ಕೆಲಸಗಳ ವೇಗ ಹೆಚ್ಚಿಸಬೇಕು. ಬಿಬಿಎಂಪಿ ಚುನಾವಣೆಯಲ್ಲಿ ಬಿಜೆಪಿ ಹೆಚ್ಚು ಸ್ಥಾನ ಪಡೆಯಬೇಕು ಎಂಬ ಬಗ್ಗೆ ಎಲ್ಲರೂ ತಮ್ಮ ಅಭಿಪ್ರಾಯ ಹಂಚಿಕೊಂಡರು. ಬೆಂಗಳೂರಿನ ಅಭಿವೃದ್ಧಿ ಕುರಿತಾಗಿ, ಮೂಲಸೌಕರ್ಯ ಕಲ್ಪಿಸುವುದು, ಕೊಳಚೆ ಪ್ರದೇಶದ ಅಭಿವೃದ್ಧಿ, ಕುಡಿಯುವ ನೀರು, ವಿದ್ಯುತ್ ಸಮಸ್ಯೆ ಬಗ್ಗೆ ಗಮನ ಹರಿಸಲು ಮುಖ್ಯಮಂತ್ರಿ ಸೂಚಿಸಿದರು. ನಗರದ ಸಮಸ್ಯೆಗಳನ್ನು ಒಂದು ವಾರದಲ್ಲಿ ಪರಿಹರಿಸಲು ನಿರ್ಧರಿಸಲಾಯಿತು ಎಂದರು.

ಬೆಂಗಳೂರು ನಗರಕ್ಕೆ ಕಾವೇರಿ ನೀರಿನ ಸುಗಮ ಪೂರೈಕೆ, ಮೆಟ್ರೊ ಯೋಜನೆ, ಉಪನಗರ ರೈಲು ಯೋಜನೆಗಳು ಬಿಜೆಪಿ ಅಧಿಕಾರದ ಅವಧಿಯಲ್ಲಿ ಬಂದಿವೆ. ಅಭಿವೃದ್ಧಿ ಕೆಲಸಗಳ ವೇಗ ಹೆಚ್ಚಿಸುವ ಬಗ್ಗೆ ಹಾಗೂ ನಗರ ವ್ಯಾಪ್ತಿಯ ಜನರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಸಭೆಯಲ್ಲಿ ಚರ್ಚೆಯಾಯಿತು. ಚುನಾವಣೆಗೆ ಸನ್ನದ್ಧರಾಗಲು ಹಾಗೂ ಪ್ರತಿಪಕ್ಷಗಳನ್ನು ಎದುರಿಸಲು ಕಾರ್ಯಕರ್ತರನ್ನು ಹುರಿದುಂಬಿಸಲಾಗುತ್ತಿದೆ ಎಂದು ಹೇಳಿದರು.

ನಗರವಾಸಿಗಳ ಸಮಸ್ಯೆಗಳನ್ನು ಅರಿತು ಮಾಹಿತಿ ನೀಡುವಂತೆ ಮುಖ್ಯಮಂತ್ರಿ ಬೊಮ್ಮಾಯಿ ಬೆಂಗಳೂರಿನ ಶಾಸಕರು, ಸಂಸದರು, ಮುಖಂಡರಿಗೆ ಸೂಚಿಸಿದ್ದಾರೆ. ಅದರಂತೆ ಸೋಮವಾರದಿಂದ ವಿವಿಧೆಡೆ ಸಭೆಗಳು ನಡೆಯಲಿವೆ. ನಗರ ವ್ಯಾಪ್ತಿಯಲ್ಲಿ ಎಷ್ಟು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ ಎನ್ನುವುದನ್ನು ನ್ಯಾಯಾಲಯ ಸೂಚಿಸಲಿದೆ. ಅತಿ ಹೆಚ್ಚು ಸ್ಥಾನ ಗೆಲ್ಲುತ್ತೇವೆ. ಎಲ್ಲ ಸ್ಥಾನಗಳನ್ನು ಗೆಲ್ಲಲು ಪರಿಶ್ರಮ ಹಾಕುತ್ತೇವೆ. ಯಾವ್ಯಾವ ಪಕ್ಷದ ಆಡಳಿತ ಅವಧಿಯಲ್ಲಿ ಬೆಂಗಳೂರಿಗೆ ಏನೆಲ್ಲಾ ದೊರೆಯಿತು ಎನ್ನುವ ವಿವರವನ್ನು ಜನರ ಎದುರು ಇರಿಸುತ್ತೇವೆ. ಅತಿಹೆಚ್ಚು ಮತ ಪಡೆದು ಅಧಿಕಾರಕ್ಕೆ ಬರುತ್ತೇವೆ ಎಂದರು.

# 400 ಪಶು ವೈದ್ಯರ ನೇಮಕ, 166 ಕೈದಿಗಳ ಬಿಡುಗಡೆಗೆ ಸಂಪುಟ ಅಸ್ತು

■ ಸಂಭ್ರಮ ಪ್ರಭ

**ಬೆಂಗಳೂರು:** ಪಶು ಇಲಾಖೆಯಲ್ಲಿ 400 ಪಶು ವೈದ್ಯರನ್ನು ಇಲಾಖೆ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಮತ್ತು ಸನ್ನಡತೆ ಆಧಾರದ ಮೇಲೆ 166 ಕೈದಿಗಳ ಬಿಡುಗಡೆಗೆ ರಾಜ್ಯ ಸಚಿವ ಸಂಪುಟ ಗುರುವಾರ ಒಪ್ಪಿಗೆ ನೀಡಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆ ಬಳಿಕ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಅವರು, ಪಶು ಇಲಾಖೆಯಲ್ಲಿ ಸುಮಾರು 800 ಹುದ್ದೆಗಳು ಖಾಲಿ ಇದ್ದು, 400 ಪಶು ವೈದ್ಯರನ್ನು ನೇಮಕ ಮಾಡಲು ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ ಎಂದರು.

2021–22ನೇ ಶೈಕ್ಷಣಿಕ ಸಾಲಿಗೆ ವಿದ್ಯಾವಿಕಾಸ ಪ್ರೋತ್ಸಾಹದಾಯಕ ಕಾರ್ಯಕ್ರಮದಡಿ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿಗಳ ವಿದ್ಯಾರ್ಥಿಗಳಿಗೆ 93.27 ಕೋಟಿಗಳ ರೂಪಾಯಿ ವೆಚ್ಚದಲ್ಲಿ ಉಚಿತವಾಗಿ ಸಮವಸ್ತ್ರ ವಿತರಿಸುವ ಬಗ್ಗೆಯೂ ತೀರ್ಮಾನಿಸಲಾಗಿದೆ ಎಂದರು.

ರಾಜ್ಯದ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, 14 ಎಂಜಿನಿಯರಿಂಗ್ ಕಾಲೇಜುಗಳು ಮತ್ತು 87 ಸರ್ಕಾರಿ ಪಾಲಿಟೆಕ್ನಿಕ್ಗಳಲ್ಲಿ 6000 ಸ್ಮಾರ್ಟ್ ತರಗತಿಗಳನ್ನು ಆರಂಭಿಸಲು ₹97.50 ಕೋಟಿ ಆಡಳಿತಾತ್ಮಕ ಅನುಮೋದನೆ ನೀಡಲಾಯಿತು ಎಂದರು.



ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ಮತ್ತು ಕರ್ನಾಟಕ ಗೇರು ಅಭಿವೃದ್ಧಿ ನಿಗಮಗಳನ್ನು ಒಂದೇ ನಿಗಮವಾಗಿ ವಿಲೀನಗೊಳಿಸಲು ಒಪ್ಪಿಗೆ

ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿರುವ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ 166 ಕೈದಿಗಳನ್ನು ಸನ್ನಡತೆ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ಮಾಧುಸ್ವಾಮಿ ತಿಳಿಸಿದರು.

ರಾಜ್ಯದಲ್ಲಿ ಸ್ವಾಮಿತ್ವ ಯೋಜನೆಯಡಿ ಗ್ರಾಮೀಣ ವಸತಿ ಹಕ್ಕು ದಾಖಲೆಗಳನ್ನು ಹಾಗೂ ಕೃಷಿ ಭೂಮಿಯ ಹಕ್ಕು ದಾಖಲೆಗಳನ್ನು ಮತ್ತು ಪಟ್ಟಣ/ನಗರ ಆಸ್ತಿಗಳ ದಾಖಲೆಗಳನ್ನು ಸಿದ್ಧಪಡಿಸುವುದಕ್ಕಾಗಿ ಕೆಟಿಪಿಪಿ ಕಾಯ್ದೆ ಅನುಸರಿಸಿ ಅರ್ಹ ಖಾಸಗಿ ಏಜೆನ್ಸಿಗಳಿಂದ ಡ್ರೋನ್ ಒಂದು ಸೇವೆ ಅಥವಾ ವೈಮಾನಿಕ ಸಮೀಕ್ಷೆ ನಡೆಸಲು 287 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅನುಮತಿ ನೀಡಲಾಗಿದೆ. ಕೇಂದ್ರ ಸರ್ಕಾರ 5 ಡ್ರೋನ್ಗಳನ್ನು ನೀಡಿತ್ತು. ಹೆಚ್ಚುವರಿ ಡ್ರೋನ್ಗಳನ್ನು ಖರೀದಿಸಿ ಸಮೀಕ್ಷೆ ನಡೆಸಲಾಗುವುದು ಎಂದು ಸಚಿವರು ತಿಳಿಸಿದರು.

## ವೈದ್ಯರ ಎಡವಟ್ಟಿಗೆ ಯುವಕನಿಗೆ ಕಾಲು ಕತ್ತರಿಸುವ ಹಂತಕ್ಕೆ ಸೋಂಕು

■ ಸಂಭ್ರಮ ಪ್ರಭ

**ಬೆಂಗಳೂರು:** ಜ್ವರ, ನೆಗಡಿ, ಕೆಮ್ಮಿನಿಂದ ಬಳಲುತ್ತಿದ್ದ 18 ವರ್ಷದ ಯುವಕನೊಬ್ಬನಿಗೆ ಎಲೆಕ್ಟ್ರಾನಿಸಿಟಿಯಲ್ಲಿ ವೈದ್ಯರು ಕೊಟ್ಟ ಇಂಜೆಕ್ಷನ್‌ನಿಂದ ಕಾಲನ್ನೇ ಕತ್ತರಿಸುವ ಹಂತಕ್ಕೆ ಸೋಂಕು ತಗುಲಿದೆ! ಎಲೆಕ್ಟ್ರಾನಿಕ್‌ಸಿಟಿ ಬಿಜಿ ರಸ್ತೆಯ ಶಶಿಕಲಾ ಅವರ ಮಗ ಅಭಿ ಎಂಬಾತನ ಕಾಲಿಗೆ ಸೋಂಕು ತಗುಲಿದೆ. ತಾಯಿ ಶಶಿಕಲಾ ಕೊಟ್ಟ ದೂರಿನ ಆಧಾರದ ಮೇಲೆ ವೈದ್ಯರಾದ ಡಾ.ಅಶೋಕ್ ಮತ್ತು ಕ್ಲಿನಿಕ್ ಮಾಲೀಕ ಆರೋಗ್ಯಸ್ವಾಮಿ ವಿರುದ್ಧ ಎಲೆಕ್ಟ್ರಾನಿಕ್ ಸಿಟಿ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಅಷ್ಟಕ್ಕೂ ಏನಾಯ್ತು ಅಭಿಗೆ? ಇಲ್ಲಿದೆ ತಾಯಿ ಕೊಟ್ಟ ದೂರಿನ ವಿವರ.

ಶಶಿಕಲಾ ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಇವರ ಮಗ ಅಭಿ (18) ನೆಗಡಿ, ಕೆಮ್ಮು, ಜ್ವರದಿಂದ ಬಳಲುತ್ತಿದ್ದ ಹಿನ್ನೆಲೆಯಲ್ಲಿ ಜ.6ರಂದು ಚಿಕಿತ್ಸೆ ಕೊಡಿಸಲೆಂದು ಬೇಗೂರಿನ ಮೈಲಸಂದ್ರದಲ್ಲಿರುವ ಕ್ಲಿನಿಕ್‌ಗೆ ಕರೆದುಕೊಂಡು ಹೋಗಿದ್ದರು. ಅಲ್ಲಿ ಡಾ.ಅಶೋಕ್ ಅವರು ಅಭಿಗೆ ಇಂಜೆಕ್ಷನ್ ನೀಡಿದ್ದರು. ಇಂಜೆಕ್ಷನ್ ನೀಡಿದ ಜಾಗದಿಂದ ಇಡೀ ಕಾಲಿಗೆ ಸೋಂಕು ಹರಡಿ ಇನ್‌ಫೆಕ್ಷನ್ ಆಗಿದೆ.

ಹೀಗಾಗಿ ತಾವು ಮಾಡಿದ ತಪ್ಪನ್ನು ಸರಿಪಡಿಸಿಕೊಳ್ಳಲು ನಾವೆ ಸೋಂಕಿಗೆ ಚಿಕಿತ್ಸೆ ನೀಡುವುದಾಗಿ ಕ್ಲಿನಿಕ್ ಮಾಲೀಕ ಆರೋಗ್ಯಸ್ವಾಮಿ ಹೇಳಿದ್ದರು. ನಂತರ ಜಿಗಣಿಯ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನೂ ಕೊಡಿಸಿದ್ದರು. ಇದೀಗ ತಮ್ಮಿಂದ ಚಿಕಿತ್ಸೆ ಕೊಡಿಸಲು ಆಗಲ್ಲ ಎಂದು ಕ್ಲಿನಿಕ್‌ನವರು ತಗಾದೆ ತೆಗೆದಿದ್ದಾರೆ. ಸದ್ಯ ಕಾಲು ಕತ್ತರಿಸುವ ಹಂತಕ್ಕೆ ಸೋಂಕು ಹರಡಿಕೊಂಡಿದೆ

## ಪೊಲೀಸ್ ಸಿಬ್ಬಂದಿಗೆ ನಿಂದನೆ ಸ್ಪಷ್ಟನೆ ನೀಡಿದ ಬಿಜೆಪಿ ಶಾಸಕ

■ ಸಂಭ್ರಮ ಪ್ರಭ


**ಬೆಂಗಳೂರು:** ಬಿಜೆಪಿ ಶಾಸಕ ಎಂಪಿ ಕುಮಾರಸ್ವಾಮಿಯವರ ಮೇಲೆ ಗುರುವಾರ ರಾತ್ರಿ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಯೊಂದಿಗೆ ವಾಗ್ವಾದ ನಡೆಸಿದ ಆರೋಪ ಎದುರಾಗಿತ್ತು. ಇಂದು ಘಟನೆಯ ಕುರಿತಂತೆ ಅವರು ಪ್ರತಿಕ್ರಿಯೆ ನೀಡಿ, ವಿಷಾದ ವ್ಯಕ್ತಪಡಿಸಿದ್ದಾರೆ. ಪೊಲೀಸರೊಂದಿಗೆ ವಾಗ್ವಾದ ಪ್ರಕರಣದ ಬಗ್ಗೆ ಸ್ಪಷ್ಟನೆ ನೀಡಿರುವ ಕುಮಾರಸ್ವಾಮಿ ನಿನ್ನೆ ರಾತ್ರಿ ನನ್ನ ವರ್ತನೆಯ ಬಗ್ಗೆ ನನಗೆ ಬೇಸರವಾಗಿದೆ ಎಂದು ಹೇಳಿದ್ದಾರೆ. "ಆ ಪೊಲೀಸ್‌ಗೆ ನಾನು ಶಾಸಕನೆಂಬುದೇ ಗೊತ್ತಿಲ್ಲ. ನನ್ನ ಕಾರು ಹೋಗುವುದಕ್ಕೆ ಮುಕ್ಕಾಲು ಗಂಟೆ ಕಾಲ ಸಿಬ್ಬಂದಿ ಬಿಡಲೇ ಇಲ್ಲ. ಪೊಲೀಸರು ಹೊಯ್ಸಳ ಕಾರು ಅಡ್ಡಹಾಕಿಕೊಂಡಿದ್ದರು. ಹೀಗಾಗಿ ನಾನೇ ಸ್ಥಳಕ್ಕೆ ಹೋಗಿ ಮಾತನಾಡಿದ್ದೆ. ನಿನಗೆ ಬುದ್ಧಿ ಇಲ್ಲವಾ? ಕಾರು ಹೋಗುವುದಕ್ಕೆ ಬಿಡಲ್ವಾ? ಎಂದು ಪ್ರಶ್ನಿಸಿದ್ದೆ. ಈ ವೇಳೆ ಸಿಬ್ಬಂದಿ ಪೆದ್ದ ಪೆದ್ದನಾಗಿ ಮಾತನಾಡಿದ್ದರು. ನಾನು ಶಾಸಕನೇ ಅಲ್ಲ ಎನ್ನುವಂತೆ ಮಾತನಾಡಿದ್ದರು. ಈ ವೇಳೆ ಸಿಟ್ಟಾಗಿ ನಾನು ಕೂಡ ಮಾತನಾಡಿದ್ದೇನೆ. ಬಳಿಕ ಘಟನಾ ಸ್ಥಳಕ್ಕೆ ಹಿರಿಯ ಅಧಿಕಾರಿ ಬಂದರು. ಎಸಿಪಿ ಆ ಪೊಲೀಸ್ ಸಿಬ್ಬಂದಿಗೆ ಬುದ್ಧಿ ಹೇಳಿ, ಪರಿಸ್ಥಿತಿಯನ್ನು ತಿಳಿಗೊಳಿಸಿದರು" ಎಂದಿದ್ದಾರೆ ಎಂಪಿ ಕುಮಾರಸ್ವಾಮಿ.



## ಶಾಲಾ ವಿದ್ಯಾರ್ಥಿಗಳಿಗೆ ಶೇ. 75ರಷ್ಟು ಹಾಜರಾತಿ ಕಡ್ಡಾಯವಲ್ಲ: ನಾಗೇಶ್

■ ಸಂಭ್ರಮ ಪ್ರಭ

**ಬೆಂಗಳೂರು:** ಕೊರೋನಾ ಸೋಂಕಿನ ಹಿನ್ನೆಲೆಯಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಹಾಜರಾತಿ ಕಡ್ಡಾಯವಲ್ಲ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಬಿ ಸಿ ನಾಗೇಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಬಿ ಸಿ ನಾಗೇಶ್, 'ಬೆಂಗಳೂರಿನಲ್ಲಿ 1ನೇ ತರಗತಿಯಿಂದ 9ನೇ ತರಗತಿಯ ವರೆಗೆ ಶಾಲೆ ತೆರೆಯಲು ತಜ್ಞರೊಂದಿಗೆ ಚರ್ಚಿಸಲಾಗುತ್ತದೆ. ಅವರ ಸಲಹೆ ಮೇರೆಗೆ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. ಶಾಲೆ ಪ್ರಾರಂಭಿಸಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಆದ್ಯತೆ ಎಂದರು. ಈ ವರ್ಷ ಮಕ್ಕಳಿಗೆ ಹಾಜರಾತಿ ಕಡ್ಡಾಯವಲ್ಲ. ಯಾವುದೇ ಮಕ್ಕಳಿಗೂ ಶಾಲೆಗೆ ಬರಲು ಬಲವಂತ ಮಾಡಲಾಗುವುದಿಲ್ಲ. ಪರೀಕ್ಷೆಗೂ ಶೇಕಡ.75 ಹಾಜರಾತಿ ಕಡ್ಡಾಯ ಮಾಡುವುದಿಲ್ಲ. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆ ನಿಗದಿಯಂತೆ ನಡೆಯುತ್ತದೆ. ಪೂರ್ಣ ಪ್ರಮಾಣದ ಆಫ್‌ಲೈನ್ ತರಗತಿ ಪ್ರಾರಂಭ ಆಗುವವರೆಗೂ ಚಂದನ, ಆಕಾಶವಾಣಿಯಲ್ಲಿ ಪಠ್ಯ ಬೋಧನೆ ಮುಂದುವರೆಯುತ್ತದೆ ಎಂದು ನಾಗೇಶ್ ಭರವಸೆ ನೀಡಿದ್ದಾರೆ. ಆದ್ದರಿಂದ ಇಂದಿನ ಕ್ಯಾಬಿನೆಟ್ ಸಭೆಯಲ್ಲಿಯೂ ಈ ಬಗ್ಗೆ ಚರ್ಚೆ ನಡೆಸುತ್ತೇನೆ. ತಜ್ಞರು ಒಪ್ಪಿಗೆ ನೀಡಿದರೆ ಸೋಮವಾರದಿಂದ ಶಾಲೆ ಆರಂಭ ಮಾಡುತ್ತೇವೆ ಎಂದು ಸಚಿವ ಬಿ ಸಿ ನಾಗೇಶ್ ತಿಳಿಸಿದ್ದಾರೆ. ಮೂರನೇ ಅಲೆಯಿಂದ ಯಾವ ವಿದ್ಯಾರ್ಥಿಗೂ ಹೆಚ್ಚಿನ ತೊಂದರೆ ಆಗಿಲ್ಲ. ಆದರೂ ಆರೋಗ್ಯ ವಿಚಾರದಲ್ಲಿ ಶಿಕ್ಷಣ ಇಲಾಖೆ ಯಾವುದೇ ಕ್ರಮ ತೆಗೆದುಕೊಳ್ಳಲು ಆಗುವುದಿಲ್ಲ.



# ಬೇರೆ ಪಕ್ಷಕ್ಕೆ ಅರ್ಜಿ ಹಾಕಿಲ್ಲ, ಬಿಜೆಪಿ ತೊರೆಯಲ್ಲ

■ ಸಂಭ್ರಮ ಪ್ರಭ

**ಬೆಂಗಳೂರು:** ಅಧಿಕಾರ ಸ್ಥಾನ, ಮಾನ ನೀಡಿದ ಬಿಜೆಪಿ ಪಕ್ಷವನ್ನು ತೊರೆಯುವ ಪ್ರಶ್ನೆಯೇ ಇಲ್ಲ ಎಂದು ಅಬಕಾರಿ ಸಚಿವ ಕೆ.ಗೋಪಾಲಯ್ಯ ಹೇಳಿದ್ದಾರೆ. ವಿಧಾನಸೌಧದ ಬಳಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಕಾಂಗ್ರೆಸ್, ಜೆಡಿಎಸ್ಗೆ ರಾಜೀನಾಮೆ ಕೊಟ್ಟು 17 ಜನ ಬಿಜೆಪಿಯಿಂದ ಗೆದ್ದು ಶಾಸಕರಾದ ಮೇಲೆ ಪಕ್ಷ ಅಧಿಕಾರ ನೀಡಿದೆ. ಯಡಿಯೂರಪ್ಪ ಅವರ ಮಾತು ಕೊಟ್ಟಂತೆ ನಡೆದು ಕೊಂಡಿದ್ದಾರೆ. ಯಾರೂ ಕೂಡ ನಾವು ಪಕ್ಷ ತೊರೆಯುವ ಪ್ರಶ್ನೆಯೇ ಬರುವುದಿಲ್ಲ. ಪದೇ ಪದೇ ಇಂತಹ ವಿಚಾರದ ಬಗ್ಗೆ ಗೊಂದಲ ಉಂಟು ಮಾಡುವವರೆ ಇದಕ್ಕೆ ಉತ್ತರ ನೀಡಬೇಕು ಎಂದರು. ಬರುವ ಚುನಾವಣೆಯಲ್ಲೂ ಬಿಜೆಪಿಯಿಂದಲೇ ಮತ್ತೆ ಕಣಕ್ಕಿಳಿಯುತ್ತೇವೆ. ಇಡೀ ವಿಶ್ವದಲ್ಲಿಯೇ ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಬಿಜೆಪಿ ದೇಶದಲ್ಲೂ ಬಲಿಷ್ಠವಾಗಿ ಬೆಳೆದಿದೆ. ಇಂಥಹ ಸದೃಢ ಪಕ್ಷ ನಮಗೆ ಅಧಿಕಾರ, ಸ್ಥಾನ ಮಾನ ಎಲ್ಲವನ್ನೂ ನೀಡಿದೆ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು. ಕೇಂದ್ರದಲ್ಲಿ ನರೇಂದ್ರಮೋದಿ ಮತ್ತು ರಾಜ್ಯದಲ್ಲಿ ಬಸವರಾಜ ಬೊಮ್ಮಾಯಿ ಅವರು ಜನಪರವಾದ ಸಾಕಷ್ಟು ಕೆಲಸಗಳನ್ನು ಮಾಡುತ್ತಿದ್ದಾರೆ. ಕೊರೊನಾ ಮಧ್ಯೆಯೂ ಅಭಿವೃದ್ಧಿ ಕಾಮಗಾರಿಗಳು ನಿರಂತರವಾಗಿ ನಡೆದಿವೆ. ನಾವೂ ಕೂಡ ನಮ್ಮ ಕ್ಷೇತ್ರಗಳಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿಕೊಂಡು ಬರುತ್ತಿದ್ದೇವೆ. ವಿನಾಕಾರಣ ಪಕ್ಷಾಂತರದ ಬಗ್ಗೆ ಮಾತನಾಡುವುದಕ್ಕೆ ಎಲ್ಲರೂ ತೆರೆ ಎಳೆಯಬೇಕು ಎಂದರು. ಬೇರೆ ಪಕ್ಷಕ್ಕೆ ಹೋಗುತ್ತೇವೆ ಎಂದು ಯಾರೂ ಕೂಡ ಅರ್ಜಿಹಾಕಿ ನಿಂತುಕೊಂಡಿಲ್ಲ. ಬರುವ ವಿಧಾನಸಭಾ ಸಭಾ ಚುನಾವಣೆಯಲ್ಲೂ ಮತ್ತೆ ಬಿಜೆಪಿಯಿಂದಲೇ ಕಣಕ್ಕೆ ಇಳಿಯುತ್ತೇವೆ. ಬಸವರಾಜ್ ಬೊಮ್ಮಾಯಿ ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬರುವುದಾಗಿ ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.



ಬೇರೆ ಪಕ್ಷಗಳ ಯಾರೂ ಕೂಡ ನಮ್ಮೊಂದಿಗೆ ಸಂಪರ್ಕದಲ್ಲಿ ಇಲ್ಲ. ಅದರ ಅವಶ್ಯಕತೆ ಕೂಡ ನಮಗಿಲ್ಲ.ಬಿಜೆಪಿ ನನಗೆ ಎಲ್ಲವನ್ನೂ ನೀಡಿದೆ. ನಾನು ಬೇರೆ ಪಕ್ಷಕ್ಕೆ ಹೋಗಿ ಮಾಡುವುದು ಏನೂ ಇಲ್ಲ. ಬಿಜೆಪಿ ಪಕ್ಷ ಸಚಿವಸ್ಥಾನ ನೀಡಿದೆ. ಎರಡು ಜಿಲ್ಲೆಗಳ ಉಸ್ತುವಾರಿ ನೀಡಿದೆ. ನಮಗೆ ಇದಕ್ಕಿಂತ ಇನ್ನೇನು ಬೇಕಿದೆ.? ರಾಜ್ಯದಲ್ಲೂ ಮತ್ತು ಬಿಬಿಎಂಪಿಯಲ್ಲೂ ಕೂಡ ಬಿಜೆಪಿಯೇ ಅಧಿಕಾರಕ್ಕೆ ಬರಲಿದೆ ಎಂದರು.

ಪಕ್ಷ ತೊರೆದು ಬಂದ ಎಲ್ಲ 17 ಜನರೂ ಕೂಡ ನಾವು ಒಟ್ಟಿಗೆ ಇದ್ದೇವೆ. ಮುಖ್ಯಮಂತ್ರಿಗಳ ಬದಲಾವಣೆ ವಿಚಾರಗಳು ಶುದ್ಧಸುಳ್ಳು, ಬಸವರಾಜ್ ಬೊಮ್ಮಾಯಿ ಅವರು ಸಿಎಂ ಆಗಿ 6 ತಿಂಗಳಾಗಿದೆ ಅಷ್ಟೇ. ಆದರೆ ಅವರ ಬದಲಾವಣೆ ಕುರಿತು ಕಪೋಲಕಲ್ಪಿತ ಸುದ್ದಿಗಳನ್ನು ಕೆಲವರು ಹಬ್ಬಿಸುತ್ತಿದ್ದಾರೆ. ಅವರ ನೇತೃತ್ವದಲ್ಲಿ ನಮ್ಮ ಸರ್ಕಾರ ಸುಭದ್ರವಾಗಿದೆ. ಅವರ ಮುಂದಾಳತ್ವದಲ್ಲಿಯೇ ನಾವು ಚುನಾವಣೆಯನ್ನು ಎದುರಿಸುತ್ತೇವೆ ಎಂದು ಸುದ್ದಿಗಾರರ ಮತ್ತೊಂದು ಪ್ರಶ್ನೆಗೆ ಸಚಿವ ಕೆ.ಗೋಪಾಲಯ್ಯ ಉತ್ತರಿಸಿದರು.

## ಪೊಲೀಸರಿಗೆ ಬಾಡಿವೋರ್ನ್ ಕ್ಯಾಮೆರಾ ಖರೀದಿ: ಕಾರ್ಯಾದೇಶ ಸಲ್ಲಿಕೆಗೆ ಗಡುವು

■ ಸಂಭ್ರಮ ಪ್ರಭ

**ಬೆಂಗಳೂರು:** ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಯು ಬಳಸಲು ಬಾಡಿವೋರ್ನ್ ಕ್ಯಾಮೆರಾ (ದೇಹದ ಮೇಲೆ ಧರಿಸಲಾಗುವ ಕ್ಯಾಮೆರಾ) ಖರೀದಿಗಾಗಿ ಹೊರಡಿಸಿರುವ ಕಾರ್ಯಾದೇಶ ಹಾಗೂ ಅದಕ್ಕೆ ಸಂಬಂಧಿಸಿದ ಇತರೆ ದಾಖಲೆ ಸಲ್ಲಿಸಲು ಕರ್ನಾಟಕ ಹೈಕೋರ್ಟ್ ಗುರುವಾರ ರಾಜ್ಯ ಸರ್ಕಾರಕ್ಕೆ ಒಂದು ವಾರದ ಕಾಲಾವಕಾಶ ನೀಡಿದೆ.



ವಕೀಲೆ ಗೀತಾ ಮಿಶ್ರಾ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಮನವಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ರಿತುರಾಜ್ ಅವಸ್ಥಿ ಮತ್ತು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ನೇತೃತ್ವದ ವಿಭಾಗೀಯ ಪೀಠವು ಗುರುವಾರ ನಡೆಸಿತು. ರಾಜ್ಯ ಸರ್ಕಾರವನ್ನು ಪ್ರತಿನಿಧಿಸಿದ್ದ ವಕೀಲೆ ಎಚ್ ವಾಣಿ ಅವರು "ಬಾಡಿವೋರ್ನ್ ಕ್ಯಾಮೆರಾ ಖರೀದಿಗಾಗಿ ಹೊರಡಿಸಿರುವ ಕಾರ್ಯಾದೇಶ ಮತ್ತು ಇತರೆ ಎಲ್ಲಾ ದಾಖಲೆಗಳು ಸಿದ್ಧವಿದೆ. ಆದರೆ, ತಾಂತ್ರಿಕ ಸಮಸ್ಯೆಯಿಂದಾಗಿ ಇ–ಫೈಲಿಂಗ್ ಮಾಡಲಾಗಲಿಲ್ಲ. ಒಂದು ವಾರ ಕಾಲಾವಕಾಶ ನೀಡಿದರೆ ನ್ಯಾಯಾಲಯಕ್ಕೆ ಎಲ್ಲಾ ಅಗತ್ಯ ದಾಖಲೆ ಸಲ್ಲಿಸಲಾಗುವುದು" ಎಂದರು. ಇದನ್ನು ಪುರಸ್ಕರಿಸಿದ ಪೀಠವು ಫೆಬ್ರವರಿ 7ಕ್ಕೆ ವಿಚಾರಣೆ ಮುಂದೂಡಿತು ಕಳೆದ ವಿಚಾರಣೆಯ ಸಂದರ್ಭದಲ್ಲಿ ಬಾಡಿವೋರ್ನ್ ಕ್ಯಾಮೆರಾ ಖರೀದಿಗಾಗಿ ಹೊರಡಿಸಿರುವ ಕಾರ್ಯಾದೇಶ ಮತ್ತು ಇತರೆ ಎಲ್ಲಾ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸುವಂತೆ ಪೀಠವು ಸರ್ಕಾರಕ್ಕೆ ಸೂಚಿಸಿತ್ತು.

ಬಾಡಿವೋರ್ನ್ ಕ್ಯಾಮೆರಾ ಧರಿಸುವುದರಿಂದ ಪೊಲೀಸ್ ಸಿಬ್ಬಂದಿಯ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬಹುದು. ಪೊಲೀಸ್ ಸಿಬ್ಬಂದಿಯ ಕರ್ತವ್ಯ ನಿರ್ವಹಣೆಯನ್ನು ಪೊಲೀಸ್ ಠಾಣೆಯಿಂದಲೇ ಹಿರಿಯ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಬಹುದು. ಆದ್ದರಿಂದ ಬೆಂಗಳೂರು ನಗರ ಪೊಲೀಸರಿಗಾಗಿ ಖರೀದಿಸಿರುವ 50 ಬಾಡಿವೋರ್ನ್ ಕ್ಯಾಮೆರಾ ಬಳಸುವಂತೆ ನಿರ್ದೇಶಿಸಬೇಕು ಎಂದು ಕೋರಲಾಗಿತ್ತು


ಜಾಹೀರಾತಿಗಾಗಿ ಸಂಪರ್ಕಿಸಿ 9844344445 080-23482445 sambramaprabha@gmail.com

## ಸಣ್ ಸುದ್ದಿ

### ಗೌಡರು ಬದುಕಿರುವವರೆಗೂ ಜೆಡಿಎಸ್ ಮುಗಿಸೋಕೆ ಯಾರಿಂದಲೂ ಸಾಧ್ಯವಿಲ್ಲ

■ ಸಂಭ್ರಮ ಪ್ರಭ

**ಬೆಂಗಳೂರು:** ನಮ್ಮ ಬಸ್ಸು ಖಾಲಿ ಇಲ್ಲ, ಖಾಲಿ ಇರುವ ಬಸ್ಸುಗಳಲ್ಲಿ ಸಂಪರ್ಕ ಬೆಳೆಸಲು ಹೋಗುತ್ತಾರೆ, ಎರಡೂ ರಾಷ್ಟ್ರೀಯ ಪಕ್ಷಗಳು 2023ರ ಚುನಾವಣೆಗೆ ಮೊದಲು ನಮ್ಮ ಬಸ್ಸು ಹತ್ತಿರಿ ಎಂದು ಕರೆಯುತ್ತಿರುತ್ತಾರೆ.



ಎರಡೂ ರಾಷ್ಟ್ರೀಯ ಪಕ್ಷಗಳ ಸವಾಲುಗಳನ್ನು ಸ್ವೀಕರಿಸುತ್ತೇವೆ ಎಂದು ಜೆಡಿಎಸ್ ನಾಯಕ ಹೆಚ್ ಡಿ ರೇವಣ್ಣ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಹಾಸನದಲ್ಲಿ ನನ್ನ ಮಗನಿಗೆ ಜನ ಆಶೀರ್ವಾದ ಮಾಡಿದ್ದಾರೆ. ದೇವೇಗೌಡರಿಗೆ ಚಾಕು ಹಾಕಿದವರೆಲ್ಲ ಏನೇನೋ ಆಗಿದ್ದಾರೆ. ರಾಷ್ಟ್ರೀಯ ಪಕ್ಷಗಳು ತಿರುಕನ ಕನಸು ಕಾಣುತ್ತಿವೆ ಎಂದು ಬಿಜೆಪಿ ಮತ್ತು ಕಾಂಗ್ರೆಸ್‌ಗೆ ಟಾಂಗ್ ಕೊಟ್ಟಿದ್ದಾರೆ. ಬೆಳಗ್ಗೆಯೆದ್ದರೆ ಕಾಂಗ್ರೆಸ್ ನವರು ದೇವೇಗೌಡ, ಕುಮಾರಸ್ವಾಮಿಯ ಭಜನೆ ಮಾಡುತ್ತಾರೆ. ಸಿಎಂ ಇಬ್ರಾಹಿಂ ಜೆಡಿಎಸ್ ಗೆ ಬರುವ ಬಗ್ಗೆ ದೇವೇಗೌಡರು ಮತ್ತು ಕುಮಾರಸ್ವಾಮಿಯವರು ತೀರ್ಮಾನಿಸುತ್ತಾರೆ, ನನ್ನದೇನೂ ಇಲ್ಲ ಎಂದರು. ಜೆಡಿಎಸ್ ನ್ನು ಮುಗಿಸುವ ಬಗ್ಗೆ ಯೋಚನೆ ಕಾಂಗ್ರೆಸ್ ಮತ್ತು ಬಿಜೆಪಿಯದ್ದು ತಿರುಕನ ಕನಸು, ದೇವೇಗೌಡರು ಬದುಕಿರುವವರೆಗೂ ಅದು ಸಾಧ್ಯವಿಲ್ಲ ಎಂದು ಹೇಳಿದರು.

### ಬಂಡೆಪ್ಪ ಕಾಶೆಂಪೂರ್ ನೇತೃತ್ವದಲ್ಲಿ ಜೆಡಿಎಸ್ ನೂತನ ಕೋರ್ ಕಮಿಟಿ

■ ಸಂಭ್ರಮ ಪ್ರಭ

**ಬೆಂಗಳೂರು:** ಮುಂದಿನ ವರ್ಷ ನಡೆಯಲಿರುವ ವಿಧಾನಸಭೆ ಚುನಾವಣೆಗೆ ಪೂರ್ವ ತಯಾರಿ ಆರಂಭಿಸಿರುವ ಜಾತ್ಯಾತೀತ ಜನತಾದಳ, ಕೋರ್ ಕಮಿಟಿಯಲ್ಲಿ ಹಲವು ಬದಲಾವಣೆಯನ್ನು ಮಾಡಿದೆ. ಎಲ್ಲಾ ಪ್ರಾಂತ್ಯ/ಜಾತಿ ಆಧಾರಿತವಾಗಿ ಕೋರ್ ಕಮಿಟಿಯಲ್ಲಿ ಬದಲಾವಣೆಯನ್ನು ಮಾಡಲಾಗಿದೆ. ನೂತನ ಕಾರ್ಯಾಧ್ಯಕ್ಷರು ಮತ್ತು ಪರಿಶಿಷ್ಠ ಪಂಗಡಕ್ಕೆ ಹೊಸ ಅಧ್ಯಕ್ಷರನ್ನು ನೇಮಿಸಲಾಗಿದೆ.



ಜೆಡಿಎಸ್ ರಾಜ್ಯಧ್ಯಕ್ಷರಾಗಿ ಎಚ್. ಕೆ. ಕುಮಾರಸ್ವಾಮಿ ಮುಂದುವರಿಯಲಿದ್ದಾರೆ. ಗಣರಾಜ್ಯೋತ್ಸವ ಕಾರ್ಯಕ್ರಮದ ನಂತರ ಅವರು ಮಾಧ್ಯಮಗೋಷ್ಠಿಯಲ್ಲಿ 20 ಸದಸ್ಯರ ಪಟ್ಟಿಯನ್ನು ಕುಮಾರಸ್ವಾಮಿ ಬಿಡುಗಡೆ ಮಾಡಿದ್ದಾರೆ. ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವ ಇಬ್ಬರಿಗೆ ಮತ್ತು ನೂತನ ಕೋರ್ ಕಮಿಟಿ ಸದಸ್ಯರಿಗೆ ಕುಮಾರಸ್ವಾಮಿ ಅಭಿನಂದನೆ ಸಲ್ಲಿಸಿದ್ದಾರೆ. ಮಾಜಿ ಸಚಿವ ಬಂಡೆಪ್ಪ ಕಾಶೆಂಪೂರ್ ನೇತೃತ್ವದಲ್ಲಿ ಜೆಡಿಎಸ್ ನೂತನ ಕೋರ್ ಕಮಿಟಿ ರಚನೆಯಾಗಿದೆ. ಜೆಡಿಎಸ್ ಪರಿಶಿಷ್ಠ ಪಂಗಡದ ರಾಜ್ಯಾಧ್ಯಕ್ಷರಾಗಿ ಶಾಸಕ ರಾಜಾ ವೆಂಕಟಪ್ಪ ನಾಯಕ ಮತ್ತು ಮಾಜಿ ಸಚಿವ ಎನ್. ಎಂ.ನಬಿ ಅವರನ್ನು ಜೆಡಿಎಸ್ ರಾಜ್ಯ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡಿ ರಾಜ್ಯಾಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ ನೇಮಕ ಮಾಡಿದ್ದಾರೆ. ಕೋರ್ ಕಮಿಟಿಯಲ್ಲಿ ವೆಂಕಟರಾವ್ ನಾಡಗೌಡ, ಸಿ ಎಸ್ ಪುಟ್ಟರಾಜು, ಪ್ರಜ್ವಲ್ ರೇವಣ್ಣ, ಕುಪೇಂದ್ರ ರೆಡ್ಡಿ, ವೈ ಎಸ್ ವಿ ದತ್ತ, ಬಿ ಎಂ ಫಾರೂಕ್ ಸೇರಿದಂತೆ ಇತರರಿದ್ದಾರೆ. ಮಾಜಿ ಪ್ರಧಾನಿ ಹಾಗೂ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಎಚ್‌ಡಿ ದೇವೇಗೌಡ, ಕುಮಾರಸ್ವಾಮಿ, ರಾಜ್ಯ ಘಟಕದ ಅಧ್ಯಕ್ಷ ಎಚ್‌ಕೆ ಕುಮಾರಸ್ವಾಮಿ ಅವರು ವಿಶೇಷ ಆಹ್ವಾನಿತರ ಪಟ್ಟಿಯಲ್ಲಿದ್ದಾರೆ.

# ರಾಜ್ಯದಲ್ಲಿ 'ಆಯಾ ರಾಮ್, ಗಯಾ ರಾಮ್' ಸೀಸನ್ ಶೀಘ್ರದಲ್ಲೇ ಆರಂಭ: ಸತೀಶ್ ಜಾರಕಿಹೊಳಿ

■ ಸಂಭ್ರಮ ಪ್ರಭ

**ಬೆಳಗಾವಿ:** ಶಾಸಕರ ಪಕ್ಷಾಂತರಕ್ಕೆ ಸಂಬಂಧಿಸಿದಂತೆ ಬಿಜೆಪಿ–ಕಾಂಗ್ರೆಸ್ ವಾಗ್ಯುದ್ಧ ಮುಂದುವರೆದಿದ್ದು, ರಾಜ್ಯದಲ್ಲಿ ವಿಧಾನಸಭಾ ಚುನಾವಣೆ ಸಮೀಪಿಸುವಾಗ ಒಂದು ಪಕ್ಷದಿಂದ ಮತ್ತೊಂದು ಪಕ್ಷಕ್ಕೆ ಶಾಸಕರ ಪಕ್ಷಾಂತರಗೊಳ್ಳುವುದು ಶೀಘ್ರದಲ್ಲೇ ಆರಂಭಗೊಳ್ಳಲಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಗುರುವಾರ ಹೇಳಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಕಾಂಗ್ರೆಸ್‌ನಿಂದ ಪಕ್ಷಾಂತರಗೊಂಡ 17 ಶಾಸಕರಲ್ಲಿ ಹೆಚ್ಚಿನವರು ಸೇರಿದಂತೆ ಅನೇಕ ಸಚಿವರು ಮತ್ತು ಇತರ ಪಕ್ಷಗಳ ಶಾಸಕರು ಕಾಂಗ್ರೆಸ್‌ನೊಂದಿಗೆ ಸಂಪರ್ಕದಲ್ಲಿದ್ದಾರೆ" ಎಂದು ಹೇಳಿದ್ದಾರೆ.

ಇದೇ ವೇಳೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಸಮರ್ಥಿಸಿಕೊಂಡ ಅವರು, 16 ಕಾಂಗ್ರೆಸ್ ಶಾಸಕರು ಬಿಜೆಪಿಗೆ ಬದಲಾಗುತ್ತಾರೆ ಎಂಬ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಹೇಳಿಕೆ ಸುಳ್ಳು. ರಮೇಶ್ ಮತ್ತು ಎಂಎಲ್ ಸಿ ಲಖನ್ ಜಾರಕಿಹೊಳಿ ಅನಗತ್ಯವಾಗಿ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಈಗಾಗಲೇ ಬಿಜೆಪಿ 120 ಸ್ಥಾನಗಳೊಂದಿಗೆ ಹೌಸ್‌ಫುಲ್ ಆಗಿದೆ. ಕಾಂಗ್ರೆಸ್ ಮತ್ತು ಜೆಡಿಎಸ್‌ನಿಂದ ಇನ್ನೂ 16 ಮಂದಿ ಶಾಸಕರನ್ನು ಕಣಕ್ಕಿಳಿದರೆ ಪಕ್ಷ ಯಾರಿಗೆ ಅವಕಾಶ ಕಲ್ಪಿಸುತ್ತದೆ? ರಮೇಶ್ ಮತ್ತು ಲಖನ್ ಅವರು ರಸ್ತೆ ಮತ್ತು ಇತರ ಮೂಲಸೌಕರ್ಯಗಳ ಅಭಿವೃದ್ಧಿಯ ಬಗ್ಗೆ ಎಂದಿಗೂ ಮಾತನಾಡುವುದಿಲ್ಲ. ಇವರಿಬ್ಬರು ರಾಜಕೀಯ ವ್ಯಾಪಾರದಲ್ಲಿ ತೊಡಗಿದ್ದಾರೆ ಅಷ್ಟೆ ಎಂದಿದ್ದಾರೆ.

"ರಮೇಶ್ ಆಗಾಗ್ಗೆ ಬಾಂಬ್‌ಗಳನ್ನು ಹಾಕುತ್ತಿರುತ್ತಾರೆ. ಆದರೆ, ಅದರಲ್ಲಿ ಕೆಲವು ಸ್ಫೋಟಗೊಳ್ಳುತ್ತವೆ, ಕೆಲವು ಎಂದಿಗೂ ಪ್ರಭಾವವೇ ಬೀರುವುದಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಕಾಂಗ್ರೆಸ್‌ನಿಂದ ಯಾವುದೇ ಶಾಸಕರು ಬೇರೆ ಪಕ್ಷಗಳಿಗೆ ಹೋಗುವುದಿಲ್ಲ, ಆದರೆ ಮುಂದಿನ ದಿನಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್‌ನ ಶಾಸಕರು ಕಾಂಗ್ರೆಸ್‌ಗೆ ಸೇರಲಿದ್ದಾರೆ ಎಂದು ಪುನರುಚ್ಚರಿಸಿದರು. ಕೆಲವು ಸಚಿವರು ಕೂಡ ಸೂಕ್ತ ಸಮಯದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಗೊಳ್ಳಲು ಮುಂದಾಗಿದ್ದಾರೆ ಎಂದು ಹೇಳಿದ್ದಾರೆ.

# ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಆದೇಶ

■ ಸಂಭ್ರಮ ಪ್ರಭ

**ಬೆಂಗಳೂರು:** ಅಕ್ರಮವಾಗಿ ಕಬ್ಬಿಣದ ಅದಿರು ಮಾರಾಟ ಮಾಡಿ ಸರ್ಕಾರದ ಬೊಕ್ಕಸಕ್ಕೆ ತೆರಿಗೆ ವಂಚಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಹಾಗೂ ಆಪ್ತರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿದೆ.



ಈ ಕುರಿತಂತೆ ತನಿಖಾಧಿಕಾರಿ ಸಲ್ಲಿಸಿದ್ದ ಖಾಸಗಿ ದೂರಿನ ವಿಚಾರಣೆ ನಡೆಸಿದ, 'ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಾಲಯ'ದ ನ್ಯಾಯಾಧೀಶೆ ಪ್ರೀತ್ ಜೆ. ಈ ಆದೇಶ ಹೊರಡಿಸಿದ್ದಾರೆ.

ಆರೋಪಿಗಳಾದ ಗಾಲಿ ಜನಾರ್ದನ ರೆಡ್ಡಿ, ಅವರ ಆಪ್ತ ಕಾರ್ಯದರ್ಶಿ ಮೆಹಫೂಜ್ ಅಲಿ ಖಾನ್ ಹಾಗೂ ಓಬಳಾಪುರಂ ಮೈನಿಂಗ್ ಕಂಪೆನಿ ಮತ್ತು ಶ್ರೀ ಮಿನರಲ್ಸ್ ಪಾಲುದಾರ ಬಿ.ವಿ ಶ್ರೀನಿವಾಸ ರೆಡ್ಡಿ ವಿರುದ್ಧ ಗಣಿ ಮತ್ತು ಖನಿಜ ಅಭಿವೃದ್ಧಿ ಹಾಗೂ ನಿಯಂತ್ರಣ ಕಾಯ್ದೆ–1957ರ ಕಲಂ 21, 23 ಹಾಗೂ 4(1)ರ ಅಡಿ ಕ್ರಿಮಿನಲ್ ಪ್ರಕರಣ ದಾಖಲಿಸಲು ಆದೇಶಿಸಲಾಗಿದೆ.

ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು 2009ರಲ್ಲಿ ಆರೋಪಿಗಳ ಮನೆ, ಕಚೇರಿಗಳ ಮೇಲೆ ದಾಳಿ ನಡೆಸಿದ್ದ ಸಂದರ್ಭದಲ್ಲಿ ಹಲವು ದಾಖಲೆಗಳನ್ನು ವಶಪಡಿಸಿಕೊಂಡಿದ್ದರು. ಈ ವೇಳೆ ಅಕ್ರಮವಾಗಿ ಕಬ್ಬಿಣದ ಅದಿರು ಸಾಗಿಸಿರುವುದು ಪತ್ತೆಯಾಗಿತ್ತು.

'ಆರೋಪಿಗಳು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಸೇರಿದಂತೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರಗಳಿಂದ ಅನುಮತಿ ಪಡೆಯದೇ ಸಾವಿರಾರು ಮೆಟ್ರಿಕ್ ಟನ್ ಅದಿರನ್ನು ಮಾರಾಟ ಮಾಡಿದ ಕಾರಣ ಸರ್ಕಾರದ ಬೊಕ್ಕಸಕ್ಕೆ 23 ಲಕ್ಷಕ್ಕೂ ಹೆಚ್ಚು ನಷ್ಟವಾಗಿದೆ' ಎಂದು ತನಿಖಾಧಿಕಾರಿ ಆರೋಪಿಸಿದ್ದರು. ವಿಚಾರಣೆಯನ್ನು ಫೆಬ್ರುವರಿ 14ಕ್ಕೆ ಮುಂದೂಡಲಾಗಿದೆ.



ಕೆಪಿಸಿಸಿ ಕಾರ್ಯಾಧ್ಯಕ್ಷರಾದ ರಾಮಲಿಂಗಾರೆಡ್ಡಿ, ಸಂಸದರಾದ ಡಿ.ಕೆ ಸುರೇಶ್ ಅವರ ನೇತೃತ್ವದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯ ವಿವಿಧ ಪಕ್ಷಗಳ ಮುಖಂಡರು ಕಾಂಗ್ರೆಸ್ ಸೇರ್ಪಡೆಯಾದರು. ಜಿಲ್ಲಾಧ್ಯಕ್ಷರಾದ ಜಿ.ಕೃಷ್ಣಪ್ಪ, ಮುಖಂಡರಾದ ಆರ್.ಕೆ ರಮೇಶ್, ಹನುಮಂತರಾಯಪ್ಪ, ಬ್ಲಾಕ್ ಅಧ್ಯಕ್ಷರಾದ ಕುಮಾರ್, ಶ್ರೀಧರ್ ಸೇರಿ ಹಲವರು ಉಪಸ್ಥಿತರಿದ್ದರು.



ಮಾಜಿ ಉಪಮಹಾಪೌರರಾದ ಬಿ.ಎಸ್. ಪುಟ್ಟರಾಜು ಅವರು ಕೆ ಪಿಸಿಸಿ ಪ್ರಚಾರ ಸಮಿತಿಯ ನೂತನ ಮುಖ್ಯಸ್ಥರಾಗಿ ನೇಮಕಗೊಂಡಿರುವ ಶಾಸಕರು, ಮಾಜಿ ಸಚಿವರಾದ ಎಂ.ಬಿ. ಪಾಟೀಲ್ ಅವರನ್ನು ಭೇಟಿಯಾಗಿ ಹೂಗುಚ್ಛ ನೀಡುವ ಮೂಲಕ ಶುಭಾಶಯ ಕೋರಿದರು.

### ಖಾತೆಗೆ ಆಧಾರ್ ಜೋಡಣೆಗೆ ಜನವರಿ 31 ಕೊನೆಯ ದಿನ

■ ಸಂಭ್ರಮ ಪ್ರಭ

**ಯಲಹಂಕ:** ಯಲಹಂಕ ಬೆಂಗಳೂರು ಉತ್ತರ 2021ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅಭ್ಯರ್ಥಿ ವೇತನ ಮತ್ತು ಶುಲ್ಕ ಮರುಪಾವತಿ ಸೇರಿದಂತೆ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗಳಿಗೆ ಆಧಾರ್ ಜೋಡಣೆ ಕಾರ್ಯವನ್ನು ಇದೇ ತಿಂಗಳು ಜನವರಿ 31ರ ಒಳಗಡೆ ಮಾಡಿಸಬೇಕು ಸೌಲಭ್ಯ ಪಡೆದುಕೆಣಟಿಜಜಜುಟಿಜಜಳ್ಳಲು ಆಧಾರ್ ಜೋಡಣೆ ಮಾಡುವುದು ಕಡ್ಡಾಯವಾಗಿದೆ ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನರಸಪ್ಪ ತಿಳಿಸಿದ್ದಾರೆ .ಆಧಾರ್ ಜೋಡಣೆ ಆಗಿಲ್ಲವೆಂದರೆ ಮಂಜೂರಾಗಿರುವ ಹಣ ಜಮೆಯಾಗುವುದಿಲ್ಲ ಆದುದರಿಂದ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗಳಿಗೆ ಆಧಾರ್ ಜೋಡಣೆ ಮಾಡಿಸಬೇಕು ಹಾಗಾಗಿ ಬ್ಯಾಂಕ್ ಅಥವಾ ಅಂಚೆ ಕಚೇರಿಗಳನ್ನು ಸಂಪರ್ಕಿಸಿ ತಮ್ಮ ಖಾತೆಗಳಿಗೆ ಆಧಾರ್ ಜೋಡಣೆ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ದೊರಕುವ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಳ್ಳ ಬೇಕು ಎಂದು ತಿಳಿಸಿದ್ದಾರೆ.



ಬ್ಲಡ್ ಕ್ಯಾನ್ಸರ್ ನಿಂದ ಬಳಲುತ್ತಿರುವ ಬಾಲಕನ ವೈದ್ಯಕೀಯ ಚಿಕಿತ್ಸೆಗೆ ಶಾಸಕ ಹಾಗೂ ಮಾಜಿ ಸಚಿವ ಶ್ರೀ ಜಮೀರ್ ಅಹಮದ್ ಅವರು 30 ಸಾವಿರ ರೂ.ಗಳ ಚೆಕ್ ನೀಡಿದರು. ಈ ವೇಳೆ ಮೈಸೂರು ಜತಿಚಿಭಿ ಅಧ್ಯಕ್ಷ ಜನಾಬ್ ಗಾಯಸ್ ಅಹಮದ್ ಇತರರು ಇದ್ದರು.



ಶಾಸಕ ಮಸಾಲೆ ಜಯರಾಮ್ ತುರುವೇಕೆರೆ ಕ್ಷೇತ್ರದ ವ್ಯಾಪ್ತಿಯ 2018–19 ನೇ ಸಾಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ತುಮಕೂರು ಜಿಲ್ಲೆ ವತಿಯಿಂದ ಅಯ್ಕೆಯಾದಂತಹ ಸುಮಾರು 13 ಫಲಾನು ಭವಿಗಳಿಗೆ ಪಂಪು ಮೋಟಾರ್ ವಿತರಣೆ ಮಾಡಲಾಯಿತು. ಈ ಸಂಧರ್ಭದಲ್ಲಿ ಪ.ಪಟ್ಟಣ ಪಂಚಾಯ್ತಿ ಅಧ್ಯಕ್ಷರಾದ ಚಿದಾನಂದ್, ಸದಸ್ಯರುಗಳು, ಮುಖಂಡರುಗಳು,ಹಾಗೂ ಡಿ.ದೇವರಾಜು ಅರಸು ಹಿ.ವ ನಿಗಮದ ವ್ಯವಸ್ಥಾಪಕರಾದ ಭಕ್ತಕುಚೇಲ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.



ಶಾಸಕರಾದ ಅಖಂಡ ಶ್ರೀನಿವಾಸಮೂರ್ತಿ ಪುಲಕೇಶಿ ನಗರದ ವಿಧಾನಸಭಾ ಕ್ಷೇತ್ರದ ಬ್ಯಾಡರಹಳ್ಳಿಯ ಎಸ್ ಕೆ ಗಾರ್ಡನ್ ಹಾಗೂ ಎನ್ ಸಿ ಗಾರ್ಡನ್ ಪ್ರದೇಶದಲ್ಲಿ ನೂತನ ಸ್ಯಾನಿಟರಿ ಪೈಪ್‌ಲೈನ್ ಅಳವಡಿಕೆ ಕಾಮಗಾರಿಗೆ ಚಾಲನೆ ನೀಡಿದರು ಇದೇ ಸಂದರ್ಭದಲ್ಲಿ . ಸ್ಥಳೀಯ ಮುಖಂಡರು ಹಾಗೂ ಪಾಲಿಕೆ ಅಧಿಕಾರಿಗಳು ಉಪಸ್ಥಿತರಿದ್ದರು.

### ರಾಮನಗರದಿಂದ ಖಾಲಿ ಮಾಡಿಸಲು ಆಗುವುದಿಲ್ಲ

**ರಾಮನಗರ:** "ಜಿಲ್ಲೆಯಲ್ಲಿ ಇಷ್ಟು ದಿನ ಮಲಗಿದ್ದ ನಾಯಕರೆಲ್ಲ ಈಗ ಎದ್ದು ರಾಜಕೀಯ ಮಾಡುತ್ತಿದ್ದಾರೆ" ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಚನ್ನಪಟ್ಟಣ ಕ್ಷೇತ್ರದ ಶಾಸಕ ಎಚ್. ಡಿ. ಕುಮಾರಸ್ವಾಮಿ ಡಿಕೆಶಿ ಸಹೋದರರಿಗೆ ಪರೋಕ್ಷವಾಗಿ ಟಾಂಗ್ ನೀಡಿದರು. ಶುಕ್ರವಾರ ಚನ್ನಪಟ್ಟಣದ ರಾಜ ಕೆಂಪೇಗೌಡ ಬಡಾವಣೆ ಹಾಗೂ ತಿಟ್ಟಮಾರನಹಳ್ಳಿಯಲ್ಲಿ ಎಲೆಕ್ಟ್ರಿಕ್ ಯುಜಿ ಕೇಬಲ್ ಕಾಮಗಾರಿಗೆ ಚಾಲನೆ ನೀಡಿದ ನಂತರ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. "ನಾನು ಅವರನ್ನಾಗಲಿ ಅಥವಾ ಮತ್ತೆ ಯಾರನ್ನೇ ಆಗಲಿ ಟಾರ್ಗೆಟ್ ಮಾಡುತ್ತಿಲ್ಲ. ನನಗೂ ಅವರಿಗೂ ಸಂಬಂಧ ಇಲ್ಲ. ನನ್ನ ಕೆಲಸ ನಾನು ಮಾಡುತ್ತಿದ್ದೇನೆ. ಆದರೆ ನನ್ನನ್ನ ಅವರು ಟಾರ್ಗೆಟ್ ಮಾಡಿದ್ದಾರೆ" ಎಂದರು.



### ಪರಿಷತ್ ಸದಸ್ಯರಾಗಿ ಸೂರಜ್ ರೇವಣ್ಣ ಪ್ರಮಾಣವಚನ

**ಬೆಂಗಳೂರು:** ಹಾಸನ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾಗಿದ್ದ ಸೂರಜ್ ರೇವಣ್ಣ ವಿಧಾನಸೌಧದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಸೂರಜ್ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪ್ರಮಾಣವಚನ ಬೋಧಿಸಿದರು. ಶಾಸಕರೂ ಆಗಿರುವ ಸೂರಜ್ ಅವರ ತಂದೆ ಎಚ್.ಡಿ. ರೇವಣ್ಣ, ತಾಯಿ ಭವಾನಿ ಮತ್ತು ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಎಚ್.ಕೆ. ಕುಮಾರಸ್ವಾಮಿ ಉಪಸ್ಥಿತರಿದ್ದರು. ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ವಿಧಾನ ಪರಿಷತ್‌ಗೆ ಆಯ್ಕೆಯಾಗಿದ್ದ ಸದಸ್ಯರ ಪ್ರಮಾಣವಚನ ಸಮಾರಂಭ ಜನವರಿ 6ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದಿತ್ತು. ಆದರೆ, ಆ ದಿನ ಒಳ್ಳೆಯ ಮುಹೂರ್ತವಿಲ್ಲ ಎಂಬ ಕಾರಣದಿಂದ ಸೂರಜ್ ಪ್ರಮಾಣವಚನ ಸ್ವೀಕಾರಕ್ಕೆ ಗೈರಾಗಿದ್ದರು.

# 'ಯಾರೆಲ್ಲಾ ಕೋಟ್ ಹೊಲಿಸ್ಕೊಂಡಿದ್ದಾರೋ ಗೊತ್ತಿಲ್ಲ'

■ ಸಂಭ್ರಮ ಪ್ರಭ

**ಬೆಂಗಳೂರು:** ಬಿಜೆಪಿ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ಪುತ್ರ ಬಿ.ವೈ.ವಿಜಯೇಂದ್ರಗೆ ಪಕ್ಷ ಹಾಗೂ ಸರ್ಕಾರದಲ್ಲಿ ಸ್ಥಾನಮಾನ ನೀಡುವ ಬಗ್ಗೆ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ವ್ಯಂಗ್ಯವಾಡಿದ್ದಾರೆ. ಅಧಿಕಾರ ಸಿಗುತ್ತದೆ ಎಂಬ ಆಸೆಯೊಂದಿಗೆ ಯಾರೆಲ್ಲಾ ಕೋಟ್ ಹೊಲಿಸಿಕೊಂಡಿದ್ದಾರೋ ಗೊತ್ತಿಲ್ಲ. ಬಿಜೆಪಿಯಿಂದ ಬಹಳ ಜನ ಹೋಗ್ತಾರೆ ಎಂಬ ಮಾತು ಕೇಳಿಬಂದಿದ್ದು ಒಳ್ಳೇದಾಯ್ತು. ಸಚಿವ ಸೋಮಶೇಖರ್ ಸೇರಿ ಹಲವರು ಪಕ್ಷ ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು ಎಂದರು. ಮಾಧ್ಯಮಗಳು ಅದೇ ಹೇಳಿಕೆಯನ್ನು ತೋರಿಸಿ, ಪಕ್ಷವನ್ನು ಗಟ್ಟಿ ಮಾಡುತ್ತಿವೆ ಎಂದರು. ಎರಡು ರಾಷ್ಟ್ರೀಯ ಪಕ್ಷಗಳಿಗೆ ಜೆಡಿಎಸ್ ಅನಿವಾರ್ಯ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನಮಗೆ ಯಾರೂ ಅನಿವಾರ್ಯ ಅಲ್ಲ. ಬಿಜೆಪಿ ಮತ್ತೆ ಸ್ವತಂತ್ರವಾಗಿ ಅಧಿಕಾರಕ್ಕೆ ಬರುತ್ತದೆ. ಕುಮಾರಸ್ವಾಮಿ ಕುಸ್ತಿ ಇರೋದು ಡಿ.ಕೆ.ಶಿವಕುಮಾರ್ ಮೇಲೆಯೇ ಹೊರತು ನಮ್ಮ ಮೇಲೆ ಅಲ್ಲ ಎಂದು ಹೇಳಿದರು. ಪ್ರಸ್ತುತ ಕಾಂಗ್ರೆಸ್ನಲ್ಲಿರುವ ಸಿ.ಎಂ.ಇಬ್ರಾಹಿಂ ಯಾವಾಗ ಏನು ಮಾತನಾಡುತ್ತಾರೋ ಗೊತ್ತಿಲ್ಲ.



ಅವರದ್ದು ಮತ್ತು ಕಾಂಗ್ರೆಸ್ನವರದ್ದು ಏನೇನಿದೆಯೋ ನನಗೆ ಗೊತ್ತಿಲ್ಲ. ಅವರು ಒಮ್ಮೆ ದೇವೇಗೌಡರನ್ನು ಅಪ್ಪ ಎನ್ನುತ್ತಾರೆ, ಇನ್ನೊಮ್ಮೆ ಸಿದ್ದರಾಮಯ್ಯ ಅವರನ್ನು ಅಣ್ಣ ಎನ್ನುತ್ತಾರೆ. ರಾಜಕೀಯದಲ್ಲಿ ಹೀಗೆ ಅಪ್ಪ–ಅಣ್ಣ ಎನ್ನುವವರು ಭಾರೀ ಡೇಂಜರ್ ಎಂದು ಅಭಿಪ್ರಾಯಪಟ್ಟರು.

ಸಚಿವ ಮುರುಗೇಶ್ ನಿರಾಣಿ ವಿರುದ್ಧ ಮತ್ತೆ ಕಿಡಿಕಾರಿದ ಯತ್ನಾಳ್, ನಿರಾಣಿ ಯಾವ ರಾಜ್ಯಕ್ಕೆ ಸಿಎಂ ಆಗ್ತಾರೆ ಪಾಕಿಸ್ತಾನಕ್ಕಾ ಎಂದು ಪ್ರಶ್ನಿಸಿದರು. ಕರ್ನಾಟಕದಲ್ಲಿ ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ. ಬೊಮ್ಮಾಯಿ ಸಿಎಂ ಆಗಿದ್ದಾರೆ. ನಿರಾಣಿ ಏನು ಗುರಾಣಿನಾ ಎಂದು ಆಕ್ರೋಶ ವ್ಯಕ್ತಡಿಸಿದರು. ಸಮುದಾಯ ಒಡೆಯುವ ನಿರಾಣಿ ಅವರ ಪ್ರಯತ್ನ ಈಡೇರುವುದಿಲ್ಲ. ಅವರು ಎಂದಿಗೂ ಉದ್ಧಾರ ಆಗಲ್ಲ, ಹೀಗೇ ಮಠಗಳನ್ನು ಕಟ್ಟುತ್ತಿದ್ದರೆ, ಧರ್ಮದ ವಿಚಾರದಲ್ಲಿ ಕೈ ಹಾಕಿದರೆ ರಾಜಕೀಯವಾಗಿ ಅಂತ್ಯವಾಗುತ್ತಾರೆ ಎಂದರು.

ಕರ್ನಾಟಕದಲ್ಲಿ ಮೂರನೇ ಮಠ ಸ್ಥಾಪಿಸಿದರೆ ಅಂಥವರ ಪರಿಸ್ಥಿತಿ ಮೂರಾಬಟ್ಟೆ ಆಗುತ್ತೆ. ಮಠ ಕಟ್ಟುವವರು ಮಣ್ಣು ತಿನ್ನುತ್ತಾರೆ ಎಂದು ಕಿಡಿಕಾರಿದರು. ಮಠ ಸ್ಥಾಪಿಸುವುದು ಎಂದರೆ ಬ್ಯಾಂಕಿನ ಶಾಖೆಗಳನ್ನು ತೆಗೆದಂತೆ ಎಂದು ಕೆಲವರು ಅಂದುಕೊಂಡಿರಬಹುದು. ಈ ಎಲ್ಲ ವಿಚಾರಗಳು ಹೈಕಮಾಂಡ್ಗೆ ಗೊತ್ತಿವೆ. ಭ್ರಷ್ಟಾಚಾರದ ವಿಷಯ ಬಂದರೆ ಬಹಿರಂಗವಾಗಿ ಮಾತಾಡುತ್ತೇನೆ. ಭ್ರಷ್ಟಾಚಾರ ಎಲ್ಲೇ ನಡೆದರೂ ತನಿಖೆ ಆಗಬೇಕು. ತವರು ಜಿಲ್ಲೆ ಹೊಣೆ ನೀಡದ್ದಕ್ಕೆ ಯಾರಿಗೂ ಅಸಮಾಧಾನವಿಲ್ಲ ಎಂದು ವಿವರಿಸಿದರು. ಬಿಜೆಪಿ ಕರ್ನಾಟಕ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ನಮಗೆ ಬಹಿರಂಗ ಹೇಳಿಕೆ ನೀಡದಂತೆ ಸೂಚಿಸಿದ್ದಾರೆ. ಹೀಗಾಗಿ ಹೆಚ್ಚು ಮಾತನಾಡುವುದಿಲ್ಲ ಎಂದರು.

# ನಾವು ಯಾವತ್ತಿದ್ದರೂ ವಲಸಿಗರೇ, ನಮ್ಮನ್ನು ವಲಸಿಗರು ಅಂತಾನೇ ಕರೆಯುತ್ತಾರೆ

■ ಸಂಭ್ರಮ ಪ್ರಭ

**ಬೆಂಗಳೂರು:** ಸಚಿವ ಸಂಪುಟ ಸಭೆಯಲ್ಲಿ ನಿನ್ನೆ(ಜ.27) ವಲಸಿಗ ಸಚಿವರ ವಿಚಾರವೇ ಬಹುಪಾಲು ಚರ್ಚೆ ನಡೆದಿದೆ. ಕಾಂಗ್ರೆಸ್ ಗೆ ವಾಪಾಸಾಗುವ ಪ್ರಶ್ನೆಯೇ ಇಲ್ಲ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ. ಈ ಮಧ್ಯೆ ಜಿಲ್ಲಾ ಉಸ್ತುವಾರಿ ಹಂಚಿಕೆ ವಿಚಾರ ಪ್ರಸ್ತಾಪವಾಯಿತಾದರೂ ಹೈಕಮಾಂಡ್ ಕಡೆ ಕೈ ತೋರಿಸಿ ಸಿಎಂ ಸಚಿವರ ಬಾಯಿ ಮುಚ್ಚಿಸಿದ್ದಾರೆ.



ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ವಲಸಿಗ ಸಚಿವರ ಕಾಂಗ್ರೆಸ್ ವಾಪಸಾತಿ ವಿಚಾರವೇ ಹೆಚ್ಚು ಸದ್ದು ಮಾಡಿತು. ಸುಮಾರು ಒಂದು ಗಂಟೆ ಕಾಲ ನಡೆದ ಚರ್ಚೆಯಲ್ಲಿ ವಲಸಿಗ ಸಚಿವರು ಸುದೀರ್ಘ ಸ್ಪಷ್ಟೀಕರಣ ನೀಡಿದ್ರು. ಸಚಿವರಾದ ಎಸ್.ಟಿ. ಸೋಮಶೇಖರ್, ಗೋಪಾಲಯ್ಯ, ಭೈರತಿ ಬಸವರಾಜ, ಎಂಟಿಬಿ ನಾಗರಾಜ್, ನಾರಾಯಣ ಗೌಡ, ಡಾ. ಸುಧಾಕರ್ ಸೇರಿದಂತೆ ವಲಸಿಗ ಸಚಿವರು ಸಂಪುಟ ಸಭೆಯಲ್ಲಿ ಸ್ಪಷ್ಟೀಕರಣ ಕೊಟ್ರು. ನಾವು ಮತ್ತೆ ಕಾಂಗ್ರೆಸ್‌ಗೆ ಹೋಗುತ್ತೇವೆ ಎಂಬ ಮಾತುಗಳೇ ಜೋರಾಗಿ ಬರುತ್ತಿವೆ. ನಾವು ಎಲ್ಲೂ ಹೋಗುವುದಿಲ್ಲ, ಪಕ್ಷದಲ್ಲೇ ಇರುತ್ತೇವೆ ಅಂದ್ರು.

ಈ ಮಧ್ಯೆ ಸಚಿವ ಎಂಟಿಬಿ ನಾಗರಾಜ್, ಬಿಜೆಪಿ ಸೇರ್ಪಡೆ ಸಮಯದಲ್ಲಿ ನಡೆದ ಬೆಳವಣಿಗೆಗಳನ್ನು, ತಮ್ಮ ನಿವಾಸಕ್ಕೆ ಬಿಜೆಪಿ ನಾಯಕರು ಬಂದಿದ್ದನ್ನು ಎಲ್ಲವನ್ನೂ ವಿವರವಾಗಿ ಹೇಳ್ತಾಯಿದ್ರು. ಆಗ ಮಧ್ಯ ಪ್ರವೇಶಿದ ಸಚಿವ ಅಶೋಕ್ ಹಾಗೂ ಆನಂದ್ ಸಿಂಗ್ ಎಂಟಿಬಿಯವರನ್ನ ಸುಮ್ಮನಿರಿಸಿದ್ರು. ಇನ್ನು ಸಚಿವ ಮುನಿರತ್ನ, ನಾವು ಯಾವತ್ತಿದ್ದರೂ ವಲಸಿಗರೇ, ಈ ಸರ್ಕಾರದ ಅವಧಿ ಮುಗಿದು ಮುಂದಿನ ಬಾರಿಯ ಸರ್ಕಾರ ಬಂದರು ಕೂಡಾ ನಮ್ಮನ್ನು ವಲಸಿಗರು ಅಂತಾನೇ ಕರೆಯುತ್ತಾರೆ ಅಂತಾ ಹೇಳಿದ್ರು.

ಕೊನೆಯಲ್ಲಿ ನಾವು ಪಕ್ಷಕ್ಕೆ ನಿಷ್ಠರಾಗಿರುತ್ತೇವೆ ಎಂದು ಸಚಿವ ಡಾ. ಸುಧಾಕರ್ ಚರ್ಚೆಗೆ ಅಂತ್ಯ ಹಾಡಿದ್ರು. ನಿಮಗೆ ನಮ್ಮ ಸಪೋರ್ಟ್ ಯಾವಾಗಲೂ ಇರುತ್ತದೆ, ಆತಂಕ ಬೇಡ ಎಂದು ಹೇಳಿದರು.

ಜಾಹೀರಾತಿಗಾಗಿ ಸಂಪರ್ಕಿಸಿ 9844344445 080-23482445 sambramaprabha@gmail.com

# ರಾಹುಲ್ ಟ್ವಿಟರ್ ಕುಸಿತ!

## ಫಾಲೋವರ್ಸ್ ಕಡಿತದಲ್ಲಿ ಕೇಂದ್ರ ಸರ್ಕಾರದ ಕೈಚಳಕ

■ ಸಂಭ್ರಮ ಪ್ರಭ

**ನವದೆಹಲಿ:** ಎಐಸಿಸಿ ಅಧ್ಯಕ್ಷ ರಾಹುಲ್ ಗಾಂಧಿ ಅವರ ಟ್ವಿಟರ್ ಖಾತೆಯಲ್ಲಿ ಅನುಪಾಲಕರ (ಫಾಲೋವರ್ಸ್) ಸಂಖ್ಯೆಯನ್ನು ಹತ್ತಿಕ್ಕಲಾಗುತ್ತಿದೆ ಎಂಬ ಆರೋಪ ಮತ್ತೊಮ್ಮೆ ಕೇಂದ್ರ ಸರ್ಕಾರ ಮತ್ತು ಕಾಂಗ್ರೆಸ್ ನಡುವೆ ಜಪಾಪಟಿಗೆ ಕಾರಣವಾಗಿದೆ. ಸಾಮಾಜಿಕ ಜಾಲತಾಣದ ಮುಂಚೂಣಿ ಸಂಸ್ಥೆ ಟ್ವಿಟರ್ ಕೇಂದ್ರ ಸರ್ಕಾರದ ಅಣತಿಯಂತೆ ವಿರೋಧ ಪಕ್ಷದ ನಾಯಕ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಕಸಿಯುತ್ತಿದೆ ಎಂದು ಕಾಂಗ್ರೆಸ್ ನಾಯಕರು ಟೀಕಿಸಲಾರಂಭಿಸಿದ್ದಾರೆ.

ರಾಹುಲ್‌ಗಾಂಧಿ ಅವರು ಪ್ರಸ್ತುತ 19.6 ದಶಲಕ್ಷ ಅನುಪಾಲಕರನ್ನು ಹೊಂದಿದ್ದಾರೆ. ಈ ಮೊದಲು ಕೇಂದ್ರ ಸರ್ಕಾರ ಕೃಷಿ ಕಾಯ್ದೆಗಳನ್ನು ವಿರೋಧಿಸಿ ದೆಹಲಿಯಲ್ಲಿ ರೈತರ ಪ್ರತಿಭಟನೆ ನಡೆಸಿದಾಗ ರಾಹುಲ್‌ಗಾಂಧಿ ರೈತರಿಗೆ ಬೆಂಬಲ ವ್ಯಕ್ತ ಪಡಿಸಿದ್ದರು. ಆಗ ಫಾಲೋವರ್ಸ್ ಸಂಖ್ಯೆ ಹೆಚ್ಚಾಗಲಾರಂಭಿಸಿತ್ತು.

ನವದೆಹಲಿಯಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರವಾದಾಗ ಆಕೆಯ ಗುರುತು ಪತ್ತೆಯಾಗುವಂತೆ ರಾಹುಲ್‌ಗಾಂಧಿ ಟ್ವಿಟ್‌ನಲ್ಲಿ ಫೋಟೋ ಪ್ರಕಟಿಸಿ ನಿಯಮ ಉಲ್ಲಂಘಿಸಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದ್ದವು. ಅದೇ ಕಾರಣಕ್ಕೆ ಕಳೆದ ಆಗಸ್ಟ್ 6ರಿಂದ 14ರ ನಡುವೆ ಖಾತೆಯನ್ನು ನಿರ್ಬಂಧಿಸಲಾಗಿತ್ತು.

ಕಳೆದ ಏಳೆಂಟು ತಿಂಗಳಿನಿಂದೀಚೆಗೆ ರಾಹುಲ್ ಗಾಂಧಿ ಅವರ ಟ್ವಿಟರ್ ಖಾತೆಯಲ್ಲಿ ಅನುಪಾಲಕರ ಸಂಖ್ಯೆ ತೀವ್ರ ಹೆಚ್ಚಳವಾಗಿತ್ತು. ಪ್ರತಿ ತಿಂಗಳು ಕನಿಷ್ಠವೆಂದರೂ ಎರಡರಿಂದ ಮೂರು ಲಕ್ಷದಷ್ಟು ಸದಸ್ಯರ ಸಂಖ್ಯೆ ಹೆಚ್ಚಾಗಲಾರಂಭಿಸಿತ್ತು. ಒಂದು ಹಂತದಲ್ಲಿ ರಾಹುಲ್ ಗಾಂಧಿ ಅವರ ಖಾತೆಯಲ್ಲಿ ಅನುಪಾಲಕರ ಸಂಖ್ಯೆ ಗೋಚವಾಗದಂತೆ ಮರೆ ಮಾಚಲಾಗಿತ್ತು ಎಂಬ ಆರೋಪಗಳು ಕೇಳಿ ಬಂದಿವೆ.

ಈ ಕುರಿತು ಕಳೆದ ಡಿಸೆಂಬರ್ 27ರಂದು ಟ್ವಿಟ್‌ನ ಸಿಇಒ ಪರಾಗ್ ಅಗರ್‌ವಾಲ್ ಅವರಿಗೆ ಪತ್ರ ಬರೆದಿರುವ ರಾಹುಲ್‌ಗಾಂಧಿ, ಟ್ವಿಟರ್ ಸಂಸ್ಥೆ ತನ್ನ ಅರಿವಿಗಿಲ್ಲದಂತೆ ಮುಕ್ತ ಹಾಗೂ ನಿಷ್ಪಕ್ಷಪಾತ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುತ್ತಿದೆ ಎಂದು ಆಕ್ಷೇಪಿಸಿದ್ದಾರೆ. 2021ರ ಆಗಸ್ಟ್‌ನಿಂದ ತಮ್ಮ ಅನುಪಾಲಕರ ಸಂಖ್ಯೆಯನ್ನು ಹೆಪ್ಪುಗಟ್ಟಿಸಲಾಗುತ್ತಿದೆ. ಇತ್ತೀಚೆಗೆ 6.5 ಲಕ್ಷದಷ್ಟು ಹೆಚ್ಚಾಗಿತ್ತು. ಬಳಿಕ ಅನುಪಾಲಕರ ಸಂಖ್ಯೆಯನ್ನು ತಟಸ್ಥವಾಗಿರಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಆದರೆ ಟ್ವಿಟರ್‌ನ ವಕ್ತಾರರು ಆರೋಪವನ್ನು ಅಲ್ಲಗಳೆದಿದ್ದಾರೆ. ತಮ್ಮ ಸಂಸ್ಥೆ ಅನುಪಾಲಕರ ಸಂಖ್ಯೆ ಅಂದಾಜಿಸುವಾಗ ಕರಾರುವಕ್ಕಾದ ಲೆಕ್ಕವನ್ನು ಅನುಸರಿಸುತ್ತದೆ. ಸ್ಪಾಂ ಮತ್ತು ಮನಿಪುಲೇಷನ್ ವಿಷಯದಲ್ಲಿ ಶೂನ್ಯ ಸಹನೆ ಹೊಂದಿದೆ. ಸ್ಪಾಂ ಅನ್ನು ನಿವಾರಿಸಲು ಯಾಂತ್ರಿಕೃತ ಮತ್ತು ಶಿಸ್ತು ಬದ್ಧ ಹೋರಾಟ ನಡೆಸುತ್ತಿದ್ದೇವೆ ಎಂದು ಹೇಳಿದ್ದಾರೆ.




### ಪ್ರಜಾಪ್ರಭುತ್ವಕ್ಕೆ ವಿರುದ್ಧ

**ರಾಹುಲ್ ಗಾಂಧಿ ಅವರ ಅನುಪಾಲಕರ ಸಂಖ್ಯೆಯನ್ನು ಹತ್ತಿಕ್ಕಲಾಗುತ್ತಿದೆ ಎಂಬ ಸುದ್ದಿ ಬಹಿರಂಗವಾಗುತ್ತಿದ್ದಂತೆ ಕಾಂಗ್ರೆಸ್ ನಾಯಕರು ಟ್ವಿಟರ್ ಮತ್ತು ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಉತ್ತರ ಪ್ರದೇಶ ಸೇರಿದಂತೆ ಪಂಚರಾಜ್ಯಗಳ ಚುನಾವಣೆ ವೇಳೆ ಬಹಿರಂಗ ರ‍್ಯಾಲಿಗಳನ್ನು ನಿಷೇಧಿಸಲಾಗಿದೆ. ಹೀಗಾಗಿ ರಾಜಕೀಯ ನಾಯಕರು ಸಾಮಾಜಿಕ ಜಾಲತಾಣವನ್ನೇ ಅವಲಂಭಿಸಿದ್ದಾರೆ. ಈ ಹಂತದಲ್ಲಿ ಟ್ವಿಟರ್ ಖಾತೆ-ಯ ಏರಿಳಿತಗಳು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿವೆ ಎಂಬ ಆಕ್ಷೇಪಗಳು ಕೇಳಿ ಬಂದಿವೆ.**

# ಮುಂದಿನ 20 ವರ್ಷಗಳ ಭವಿಷ್ಯವನ್ನು ನಿರ್ಧರಿಸಲಿದೆ

■ ಸಂಭ್ರಮ ಪ್ರಭ

**ನೋಯ್ಡಾ:** ಉತ್ತರ ಪ್ರದೇಶದಲ್ಲಿ ನಡೆಯಲಿರುವ ವಿಧಾನಸಭೆ ಚುನಾವಣೆಯು ಕೇವಲ ಶಾಸಕ, ಸಚಿವ ಅಥವಾ ಮುಖ್ಯಮಂತ್ರಿ ಆಯ್ಕೆಯನ್ನಷ್ಟೇ ಅಲ್ಲ, ಮುಂದಿನ 20 ವರ್ಷಗಳ ರಾಜ್ಯದ ಭವಿಷ್ಯವನ್ನೇ ನಿರ್ಧರಿಸಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಗ್ರೇಟರ್ ನೋಯ್ಡಾದಲ್ಲಿ 'ಪರಿಣಾಮಕಾರಿ ಮತದಾರರ ಸಂವಾದ' ಉದ್ದೇಶಿಸಿ ಮಾತನಾಡಿದ ಅವರು, ಕಾನೂನು ಸುವ್ಯವಸ್ಥೆ ಸೇರಿದಂತೆ ರಾಜ್ಯದ ಹಲವು ವಿಷಯಗಳ ವೈಫಲ್ಯಗಳ ಬಗ್ಗೆ ಸಮಾಜವಾದಿ ಪಕ್ಷ ಹಾಗೂ ಬಹುಜನ ಸಮಾಜ ಪಕ್ಷ ನೇತೃತ್ವದ ಹಿಂದಿನ ಸರ್ಕಾರಗಳ ವಿರುದ್ಧ ವಾಗ್ದಾಳಿ ನಡೆಸಿದರು. 'ಹಿಂದಿನ ಸರ್ಕಾರಗಳ ಆಡಳಿತದಲ್ಲಿ ರಾಜ್ಯವು ಮಾಫಿಯಾ ಹಾಗೂ ಬಹಿರಂಗ ಸುಲಿಗೆಗೆ ಒಳಗಾಗಿತ್ತು. ಆದರೆ ಯೋಗಿ ಆದಿತ್ಯನಾಥ್ ಸರ್ಕಾರದ ಅಡಿಯಲ್ಲಿ ಪರಿಸ್ಥಿತಿ ಬದಲಾಗಿದೆ' ಎಂದು ಹೇಳಿದರು.



'ಕಳೆದ 20 ವರ್ಷಗಳತ್ತ ಹಿಂತಿರುಗಿ ನೋಡಿದಾಗ ಮಾಫಿಯಾ ಆಡಳಿತವಿತ್ತು. ರಾಜ್ಯದಲ್ಲಿ ಬಂಡವಾಳ ಹೂಡಲು ಯಾರೂ ಸಿದ್ಧರಿರಲಿಲ್ಲ. ಬಹಿರಂಗ ಸುಲಿಗೆ ನಡೆಯುತ್ತಿತ್ತು. ಆದರೆ ಇಂದು ಆಜಂ ಖಾನ್ ಜೈಲಿನಲ್ಲಿದ್ದಾನೆ, ಅತೀಕ್ ಅಹಮ್ಮದ್, ಮುಖ್ತಾರ್ ಅನ್ಸಾರ್ ಕೂಡ ಜೈಲಿನಲ್ಲಿದ್ದಾರೆ. ಅವರ ವಿರುದ್ಧ ಹಲವಾರು ಪ್ರಕರಣಗಳಿದ್ದು, ಬರೆಯಲು ಹೆಣಟಿಜಜಜಿಟಿಜಜರಟರೆ ನೋಟ್ ಬುಕ್ ಸಾಲದು' ಎಂದು ಹೇಳಿದರು. ಗಡಿಯಲ್ಲಿ ಪಾಕಿಸ್ತಾನ ವಿರುದ್ಧ ನಡೆಸಿದ ಸರ್ಜಿಕಲ್ ಸ್ಟ್ರೈಕ್, ಜಮ್ಮು ಮತ್ತು ಕಾಶ್ಮೀರದಲ್ಲಿ ಸಂವಿಧಾನದ 370ನೇ ವಿಧಿ ತೆಗೆದು ಹಾಕಿರುವುದನ್ನು ಅಮಿತ್ ಶಾ ಉಲ್ಲೇಖಿಸಿದರು. ಅಯೋಧ್ಯೆಯಲ್ಲಿ ರಾಮ ಮಂದಿರ ವಿಚಾರದಲ್ಲಿ ಅಖಿಲೇಶ್ ಯಾದವ್ ಅವರನ್ನು ತರಾಟೆಗೆ ತೆಗೆದುಕೊಂಡರು. 'ನಾನು ಅವರಿಗೆ ಹೇಳಲು ಬಯಸುತ್ತೇನೆ. ಈಗ ಅಡಿಪಾಯ ಹಾಕಲಾಗಿದ್ದು, ಶೀಘ್ರದಲ್ಲೇ ಶ್ರೀರಾಮನ ಭವ್ಯ ಮಂದಿರ ನಿರ್ಮಿಸಲಾಗುವುದು' ಎಂದು ಹೇಳಿದರು. 'ಎಸ್‌ಪಿ ಮಾಡಿದ ಕೆಟ್ಟ ಕೆಲಸಗಳನ್ನು ಉಲ್ಲೇಖಿಸಿ ಬಿಜೆಪಿ ಮತ ಯಾಚಿಸುತ್ತಿಲ್ಲ. ಬದಲಾಗಿ ಕೇಸರಿ ಪಕ್ಷ ಇದುವರೆಗೆ ಮಾಡಿರುವ ಮತ್ತು ಭವಿಷ್ಯದಲ್ಲಿ ಮಾಡಲಿರುವ ಕೆಲಸಗಳನ್ನು ಜನರಿಗೆ ತಲುಪಿಸುವ ಮೂಲಕ ಮತ ಕೇಳುತ್ತಿದ್ದೇವೆ' ಎಂದರು.

# ಅಧಿಕೃತವಾಗಿ ಟಾಟಾ ಸಮೂಹಕ್ಕೆ ಏರ್ ಇಂಡಿಯಾ ಹಸ್ತಾಂತರ

■ ಸಂಭ್ರಮ ಪ್ರಭ

**ನವದೆಹಲಿ:** ಕೇಂದ್ರ ಸರ್ಕಾರ ಗುರುವಾರ ಅಧಿಕೃತವಾಗಿ ಏರ್ ಇಂಡಿಯಾವನ್ನು ಟಾಟಾ ಸಮೂಹಕ್ಕೆ ಹಸ್ತಾಂತರಿಸಿದೆ. 69 ವರ್ಷಗಳ ಬಳಿಕ ಪುನಃ ಟಾಟಾ ಮಡಿಲಿಗೆ ಏರ್ ಇಂಡಿಯಾ ಬಂದಿದೆ. ಟಾಟಾ ಸನ್ಸ್ ಅಧ್ಯಕ್ಷ ಎನ್ ಚಂದ್ರಶೇಖರನ್ ಅವರು ಅಧಿಕೃತ ಹಸ್ತಾಂತರಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದರು.



ಬಳಿಕ ಸುದ್ದಿಗಾರರೊಂದಿಗೆ ಮಾತಾನಾಡಿದ ಟಾಟಾ ಸನ್ಸ್ ಅಧ್ಯಕ್ಷ ಎನ್ ಚಂದ್ರಶೇಖರನ್ ಅವರು, ಏರ್ ಇಂಡಿಯಾವನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಪೂರ್ಣಗೊಂಡಿದೆ. ಏರ್ ಇಂಡಿಯಾವನ್ನು ತನ್ನ ಮಡಿಲಿಗೆ ಮರಳಿ ಪಡೆದಿರುವುದಕ್ಕೆ ಟಾಟಾ ಸಮೂಹ ತುಂಬಾ ಸಂತೋಷಗೊಂಡಿದೆ. ವಿಶ್ವದರ್ಜೆ ಮಟ್ಟದಲ್ಲಿ ವಿಮಾನಯಾನ ಸಂಸ್ಥೆಯನ್ನು ರಚಿಸಲು, ಉತ್ಸಾಹದಿಂದ ಎಲ್ಲರೊಂದಿಗೆ ಕೆಲಸ ಮಾಡಲು ನಾವು ಎದುರು ನೋಡುತ್ತಿದ್ದೇವೆ ಎಂದು ಹೇಳಿದರು. ನಿರ್ವಹಣಾ ನಿಯಂತ್ರಣದೊಂದಿಗೆ ಏರ್ ಇಂಡಿಯಾದ ಶೇ. 100 ರಷ್ಟು ಷೇರುಗಳನ್ನು ಟಾಟಾ ಗ್ರೂಪ್ ನ ಒ/ ಟ್ಯಾಲೇಸ್ ಪ್ರೈವೇಟ್ ಲಿಮಿಟೆಡ್ಗೆ ವರ್ಗಾಯಿಸುವುದರೊಂದಿಗೆ ಏರ್ ಇಂಡಿಯಾದ ಕಾರ್ಯತಂತ್ರದ ಹೂಡಿಕೆ ವಹಿವಾಟು ಇಂದು ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಸ್ಟ್ರಾಟೆಜಿಕ್ ಪಾಲುದಾರರ ನೇತೃತ್ವದ ಹೊಸ ಮಂಡಳಿಯು ಏರ್ ಇಂಡಿಯಾದ ಜವಾಬ್ದಾರಿಯನ್ನು ವಹಿಸುತ್ತದೆ ಎಂದು ಹೂಡಿಕೆ ಮತ್ತು ಸಾರ್ವಜನಿಕ ಆಸ್ತಿ ನಿರ್ವಹಣೆ ಇಲಾಖೆ(ಡಿಐಪಿಎಎಂ) ಕಾರ್ಯದರ್ಶಿ ತುಹಿನ್ ಕಾಂತಾ ಪಾಂಡೆ ಅವರು ತಿಳಿಸಿದ್ದಾರೆ. ಸಂಪೂರ್ಣ 2,700 ಕೋಟಿ ರೂಪಾಯಿ ಸರ್ಕಾರಕ್ಕೆ ಬಂದಿರುವುದರಿಂದ ಟಾಟಾ ಗ್ರೂಪ್ ನ ಟ್ಯಾಲೇಸ್ ಹೊಸ ಮಾಲೀಕರಾಗಿದ್ದಾರೆ. ನಾವು ಷೇರುಗಳನ್ನು ವರ್ಗಾಯಿಸಿದ್ದೇವೆ. 15,300 ಕೋಟಿ ರೂ. ಸಾಲವನ್ನು ಸಹ ಸ್ವೀಕರಿಸಲಾಗಿದೆ. ಆದ್ದರಿಂದ ಎಲ್ಲಾ ಪ್ರಕ್ರಿಯೆಗಳು ಪೂರ್ಣಗೊಂಡಿವೆ" ಎಂದು ಡಿಐಪಿಎಎಂ ಕಾರ್ಯದರ್ಶಿ ಹೇಳಿದ್ದಾರೆ.

ಸ್ಪರ್ಧಾತ್ಮಕ ಹರಾಜು ಪ್ರಕ್ರಿಯೆಯ ನಂತರ, ಸರ್ಕಾರವು ಕಳೆದ ವರ್ಷ ಅಕ್ಟೋಬರ್ 8 ರಂದು ಏರ್ ಇಂಡಿಯಾವನ್ನು 18,000 ಕೋಟಿ ರೂ.ಗೆ ಟ್ಯಾಲೇಸ್ ಪ್ರೈವೇಟ್ ಲಿಮಿಟೆಡ್ಗೆ ಮಾರಾಟ ಮಾಡಿತ್ತು.

# ಅಮೆರಿಕದಲ್ಲಿ ಅಕ್ರಮವಾಗಿ ನೆಲೆಸಿರುವ ಏಳು ಭಾರತೀಯರ ಹೊರ ಹಾಕುವ ಪ್ರಕ್ರಿಯೆ ಆರಂಭ

■ ಸಂಭ್ರಮ ಪ್ರಭ

**ನ್ಯೂಯಾರ್ಕ್:** ಅಕ್ರಮವಾಗಿ ಅಮೆರಿಕಕ್ಕೆ ಪ್ರವೇಶಿಸಿದ ಮತ್ತು ಕಳೆದ ವಾರ ಅಮೆರಿಕ ಮತ್ತು ಕೆನಡಾ ಗಡಿಯ ಬಳಿ ಬಂಧನಕ್ಕೀಡಾಗಿದ್ದ ಏಳು ಭಾರತೀಯ ಪ್ರಜೆಗಳನ್ನು ಗಡಿ ಗಸ್ತು ಪಡೆಯ ಬಂಧನದಿಂದ ಬಿಡುಗಡೆ ಮಾಡಲಾಗಿದ್ದು, ದೇಶದಿಂದ ಹೊರ ಹಾಕುವ ಪ್ರಕ್ರಿಯೆ ಆರಂಭಿಸಲಾಗಿದೆ.



'ಕಳೆದ ವಾರ ಅಮೆರಿಕಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದ ಎಲ್ಲಾ ಏಳು ವಲಸಿಗರನ್ನು ದೇಶದಿಂದ ಹೊರ ಹಾಕುವ ಅಥವಾ ವಲಸೆ ಮತ್ತು ರಾಷ್ಟ್ರೀಯತೆಯ ಕಾಯಿದೆಯ ಪ್ರಕಾರ ತೆಗೆದುಹಾಕುವ ಪ್ರಕ್ರಿಯೆಗಳಿಗೆ ಆಡಳಿತಾತ್ಮಕ ಚಾಲನೆ ನೀಡಲಾಗಿದೆ'ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಏಳು ಭಾರತೀಯ ಪ್ರಜೆಗಳಲ್ಲಿ ಆರು ಮಂದಿಯನ್ನು ಆರ್ಡರ್ ಆಫ್ ಸೂಪರ್‌ವಿಜನ್ ಅಡಿಯಲ್ಲಿ ಇರಿಸಲಾಗಿದೆ ಮತ್ತು ಒಬ್ಬರನ್ನು ಮಾನವೀಯ ನೆಲೆಯಲ್ಲಿ ಬಿಡುಗಡೆ ಮಾಡಲಾಗಿದೆ ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ.

'ಎಲ್ಲಾ ವಲಸಿಗರನ್ನು ಗಡಿ ಗಸ್ತು ಪಡೆ ಬಂಧನದಿಂದ ಬಿಡುಗಡೆ ಮಾಡಲಾಗಿದೆ. ನಂತರ ಅಮೆರಿಕದ ವಲಸೆ ಮತ್ತು ಕಸ್ಟಮ್ಸ್ ಜಾರಿ ಇಲಾಖೆಯನ್ನು ಸಂಪರ್ಕಿಸುವಂತೆ ಆದೇಶಿಸಲಾಗಿದೆ ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ. ಏಳು ಭಾರತೀಯ ಪ್ರಜೆಗಳನ್ನು ಕಳೆದ ವಾರ ಅಮೆರಿಕ ಅಧಿಕಾರಿಗಳು ಅಮೆರಿಕ / ಕೆನಡಾ ಗಡಿಯ ಬಳಿ ಬಂಧಿಸಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ 47 ವರ್ಷದ ಸ್ಟೀವ್ ಶಾಂಡ್ ಮೇಲೆ ಮಾನವ ಕಳ್ಳಸಾಗಣೆ ಆರೋಪ ಹೊರಿಸಲಾಗಿದೆ. ಜನವರಿ 19 ರಂದು ಉತ್ತರ ಡಕೋಟಾದ ಲಂಕಾಸ್ಟರ್‌ನಲ್ಲಿ ಶಾಂಡ್ ಅನ್ನು ಬಂಧಿಸಲಾಗಿತ್ತು. 15 ಪ್ರಯಾಣಿಕರಿದ್ದ ವ್ಯಾನ್ ಅನ್ನು ಓಡಿಸುತ್ತಿದ್ದ ಆತ ಅಕ್ರಮವಾಗಿ ಅಮೆರಿಕದಲ್ಲಿರುವ ಇಬ್ಬರು ಭಾರತೀಯರನ್ನು ಕರೆದೊಯ್ಯುತ್ತಿದ್ದ ಎಂದು ತಿಳಿದುಬಂದಿದೆ.

## ಸಣ್ ಸುದ್ದಿ

### ನಟಿ ಜೂಹಿ ಚಾವ್ಲಾಗೆ ವಿಧಿಸಿದ್ದ ದಂಡ ಕಡಿತ

■ ಸಂಭ್ರಮ ಪ್ರಭ

**ನವದೆಹಲಿ:** 5ಜಿ ತಂತ್ರಜ್ಞಾನ ಪ್ರಕರಣಕ್ಕೆ ಸಂಬಂಧಿಸಿದಂತೆ ನಟಿ ಜೂಹಿ ಚಾವ್ಲಾ ಅವರಿಗೆ ವಿಧಿಸಲಾಗಿದ್ದ 20 ಲಕ್ಷ ದಂಡವನ್ನು 2 ಲಕ್ಷಕ್ಕೆ ಇಳಿಸಿ ದೆಹಲಿ ಹೈಕೋರ್ಟ್ ಗುರುವಾರ ತೀರ್ಪು ನೀಡಿದೆ. ದೇಶದಲ್ಲಿ 5ಜಿ ನೆಟ್ವರ್ಕ್ ಅನ್ನು ಜಾರಿಗೊಳಿಸಬಾರದು. ಈ ನಿಟ್ಟಿನಲ್ಲಿ ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಚಾವ್ಲಾ ಅವರು ಕಳೆದ ವರ್ಷದ ಮೇ ತಿಂಗಳಲ್ಲಿ ದೆಹಲಿ ಹೈಕೋರ್ಟ್ನ ಮೊರೆಹೋಗಿದ್ದರು. ಚಾವ್ಲಾ ಅವರ ಅರ್ಜಿಯ ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಜೆ.ಆರ್.ಮಿಧಾ, 'ಅರ್ಜಿಯು ದೋಷದಿಂದ ಕೂಡಿದ್ದು, ಪ್ರಚಾರ ಪಡೆಯಬೇಕು ಎಂಬ ಉದ್ದೇಶ ಹೊಂದಿದೆ' ಎಂಬುದಾಗಿ ತಿಳಿಸಿದ್ದರು. ಅಲ್ಲದೇ ಚಾವ್ಲಾ ಅವರಿಗೆ 20 ಲಕ್ಷ ದಂಡವನ್ನೂ ಸಹ ವಿಧಿಸಿದ್ದರು. ಚಾವ್ಲಾಗೆ ದಂಡ ವಿಧಿಸಿದ್ದ ತೀರ್ಪಿನ ಕುರಿತ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ವಿಪಿನ್ ಸಂಘಿ ಮತ್ತು ಜಸ್ಮೀತ್ ಸಿಂಗ್ ಅವರನ್ನು ಒಳಗೊಂಡ ನ್ಯಾಯಪೀಠವು ಕೈಗೆತ್ತಿಕೊಂಡಿತ್ತು.



### ಮತ್ತೆ ರಸ್ತೆಗಿಳಿಯಲಿದೆ ಡಬಲ್ ಡೆಕರ್ ಬಸ್

■ ಸಂಭ್ರಮ ಪ್ರಭ

**ಮುಂಬೈ:** ಒಂದು ಕಾಲದಲ್ಲಿ ಬೆಂಗಳೂರಿನಲ್ಲಿ ಡಬಲ್ ಡೆಕರ್ ಬಸ್‌ಗಳು ಓಡಾಡುತ್ತಿದ್ದುದು ಬಹುತೇಕ ಎಲ್ಲರಿಗೂ ಗೊತ್ತಿರುವಂಥವೇ. ಅಂಥ ಬಸ್‌ಗಳು ಸದ್ಯದಲ್ಲೇ ಮತ್ತೆ ರಸ್ತೆಗಿಳಿಯಲಿವೆ. ಇನ್ನು ಮುಂದೆ ಇವೇ 'ಬೆಸ್ಟ್' ಎಂಬ ಅಭಿಪ್ರಾಯದೊಂದಿಗೆ ಇಂಥದ್ದೊಂದು ನಿರ್ಧಾರವನ್ನು ತಳೆಯಲಾಗಿದೆ. ಹೌದು.. ಒಂದೆರಡಲ್ಲ, ಹಲವು ಡಬಲ್ ಡೆಕರ್ ಬಸ್‌ಗಳು ಇನ್ಮುಂದೆ ರಸ್ತೆಗೆ ಇಳಿಯಲಿವೆ. ಆದರೆ ಅದು ಬೆಂಗಳೂರಿನಲ್ಲಲ್ಲ, ಬದಲಿಗೆ ಮುಂಬೈನಲ್ಲಿ. ಮುಂಬೈನ ಬಾಂಬೆ ಎಲೆಕ್ಟ್ರಿಕ್ ಸಪ್ಲೈ ಆಯಂಡ್ ಟ್ರಾನ್ಸ್‌ಪೋರ್ಟ್ (ಃಇಖಿ) ಮತ್ತು ಬೃಹನ್ಮುಂಬೈ ಮಹಾನಗರ ಪಾಲಿಕೆ ಜಂಟಿಯಾಗಿ ಡಬಲ್ ಡೆಕರ್ ಬಸ್‌ಗಳನ್ನು ರಸ್ತೆಗಿಳಿಸಲಿವೆ. ಅಂದಹಾಗೆ ಹೊಸದಾಗಿ ರಸ್ತೆಗಿಳಿಯಲಿರುವ ಈ ಡಬಲ್ ಡೆಕರ್ ಬಸ್‌ಗಳು ಎಲೆಕ್ಟ್ರಿಕ್ ವಾಹನಗಳಾಗಿರುವುದರಿಂದ ಶಬ್ದ ಹಾಗೂ ಹೊಗೆ ಪ್ರಮಾಣ ಶೂನ್ಯವಾಗಿರಲಿದೆ.



### ಸಾಮೂಹಿಕ ಅತ್ಯಾಚಾರ ಎಸಗಿ ಮಹಿಳೆ ಮೆರವಣಿಗೆ

■ ಸಂಭ್ರಮ ಪ್ರಭ

**ನವದೆಹಲಿ:** ಮಹಿಳೆಯನ್ನು ಅಪಹರಿಸಿ, ಸಾಮೂಹಿಕ ಅತ್ಯಾಚಾರ ಎಸಗಲಾಗಿದೆ ಎನ್ನಲಾಗಿದ್ದು, ನಂತರ ಬೀದಿಗಳಲ್ಲಿ ಆಕೆಯ ಮೆರವಣಿಗೆ ಮಾಡಿರುವ ಘಟನೆ ಪೂರ್ವ ದೆಹಲಿಯ ಕಸ್ತೂರಬಾ ನಗರದಲ್ಲಿ ನಡೆದಿದೆ. ಸಂತ್ರಸ್ತೆಯ ಕೂದಲನ್ನು ಕತ್ತರಿಸಲಾಗಿತ್ತು. ಆಕೆ ಮುಖಕ್ಕೆ ಕಪ್ಪು ಬಣ್ಣ ಬಳಿಯಲಾಗಿತ್ತಲ್ಲದೇ, ಶೂಗಳ ಹಾರವನ್ನು ಹಾಕಲಾಗಿತ್ತು ಎಂದು ಪೊಲೀಸರು ಗುರುವಾರ ಹೇಳಿದ್ದಾರೆ. ಘಟನೆಗೆ ಸಂಬಂಧಿಸಿ 11 ಜನ ಆರೋಪಿಗಳ ಪೈಕಿ, ಏಳು ಮಹಿಳೆಯರು ಸೇರಿ 9 ಜನರನ್ನು ಪೊಲೀಸರು ಬಂಧಿಸಿದ್ದಾರೆ. ಬಾಲಕರು ಈ ಕೃತ್ಯದಲ್ಲಿ ಭಾಗಿಯಾಗಿದ್ದರು ಎನ್ನಲಾಗಿದೆ. ಮಹಿಳೆಯ ಮೆರವಣಿಗೆ ಮಾಡುತ್ತಿದ್ದುದು ಎನ್ನಲಾದ ದೃಶ್ಯಗಳಿರುವ ವಿಡಿಯೊ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಮಹಿಳೆಯನ್ನು ರಕ್ಷಿಸಿರುವ ಪೊಲೀಸರು, ಆಕೆಗೆ ಆಪ್ತಸಮಾಲೋಚನೆಯ ವ್ಯವಸ್ಥೆ ಮಾಡಿದ್ದಾರೆ. 'ವೈಯಕ್ತಿಕ ದ್ವೇಷದ ಕಾರಣದಿಂದಾಗಿ ಈ ಕೃತ್ಯ ಎಸಗಲಾಗಿದೆ. ಪೊಲೀಸ್ ಹೊರ ಠಾಣೆಯ ಕೆಲವೇ ಮೀಟರ್ ಅಂತರದಲ್ಲಿ ಬುಧವಾರ ಈ ಘಟನೆ ಸಂಭವಿಸಿದೆ.




# ಪದ್ಮಶ್ರೀ ತಿರಸ್ಕರಿಸಿದ ಖ್ಯಾತ ಗಾಯಕಿ ಸಂಧ್ಯಾ ಮುಖರ್ಜಿ ಆಸ್ಪತ್ರೆಗೆ ದಾಖಲು

■ ಸಂಭ್ರಮ ಪ್ರಭ

**ಕೋಲ್ಕತಾ:** ಕೇಂದ್ರಸರ್ಕಾರದಿಂದ ನಿನ್ನೆಯಷ್ಟೇ (ಜ.26) ಘೋಷಣೆಯಾಗಿದ್ದ 2022ನೇ ಸಾಲಿನ ಪದ್ಮಶ್ರೀ ಪ್ರಶಸ್ತಿಯನ್ನು ತಿರಸ್ಕರಿಸಿದ್ದ ಖ್ಯಾತ ಗಾಯಕಿ ಸಂಧ್ಯಾ ಮುಖರ್ಜಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಸಂಧ್ಯಾ ಅವರಂಥ ಸುಪ್ರಸಿದ್ಧ, ಲೆಜೆಂಡರಿ ಕಲಾವಿದೆಗೆ 90ನೇ ವಯಸ್ಸಿನಲ್ಲಿ ಪ್ರಶಸ್ತಿಯನ್ನು ನೀಡುವುದು ನಿಜಕ್ಕೂ ಅವಮಾನವಾಗಿದೆ. ಹೀಗಾಗಿ ಅವರು ಪ್ರಶಸ್ತಿಯನ್ನು ನಿಕಾರಿಸಿದ್ದಾರೆ ಎಂದು ಅವರ ಪುತ್ರಿ ಹೇಳಿದ್ದರು. ಇದರಿಂದ ಅವರು ಪ್ರಶಸ್ತಿಯನ್ನು ವಾಪಸ್ ಮಾಡುತ್ತಿರುವುದಾಗಿ ಸ್ಪಷ್ಟನೆ ನೀಡಿದ್ದರು. ಇದಾದ ಮಾರನೆಯ ದಿನವೇ ಸಂಧ್ಯಾ ಅವರು ಅನಾರೋಗ್ಯದ ನಿಮಿತ್ತ ಆಸ್ಪತ್ರೆಗೆ ದಾಖಲಾಗಿದ್ದಾರೆ. ಸಧ್ಯಾ ಅವರು ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದು, ಶ್ವಾಸಕೋಶದ ಸೋಂಕಿಗೆ ಒಳಗಾಗಿದ್ದಾರೆ ಎನ್ನಲಾಗಿದೆ. ಕೋಲ್ಕತಾದ ಎಸ್‌ಎಸ್‌ಕೆಎಂ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತಕ್ಷಣವೇ ಅವರ ಕುಟುಂಬದ ಸದಸ್ಯರನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಂಡಿದ್ದಾರೆ. ಪದ್ಮಶ್ರೀ ಪ್ರಶಸ್ತಿಯನ್ನು ತಿರಸ್ಕರಿಸುವ ಮುಖರ್ಜಿ ಅವರ ನಿರ್ಧಾರವು ರಾಜಕೀಯ ಪ್ರೇರಿತವಲ್ಲ. ನಮ್ಮ ತಾಯಿ ರಾಜಕೀಯವನ್ನು ಮೀರಿದವರು. ಇದರಲ್ಲಿ ರಾಜಕೀಯ ಕಾರಣ ಹುಡುಕುವ ಪ್ರಯತ್ನ ಮಾಡಬೇಡಿ. ಅವರು ಅವಮಾನಿತರಾಗಿದ್ದಾರಷ್ಟೇ ಎಂದು ಸೌಮಿ ಸೆಂಗುಪ್ತಾ ಸ್ಪಷ್ಟನೆ ನೀಡಿದ್ದಾರೆ.



# ಒಂದು ರಾಷ್ಟ್ರ, ಒಂದು ಪಿಂಚಣಿ ಯೋಜನೆ ಜಾರಿಗೆ ಆಗ್ರಹ

■ ಸಂಭ್ರಮ ಪ್ರಭ


**ನವದೆಹಲಿ:** ಉದ್ಯೋಗಿಗಳ ಸಾಮಾಜಿಕ-ಆರ್ಥಿಕ ಭದ್ರತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ರಾಷ್ಟ್ರೀಯ ಪಿಂಚಣಿ ವ್ಯವಸ್ಥೆಯಲ್ಲಿ (ಎನ್‌ಪಿಎಸ್) ಬದಲಾವಣೆ ತರುವ ಮೂಲಕ 'ಒಂದು ರಾಷ್ಟ್ರ, ಒಂದು ಪಿಂಚಣಿ' ಯೋಜನೆ ಜಾರಿಗೊಳಿಸಬೇಕು ಎಂದು ನೌಕರರ ಸಂಘಟನೆಯು ಕೇಂದ್ರವನ್ನು ಆಗ್ರಹಿಸಿದೆ. 14 ಲಕ್ಷಕ್ಕೂ ಹೆಚ್ಚು ಮಂದಿ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರನ್ನು ಒಂದೇ ಪಿಂಚಣಿ ವ್ಯಾಪ್ತಿಗೆ ತರಬೇಕು ಎಂದು ಹಳೆಯ ಪಿಂಚಣಿ ಯೋಜನೆ ಆಂದೋಲನದ (ಎನ್‌ಎಂಓಪಿಎಸ್) ಮುಖಂಡರು ಕೇಂದ್ರ ಹಣಕಾಸು ಸಚಿವ ನಿರ್ಮಲಾ ಸೀತಾರಾಮ್ ಮತ್ತು ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ. 'ನೌಕರ ಪಡೆದ ಕೊನೆಯ ಮೂಲ ವೇತನದ ಅರ್ಧದಷ್ಟು ಹಣವನ್ನು ನಿವೃತ್ತಿಯ ನಂತರ ಪಿಂಚಣಿಯಾಗಿ ನೀಡುವ ಬಗ್ಗೆ ಎನ್‌ಪಿಎಸ್‌ನಲ್ಲಿ ಯಾವುದೇ ಖಾತರಿ ಇರುವುದಿಲ್ಲ. 'ನೂತನ ಪಿಂಚಣಿ ಯೋಜನೆಯಡಿ ನಿವೃತ್ತರು 500 ರಿಂದ 5,000 ರೂ. ಪಿಂಚಣಿ ಪಡೆಯುತ್ತಿದ್ದಾರೆ. ಹಳೆಯ ಪಿಂಚಣಿ ಯೋಜನೆಯಲ್ಲಿ ನಿವೃತ್ತಿ ನಂತರ ಕನಿಷ್ಠ 9,000 ರೂ. ಪಿಂಚಣಿ ಪಡೆಯಬಹುದು' ಎಂದು ಪತ್ರದಲ್ಲಿ ತಿಳಿಸಿದ್ದಾರೆ.



# ಆಂಧ್ರಪ್ರದೇಶದ ತಿರುಪತಿ ಇನ್ನು ಶ್ರೀಬಾಲಾಜಿ ಜಿಲ್ಲೆ

■ ಸಂಭ್ರಮ ಪ್ರಭ

**ಅಮರಾವತಿ:** ತಿರುಪತಿ ಇನ್ನು ಜಿಲ್ಲಾ ಕೇಂದ್ರವಾಗಲಿದ್ದು ಅದಕ್ಕೆ ಶ್ರೀ ಬಾಲಾಜಿ ಜಿಲ್ಲೆ ಎಂದು ಹೆಸರಿಡಲು ಆಂಧ್ರ ಪ್ರದೇಶ ಸರ್ಕಾರ ನಿರ್ಧರಿಸಿದೆ. ಸರ್ಕಾರದ ಈ ಕ್ರಮಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಜಿಲ್ಲಾ ಕೇಂದ್ರ ಮಾಡುವುದಕ್ಕೆ ಜನರಲ್ಲಿ ಖುಷಿ ಮನೆ ಮಾಡಿದ್ದರೂ ಬಾಲಾಜಿ ಜಿಲ್ಲೆ ಎಂದು ನಾಮಕರಣ ಮಾಡುವುದಕ್ಕೆ ಅತೃಪ್ತಿ ಸೂಚಿಸಿದ್ದಾರೆ.



ಶ್ರೀ ಬಾಲಾಜಿ ಎನ್ನುವುದು ವಿಶೇಷವಾಗಿ ಉತ್ತರ ಭಾರತದಲ್ಲಿ ಮಾತ್ರ ಪ್ರಚಲಿತದಲ್ಲಿರುವ ಹೆಸರು ಎನ್ನುವುದು ಅವರ ವಾದವಾಗಿದೆ. 'ಸರಳವಾಗಿ ತಿರುಪತಿ ಎಂದು ಹೆಸರಿಸಿದರೆ ಉತ್ತಮ. ಇಲ್ಲವೇ ಶ್ರೀ ವೆಂಕಟೇಶ್ವರ ಅಥವಾ ಶ್ರೀ ಶ್ರೀನಿವಾಸ ಎಂದು ನಾಮಕರಣ ಮಾಡಿದರೆ ಸಾಕಿತ್ತು' ಎಂದು ಕೆಲವರು ಅಭಿಪ್ರಾಯಪಟ್ಟಿದ್ದಾರೆ.

ವಿಜಯವಾಡ ಜಿಲ್ಲೆಗೆ ಮಾಜಿ ಮುಖ್ಯಮಂತ್ರಿ ಹಾಗೂ ತೆಲುಗು ದೇಶಂ ಪಕ್ಷದ ಸಂಸ್ಥಾಪಕ ಎನ್.ಟಿ. ರಾಮರಾವ್ ಜಿಲ್ಲೆ ಎಂದು ಮರುನಾಮಕರಣ ಮಾಡಲು ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ಸರ್ಕಾರ ನಿರ್ಧರಿಸಿದೆ. ಇದೊಂದು ಮಹತ್ವದ ರಾಜಕೀಯ ನಡೆಯೆಂದು ಭಾವಿಸಲಾಗಿದೆ. ಯಾವುದಾದರೊಂದು ಜಿಲ್ಲೆಗೆ ಎನ್‌ಟಿಆರ್ ಹೆಸರಿಡುವುದಾಗಿ ಕಳೆದ ವಿಧಾನಸಭೆ ಚುನಾವಣೆ ಪ್ರಚಾರದ ವೇಳೆ ಮುಖ್ಯಮಂತ್ರಿ ವೈ.ಎಸ್. ಜಗನ್‌ಮೋಹನ್ ರೆಡ್ಡಿ ಆಶ್ವಾಸನೆ ನೀಡಿದ್ದರು.

# ಆಸ್ಪತ್ರೆ, ಕ್ಲಿನಿಕ್‌ಗಳಲ್ಲೂ ಕರೋನಾ ಲಸಿಕೆ

■ ಸಂಭ್ರಮ ಪ್ರಭ

**ನವದೆಹಲಿ:** ಶೀಘ್ರದಲ್ಲಿ ಆಸ್ಪತ್ರೆ ಹಾಗೂ ಕ್ಲಿನಿಕ್‌ಗಳಲ್ಲೂ ಕೋವ್ಯಾಕ್ಸಿನ್, ಕೋವಿಶೀಲ್ಡ್ ಕೊರೊನಾ ಲಸಿಕೆಗಳು ಲಭ್ಯವಾಗಲಿವೆ.

ಮುಂದಿನ ದಿನಗಳಲ್ಲಿ ಕೊರೊನಾ ವೈರಸ್ ಲಸಿಕೆಗಳಾದ ಕೋವಿಶೀಲ್ಡ್ ಮತ್ತು ಕೋವಾಕ್ಸಿನ್ ಲಸಿಕೆಗಳು ಆಸ್ಪತ್ರೆಗಳಲ್ಲಿ ಮತ್ತು ಕ್ಲಿನಿಕ್‌ಗಳಲ್ಲಿ ಖರೀದಿಸಲು ಡ್ರಗ್ಸ್ ಕಂಟ್ರೋಲರ್ ಜನರಲ್ ಆಫ್ ಇಂಡಿಯಾ(ಡಿಸಿಜಿಐ) ಅನುಮೋದನೆ ನೀಡಿದೆ.

ಹೊಸ ಔಷಧಗಳು ಮತ್ತು ಕ್ಲಿನಿಕಲ್ ಪ್ರಯೋಗಗಳ ನಿಯಮಗಳು-2019 ರ ಅಡಿಯಲ್ಲಿ ಕೋವಿಶೀಲ್ಡ್, ಕೋವಾಕ್ಸಿನ್ ಲಸಿಕೆಗಳನ್ನು ಮುಕ್ತ ಮಾರುಕಟ್ಟೆಗೆ ಬಿಡುಗಡೆ ಮಾಡಲು ಡಿಸಿಜಿಐ ಅನುಮತಿ ನೀಡಿದೆ.

ಪ್ರಸ್ತುತ, ಕೋವ್ಯಾಕ್ಸಿನ್ ಪ್ರತಿ ಡೋಸ್ ಗೆ ರೂ. 1,200 ವೆಚ್ಚವಾಗುತ್ತದೆ ಆದರೆ ಕೋವಿಶೀಲ್ಡ್ ರೂ. 150 ಸೇವಾ ಶುಲ್ಕ ಸೇರಿದಂತೆ ಖಾಸಗಿ ಸೌಲಭ್ಯಗಳಲ್ಲಿ ರೂ. 780 ಆಗಿದೆ. ಜನವರಿ 19 ರಂದು ಸೆಂಟ್ರಲ್ ಡ್ರಗ್ಸ್ ಸ್ಟ್ಯಾಂಡರ್ಡ್ ಕಂಟ್ರೋಲ್ ಆರ್ಗನೈಸೇಶನ್ ಕೋವಿಡ್-19 ಕುರಿತ ವಿಷಯ ತಜ್ಞರ ಸಮಿತಿಯು ಸೀರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾದ ಕೋವಿಶೀಲ್ಡ್ ಮತ್ತು ಭಾರತ್ ಬಯೋಟೆಕ್‌ನ ಕೋವಾಕ್ಸಿನ್ ಗೆ ಮುಕ್ತ ಮಾರುಕಟ್ಟೆ ಅನುಮೋದನೆಯನ್ನು ಬಳಸಲು ಶಿಫಾರಸು ಮಾಡಿದ ನಂತರ ಈ ಅನುಮೋದನೆ ಬಂದಿದೆ. ಜನವರಿ 3, 2021ರಂದು ಕೋವ್ಯಾಕ್ಸಿನ್ ಮತ್ತು ಕೋವಿಶೀಲ್ಡ್‌ಗೆ ತುರ್ತು ಬಳಕೆಯ ಅಧಿಕಾರ(ಇಯುಎ) ನೀಡಲಾಗಿದೆ. ಕೋವಿಶೀಲ್ಡ್ ಮತ್ತು ಕೋವಾಕ್ಸಿನ್ ಲಸಿಕೆಗಳಿಗೆ ಡ್ರಗ್ಸ್ ಕಂಟ್ರೋಲರ್ ಜನರಲ್ ಆಫ್ ಇಂಡಿಯಾ(ಡಿಸಿಜಿಐ) ಷರತ್ತುಬದ್ಧ ಒಪ್ಪಿಗೆ ಸೂಚಿಸಿದ್ದು, ಮೆಡಿಕಲ್ ಸ್ಟೋರ್‌ಗಳಲ್ಲಿ ಲಸಿಕೆಗಳು ಲಭ್ಯವಿರುವುದಿಲ್ಲ.





ಖಾಸಗಿ ಆಸ್ಪತ್ರೆಗಳು ಮತ್ತು ಕ್ಲಿನಿಕ್‌ಗಳು ಈ ಲಸಿಕೆಗಳನ್ನು ಖರೀದಿಸಲು ಮತ್ತು ಅವುಗಳನ್ನು ನಿರ್ವಹಿಸಲು ಸಾಧ್ಯವಾಗುತ್ತದೆ. ಪ್ರತಿ ಆರು ತಿಂಗಳಿಗೊಮ್ಮೆ ವ್ಯಾಕ್ಸಿನೇಷನ್ ಡೇಟಾವನ್ನು ಡಿಸಿಜಿಐಗೆ ಸಲ್ಲಿಸಬೇಕು ಮತ್ತು ಡೇಟಾವನ್ನು ಕೋವಿನ್ ಅಪ್ಲಿಕೇಶನ್‌ನಲ್ಲಿ ನವೀಕರಿಸಬೇಕಾಗುತ್ತದೆ. ನಿಯಮಿತ ಮಾರುಕಟ್ಟೆ ಅನುಮೋದನೆ ಪಡೆದ ನಂತರ ಕೋವಿಶೀಲ್ಡ್ ಮತ್ತು ಕೋವಾಕ್ಸಿನ್ ಬೆಲೆಯನ್ನು ಪ್ರತಿ ಡೋಸ್ ಗೆ 275 ರೂ ಮತ್ತು ಹೆಚ್ಚುವರಿ ಸೇವಾ ಶುಲ್ಕ 150 ರೂ.ಗೆ ಮಿತಿಗೊಳಿಸಲಾಗುವುದು. ಲಸಿಕೆಗಳನ್ನು ಕೈಗೆಟುಕುವಂತೆ ಮಾಡಲು ಬೆಲೆಯನ್ನು ಮಿತಿಗೊಳಿಸಲು ರಾಷ್ಟ್ರೀಯ ಔಷಧೀಯ ಬೆಲೆ ಪ್ರಾಧಿಕಾರ(ಎನ್‌ಪಿಪಿಎ) ಕಾರ್ಯ ನಿರ್ವಹಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೋವ್ಯಾಕ್ಸಿನ್ ತಯಾರಕಾ ಸಂಸ್ಥೆ ಭಾರತ್ ಬಯೋಟೆಕ್ ಮತ್ತು ಕೋವಿಶೀಲ್ಡ್ ತಯಾರಕಾ ಸಂಸ್ಥೆ ಸೀರಂ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ, ಕ್ಲಿನಿಕಲ್ ಪ್ರಯೋಗಕ್ಕೆ ಸಂಬಂಧಿಸಿದ ಡೇಟಾವನ್ನು ಭಾರತ ಔಷಧ ನಿಯಂತ್ರಕಕ್ಕೆ ಸಲ್ಲಿಸಿವೆ. ಕೋವಿಡ್-19 ವಿಷಯ ತಜ್ಞರ ಸಮಿತಿಯು ಜ.19 ರಂದು ಅನುಮೋದನೆಯನ್ನು ಶಿಫಾರಸು ಮಾಡಿದ ನಂತರ ಮಾರುಕಟ್ಟೆಗೆ ಮಾರಾಟಕ್ಕೆ ಅನುಮತಿಸಲಾಗಿದೆ.

# ರಷ್ಯಾ ವಿರುದ್ಧದ ಹೋರಾಟದಲ್ಲಿ ಉಕ್ರೇನ್‌ಗೆ ಬೆಂಬಲ: ಜೋ ಬೈಡನ್ ವಾಗ್ದಾನ

■ ಸಂಭ್ರಮ ಪ್ರಭ

**ವಾಷಿಂಗ್ಟನ್:** ರಷ್ಯಾ ಮತ್ತು ಉಕ್ರೇನ್ ನಡುವೆ ಯುದ್ಧ ವಿರಾಮದ ಒಪ್ಪಂದವಾದ ಒಂದು ದಿನದ ಬಳಿಕ ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರು ಉಕ್ರೇನ್‌ಗೆ ಬೆಂಬಲದ ಭರವಸೆ ನೀಡಿದ್ದಾರೆ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್‌ಕಿ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ ಬೈಡನ್, ರಷ್ಯಾ ವಿರುದ್ಧದ ಹೋರಾಟದಲ್ಲಿ ಬೆಂಬಲದ ವಾಗ್ದಾನ ಮಾಡಿದ್ದಾರೆ ಎಂದು ಶ್ವೇತಭವನ ತಿಳಿಸಿದೆ. ಉಕ್ರೇನ್ ಸುತ್ತ 1 ಲಕ್ಷ ಸೇನೆ ನಿಯೋಜಿಸಿದ್ದ ರಷ್ಯಾ ಯುದ್ಧದ ವಾತಾವರಣ ಸೃಷ್ಟಿಸಿತ್ತು. ಬಳಿಕ, ನಡೆದ ರಾಜತಾಂತ್ರಿಕ ಮಾತುಕತೆಯಲ್ಲಿ ತಾತ್ಕಾಲಿಕ ಯುದ್ಧ ವಿರಾಮಕ್ಕೆ ಒಪ್ಪಿಗೆ ಸೂಚಿಸಿತ್ತು. ಉಕ್ರೇನ್ ಮೇಲೆ ರಷ್ಯಾದ ಮಿಲಿಟರಿ ಒತ್ತಡದ ವಿರುದ್ಧ ಪಾಶ್ಚಿಮಾತ್ಯ ದೇಶಗಳ ಒಕ್ಕೂಟ ರಚಿಸುವ ಮುಂಚೂಣಿಯಲ್ಲಿ ಜೋ ಬೈಡನ್ ಇದ್ದಾರೆ. ಇದು ರಷ್ಯಾದ ಕೆಂಗಣ್ಣಿಗೂ ಕಾರಣವಾಗಿದೆ ಎಂದು ವರದಿ ತಿಳಿಸಿದೆ. ಝೆಲೆನ್ಸ್‌ಕಿಯೊಂದಿಗಿನ ಮಾತುಕತೆ ವೇಳೆ, 'ರಷ್ಯಾವು ಉಕ್ರೇನ್ ಅನ್ನು ಮತ್ತಷ್ಟು ಆಕ್ರಮಿಸಲು ಪ್ರಯತ್ನಿಸಿದರೆ ನಿರ್ಣಾಯಕವಾಗಿ ಪ್ರತಿಕ್ರಿಯಿಸಲು ಅದರ ಮಿತ್ರರಾಷ್ಟ್ರಗಳೊಂದಿಗೆ ಅಮೆರಿಕ ಸಿದ್ಧವಿದೆ ಎಂದು ಬೈಡನ್ ಪುನರುಚ್ಚರಿಸಿದರು'ಎಂದು ಶ್ವೇತಭವನದ ಪ್ರಕಟಣೆ ತಿಳಿಸಿದೆ. ಉಕ್ರೇನ್‌ನ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಅಮೆರಿಕದ ಬದ್ಧತೆಯನ್ನು ಬೈಡನ್ ಒತ್ತಿ ಹೇಳಿದರು. ರಷ್ಯಾದ ಮಿಲಿಟರಿ ನಿಯೋಜನೆಯಿಂದ ಉಂಟಾಗಿರುವ ಒತ್ತಡದ ನಡುವೆ ಉಕ್ರೇನ್‌ನ ಆರ್ಥಿಕತೆಗೆ ಸಹಾಯ ಮಾಡಲು ಹೆಚ್ಚುವರಿ ಸಮಗ್ರ ಆರ್ಥಿಕ ಬೆಂಬಲವನ್ನು ನೀಡಲು ಅಮೆರಿಕ ಯೋಜಿಸಿದೆ ಎಂದು ಬೈಡನ್ ತಿಳಿಸಿದ್ದಾರೆ. ಉಕ್ರೇನ್ ತೊರೆಯುವಂತೆ ತನ್ನ ನಾಗರಿಕರಿಗೆ ಅಮೆರಿಕ ನೀಡಿರುವ ಕರೆ ಬಗ್ಗೆ ಉಕ್ರೇನ್ ಟೀಕೆಗಳನ್ನು ಉದ್ದೇಶಿಸಿದ ಬೈಡನ್, ರಾಯಭಾರ ಕಚೇರಿಯು 'ಸಂಪೂರ್ಣವಾಗಿ ತೆರೆದಿರಲಿದ್ದು, ಕಾರ್ಯನಿರ್ವಹಿಸಲಿದೆ'ಎಂದು ಭರವಸೆ ನೀಡಿದ್ದಾರೆ. ಈ ಬಗ್ಗೆ ಟ್ವೀಟ್ ಮಾಡಿರುವ ಉಕ್ರೇನ್ ಅಧ್ಯಕ್ಷ ಝೆಲೆನ್ಸ್‌ಕಿ, ಅಮೆರಿಕ ಅಧ್ಯಕ್ಷರು ದೀರ್ಘ ಫೋನ್ ಸಂಭಾಷಣೆಯನ್ನು ನಡೆಸಿದರು.



ಜಾಹೀರಾತಿಗಾಗಿ ಸಂಪರ್ಕಿಸಿ 9844344445 080-23482445 sambramaprabha@gmail.com

# ಹಿರಿಯ ನಟನ ಜತೆ ನಮಿತಾ ಡೇಟಿಂಗ್

ಇತ್ತೀಚೆಗೆ, ನಟಿ ನಮಿತಾ ಅವರು ಅಷ್ಟಾಗಿ ಸಿನಿಮಾಗಳಲ್ಲಿ ಕಾಣಿಸಿಕೊಳ್ಳುತ್ತಿಲ್ಲ . ಆದರೆ , ನಮಿತಾ ಹೆಸರು ಈಗ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ಸೌಂಡು ಮಾಡುತ್ತಿದೆ . ಅದು ಯಾವುದೋ ಸಿನಿಮಾ ಅಥವಾ ಪಾತ್ರಗಳಿಗೆ ಅಲ್ಲ . ಬದಲಿಗೆ ಒಂದು ವೈಯಕ್ತಿಕ ಜೀವನದ ವಿಚಾರಕ್ಕೆ ಸುದ್ದಿಯಲ್ಲಿದ್ದಾರೆ . ನಟಿ ನಮಿತಾ ಈಗ ಹಿರಿಯ ನಟನೊಂದಿಗೆ ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ಹಲವು ಸುದ್ದಿಗಳು ಸೋಶಿಯಲ್ ಮೀಡಿಯಾಗಳಲ್ಲಿ ಹರಿದಾಡುತ್ತಿವೆ . ಇದೇ , ವಿಚಾರವಾಗಿ ನಮಿತಾ ಅವರ ಎರಡನೇ ಪತಿ ಗರಂ ಆಗಿದ್ದಾರೆ ಎನ್ನುವ ಸುದ್ದಿಗಳು ಕೇಳಿಬಂದಿವೆ . ಇನ್ನು , ಈ ಸುದ್ದಿ ಇಂದಿನದ್ದು ಅಲ್ಲ . 2017 ರಿಂದಲೇ ಹೀಗೊಂದು ಸುದ್ದಿ ಹರಿದಾಡುತ್ತಿದೆ . ಆದರೆ, ಸದ್ಯ ಈ ಸುದ್ದಿ ವೈರಲ್ ಆಗ ತೊಡಗಿದೆ . ' ನಟಿ ನಮಿತಾ ಅವರು ಹಿರಿಯ ಪೋಷಕ ನಟ ಶರತ್ ಬಾಬು ಜೊತೆಗೆ ಡೇಟಿಂಗ್ ಮಾಡುತ್ತಿದ್ದಾರೆ . ಮದುವೆ ಬಳಿಕವೂ ನಮಿತಾ ಹಿರಿಯ ನಟನೊಂದಿಗೆ ಸಂಬಂಧ ಹೊಂದಿದ್ದಾರೆ', ಎನ್ನಲಾಗಿದೆ . ಇಂತದ್ದೊಂದು ಸುದ್ದಿ ಕೇವಲ ಡೇಟಿಂಗ್ ವಿಚಾರಕ್ಕೆ ಮುಕ್ತಾಯ ಆಗಿಲ್ಲ . ಬದಲಿಗೆ , ಶರತ್ ಬಾಬು ಅವರನ್ನು ನಮಿತಾ ಅವರು ಮದುವೆಯಾಗುತ್ತಾರೆಂದು ಸಹ ಹೇಳಲಾಗುತ್ತಿತ್ತು . ಆದರೆ , ಈಗ ಇಂತಹ ಸುದ್ದಿಗಳಿಗೆ ನಮಿತಾ ಮತ್ತು ಅವರ 2ನೇ ಪತಿ ವೀರೇಂದ್ರ ಚೌಧರಿ ತೆರೆ ಎಳೆದಿದ್ದಾರೆ . ನಟಿ ನಮಿತಾ ಪತಿ ವೀರೇಂದ್ರ ಚೌದರಿ ಈ ವಿಚಾರವಾಗಿ ಮಾಧ್ಯಮಗಳ ಜತೆ ಮಾತನಾಡಿದ್ದು, ' ಮದುವೆ ಬಳಿಕ ನಮಿತಾ ನನ್ನ ಜೊತೆಗೆ ಇದ್ದಾರೆ . ಅವರು ಈ ಬಗ್ಗೆ ಹೆಚ್ಚು ತಲೆಕೆಡಿಸಿಕೊಂಡಿಲ್ಲ . ಈ ಗಾಳಿ ಸುದ್ದಿಗಳು ಎಲ್ಲಿಂದ ಆರಂಭವಾದವು ಎನ್ನುವ ಬಗ್ಗೆಯೂ ನಮಗೆ ಗೊತ್ತಿಲ್ಲ . ನಮಗೆ ಶರತ್ ಬಾಬು ಯಾರು ಅಂತ ಗೊತ್ತಿಲ್ಲ . ಅವರು ಒಬ್ಬ ಹಿರಿಯ ನಟನಾಗಿದ್ದು , ಇದರಿಂದ ಅವರಿಗೂ ತೊಂದರೆ ಆಗಿರುತ್ತದೆ . ಇದು ಪಕ್ಕಾ ತಪ್ಪು ಮಾಹಿತಿ ' ಎಂದು ಹೇಳಿದ್ದಾರೆ . ಜತೆಗೆ , ಈ ಬಗ್ಗೆ ನಟಿ ನಮಿತಾ ಕೂಡ , ' ನನಗೆ ಶರತ್ ಬಾಬು ಯಾರು ಅಂತಲೇ ಗೊತ್ತಿಲ್ಲ . ಈ ಸುದ್ದಿ ಮಾಧ್ಯಮಗಳಲ್ಲಿ ಹೇಗೆ ಬಿತ್ತರವಾಯಿತು ಎನ್ನುವ ಬಗ್ಗೆಯೂ ಗೊತ್ತಿಲ್ಲ . ಇದೊಂದು ಸಂಪೂರ್ಣ ಸುಳ್ಳುಸುದ್ದಿ . ನನಗಿಂತ ವಯಸ್ಸಿನಲ್ಲಿ ದುಪ್ಪಟ್ಟು ದೊಡ್ಡವರಾದ ವ್ಯಕ್ತಿಯನ್ನು ನಾನು ಹೇಗೆ ಮದುವೆ ಆಗುತ್ತೀನಿ ?', ಎಂದು ಹೇಳಿದ್ದಾರೆ . ಹೀಗಾಗಿ ನಮಿತಾ , ಪತಿ ವಿರೇಂದ್ರ ಚೌಧರಿ ಇದು ಸುಳ್ಳು ಸುದ್ದಿ ಎಂದಿದ್ದಾರೆ . ಈ ಬಗ್ಗೆ ನಮಿತಾ ಈ ಹಿಂದೆಯೇ ಮಾತನಾಡಿದ್ದಾರೆ . ಆದರೂ ಕೂಡ ಈ ಸುದ್ದಿ ಮತ್ತೆ ಮತ್ತೆ ಮುನ್ನೆಲೆಗೆ ಬರುತ್ತಿದೆ .





# ಉದ್ಯಮಿ ಸೂರಜ್ ನಂಬಿಯಾರ್ ಜತೆ ದಾಂಪತ್ಯ ಜೀವನಕ್ಕೆ ಕಾಲಿಟ್ಟ ಮೌನಿ ರಾಯ್



ನಟಿ ಮೌನಿ ರಾಯ್ ಅವರು ಗೆಳೆಯ, ಉದ್ಯಮಿ ಸೂರಜ್ ನಂಬಿಯಾರ್ ಜತೆ ಗೋವಾದಲ್ಲಿ ಮದುವೆಯಾಗಿದ್ದಾರೆ. ಮೌನಿ ರಾಯ್ ಮತ್ತು ಸೂರಜ್ ಮದುವೆಯ ಚಿತ್ರಗಳು ಸಾಮಾಜಿಕ ತಾಣಗಳಲ್ಲಿ ವೈರಲ್ ಆಗಿವೆ. ಕುಟುಂಬ ಸದಸ್ಯರು ಮತ್ತು ಚಿತ್ರರಂಗದ ಆಪ್ತರ ಸಮ್ಮುಖದಲ್ಲಿ ಇವರ ವಿವಾಹ ನೆರವೇರಿದೆ. 2019ರಲ್ಲಿ ಹೊಸ ವರ್ಷಾಚರಣೆಯ ಸಂದರ್ಭ ಮೌನಿ ರಾಯ್ ಅವರಿಗೆ ಸೂರಜ್ ಪರಿಚಯವಾಗಿತ್ತು. ಬಳಿಕ ಅವರಿಬ್ಬರ ಮಧ್ಯೆ ಪ್ರೀತಿ ಉಂಟಾಗಿತ್ತು. ಆದರೆ ಪ್ರೀತಿಸುತ್ತಿರುವ ವಿಚಾರವನ್ನು ಎಲ್ಲಿಯೂ ಇಬ್ಬರೂ ಬಹಿರಂಗಪಡಿಸಿರಲಿಲ್ಲ. ಬಿಳಿ ಬಣ್ಣದ, ಕೆಂಪು ಅಂಚಿನ ಸೀರೆಯುಟ್ಟು ನಟಿ ಮೌನಿ ರಾಯ್ ಕಂಗೊಳಿಸಿದರೆ, ವರ ಸೂರಜ್, ಚಿನ್ನದ ಬಣ್ಣದ ಕುರ್ತಾ ಮತ್ತು ಬಿಳಿ ಪಂಚೆಯುಟ್ಟು ಮದುವೆ ಶಾಸ್ತ್ರ ನೆರವೇರಿಸಿದರು. ಸೂರಜ್ ಅವರು ಮಲೆಯಾಳಿ ಕುಟುಂಬದವರಾಗಿದ್ದು, ಮಲೆಯಾಳಂ ಸಂಪ್ರದಾಯದಂತೆ ಗೋವಾದಲ್ಲಿ ಮದುವೆ ನಡೆದಿದೆ.

# ಮಿಸ್ಟರ್ ಅಂಡ್ ಮಿಸ್ ಮಹಿ ಜಾಹ್ನವಿ



ಬಾಲಿವುಡ್ ಬೆಡಗಿ ಜಾಹ್ನವಿ ಕಪೂರ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ದೋಸ್ತಾನಾ 2 ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಮತ್ತೊಂದು ಚಿತ್ರ ಮಿಸ್ಟರ್ ಅಂಡ್ ಮಿಸ್ ಮಹಿ ಸಿನಿಮಾ ಶೂಟಿಂಗ್ ಗೆ ರೆಡಿಯಾಗುತ್ತಿದ್ದಾರೆ. ಕ್ರಿಕೆಟ್ ಕಥಾಂಶವಿರುವ ಈ ಚಿತ್ರಕ್ಕಾಗಿ ಜಾಹ್ನವಿ ಕಪೂರ್ ತರಬೇತಿ ಪಡೆಯುತ್ತಿದ್ದಾರೆ. ಈ ಸಂದರ್ಭದಲ್ಲಿ ಅವರು ಕ್ರಿಕೆಟ್ ಶಿಬಿರದಲ್ಲಿ ತರಬೇತಿ ಪಡೆದ ಫೋಟೋಗಳು ಮತ್ತು ತಮ್ಮ ತಂಡದ ಫೋಟೋಗಳನ್ನು ಹಂಚಿಕೊಂಡರು. 'ಕ್ರಿಕೆಟ್ ಕ್ಯಾಂಪ್ ಮಿಸ್ಟರ್ ಅಂಡ್ ಮಿಸ್ ಮಹಿ' ಎಂದು ಶೀರ್ಷಿಕೆ ನೀಡಿದ್ದಾರೆ. ಅವರ ತಂಡವೂ ಫೋಟೋಗಳನ್ನು ಹಂಚಿಕೊಂಡಿದೆ. ಈ ಫೋಟೋಗಳು ಜಾಹ್ನವಿ ಕಪೂರ್ ಅವರ ಮುಂಬರುವ ಚಿತ್ರದ ನೋಟದಂತೆ ಭಾಸವಾಗುತ್ತಿದೆ.



# ನನ್ನ ಬ್ರಾ ಸೈಜಿನ ಅಳತೆ ಕೇಳುತ್ತಾನೆ

ಹಿಂದಿಯ ಜನಪ್ರಿಯ ಕಿರುತೆರೆ ನಟಿ ಶ್ವೇತಾ ತಿವಾರಿ ದೇವರ ಕುರಿತಾಗಿ ವಿವಾದಾತ್ಮಕ ಹೇಳಿಕೆ ನೀಡಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರ ವಿರುದ್ಧ ಟೀಕೆಗಳು ವ್ಯಕ್ತವಾಗಿವೆ. ಅವರ ಹೇಳಿಕೆ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದ್ದು ನೆಟ್ಟಿಗರು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡಿದ್ದಾರೆ. ಘಟನೆ ಕುರಿತಂತೆ ಮಧ್ಯಪ್ರದೇಶದ ಗೃಹ ಸಚಿವ ನರೋತ್ತಮ್ ಮಿಶ್ರಾ ತನಿಖೆಗೆ ಆದೇಶ ಮಾಡಿದ್ದು 24 ಗಂಟೆಗಳ ಒಳಗಾಗಿ ವರದಿ ನೀಡುವಂತೆ ಪೊಲೀಸರಿಗೆ ಸೂಚನೆ ನೀಡಿದ್ದಾರೆ ಶ್ವೇತಾ ತಿವಾರಿ ಭೋಪಾಲ್ಗೆ ಬಂದಾಗ ಈ ರೀತಿಯ ಹೇಳಿಕೆ ನೀಡಿದ್ದಾರೆ. ಅವರು 'ಶೋ ಸ್ಟಾಪರ್' ವೆಬ್ ಸರಣಿಯ ಪ್ರಚಾರ ಸಂದರ್ಭದಲ್ಲಿ ದೇವರ ಕುರಿತಾಗಿ ಮಾತನಾಡಿದ್ದಾರೆ. 'ಶೋ ಸ್ಟಾಪರ್' ವೆಬ್ ಸರಣಿಯಲ್ಲಿ ಶ್ವೇತಾ ತಿವಾರಿ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಇದು ಫ್ಯಾಶನ್ ವಲಯಕ್ಕೆ ಸಂಬಂಧಿಸಿದ ವೆಬ್ಸರಣಿಯಾಗಿದೆ. ಕಾರ್ಯಕ್ರಮದಲ್ಲಿ ಅವರು ತಮ್ಮ ಒಳ ಉಡುಪುಗಳ ಬಗ್ಗೆ ಮಾತನಾಡುವಾಗ 'ನನ್ನ ಬ್ರಾ ಸೈಜಿನ ಅಳತೆಯನ್ನು ದೇವರು ತೆಗೆದುಕೊಳ್ಳುತ್ತಾನೆ' (ಮೇರಿ ಬ್ರಾ ಕಾ ಸೈಜ್ ಭಗವಾನ್ ಲೇ ರಹೇ ಹೈ) ಎಂದು ಹೇಳಿದ್ದಾರೆ. ಈ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು ದೇವರ ಬಗ್ಗೆ ಈ ರೀತಿ ಹಗುರವಾಗಿ ಮಾತನಾಡುವುದು ಸರಿಯಲ್ಲ ಎಂದು ಶ್ವೇತಾ ತಿವಾರಿ ಅವರನ್ನು ನೆಟ್ಟಿಗರು ತರಾಟೆಗೆ ತೆಗೆದುಕೊಂಡಿದ್ದಾರೆ.



# ವಿಕ್ರಾಂತ್ ರೋಣ ಬಿಡುಗಡೆ ಮತ್ತೆ ಮುಂದಕ್ಕೆ

ನಟ ಕಿಚ್ಚ ಸುದೀಪ್ ನಟನೆಯ, ಅನೂಪ್ ಭಂಡಾರಿ ನಿರ್ದೇಶನದ ಪ್ಯಾನ್ ಇಂಡಿಯಾ ಬಿಗ್ ಬಜೆಟ್ ಸಿನಿಮಾ 'ವಿಕ್ರಾಂತ್ ರೋಣ' ಬಿಡುಗಡೆಯ ದಿನಾಂಕ ಮತ್ತೆ ಮುಂದಕ್ಕೆ ಹೋಗಿದೆ. ಫೆ.24ರಂದು ತೆರೆ ಕಾಣಬೇಕಿದ್ದ ಚಿತ್ರದ ಬಿಡುಗಡೆ ಕೋವಿಡ್ ಸೃಷ್ಟಿಸಿದ ಪ್ರತಿಕೂಲ ಪರಿಸ್ಥಿತಿ, ನಿಯಮಾವಳಿಗಳ ಇತಿಮಿತಿಯಿಂದಾಗಿ ಮುಂದಕ್ಕೆ ಹೋಗಿದೆ. 'ಭಾರತದ ಮೊದಲ ಸಾಹಸಮಯಿ ನಾಯಕನನ್ನು ಪ್ರಪಂಚಕ್ಕೆ ಪರಿಚಯಿಸುವ ಹೊಸ ದಿನಾಂಕವನ್ನು ಶೀಘ್ರ ತಿಳಿಸುತ್ತೇವೆ' ಎಂದು ಚಿತ್ರತಂಡ ಪ್ರಕಟಣೆಯಲ್ಲಿ ಹೇಳಿದೆ. ನಿರೂಪ್ ಭಂಡಾರಿ ಹಾಗೂ ನೀತಾ ಅಶೋಕ್ ಮುಖ್ಯಭೂಮಿಕೆಯಲ್ಲಿ ನಟಿಸಿರುವ ಈ ಚಿತ್ರವು '3ಡಿ'ಯಲ್ಲಿ ತೆರೆಕಾಣಲಿದೆ. ಸುದೀಪ್ ಅವರೇ ಕನ್ನಡದ ಜೊತೆಗೆ, ಹಿಂದಿ, ತಮಿಳು, ತೆಲುಗು ಹಾಗೂ ಇಂಗ್ಲಿಷ್ನ ಡಬ್ಬಿಂಗ್ ಮಾಡಿದ್ದಾರೆ. ಕಳೆದ ಆಗಸ್ಟ್ 19ರಂದೇ ತೆರೆಯ ಮೇಲೆ ಬರಬೇಕಿದ್ದ ಈ ಸಿನಿಮಾ, ಕೋವಿಡ್ ಲಾಕ್ಡೌನ್ ಕಾರಣದಿಂದ ಮುಂದೂಡಲ್ಪಟ್ಟಿತ್ತು. ಬಾಲಿವುಡ್ ನಟಿ ಜಾಕ್ವೆಲಿನ್ ಫರ್ನಾಂಡಿಸ್, ಈ ಚಿತ್ರದ ಮುಖಾಂತರ ಚಂದನವನಕ್ಕೆ ಹೆಜ್ಜೆ ಇಟ್ಟಿದ್ದು, ರಕೇಲ್ ಡಿಕೋಸ್ಟ ಉರ್ಫ್ 'ಗಡಂಗ್ ರಕ್ಕಮ್ಮ'ನಾಗಿ ವಿಶೇಷ ಪಾತ್ರದಲ್ಲಿ ತೆರೆ ಮೇಲೆ ಕಾಣಿಸಿಕೊಳ್ಳಲಿದ್ದಾರೆ. ಹಿಂದಿ ಹಾಗೂ ಇತರ ಭಾಷೆಗಳಲ್ಲಿ ಪ್ರಮೋಷನ್ಸ್ ಸೇರಿ ಚಿತ್ರದ ಬಜೆಟ್ 100 ಕೋಟಿ ದಾಟಿದೆ ಎಂದು ಇತ್ತೀಚೆಗೆ ಚಿತ್ರದ ನಿರ್ಮಾಪಕ ಜಾಕ್ ಮಂಜು ತಿಳಿಸಿದ್ದರು. ಜೀ ಸ್ಟುಡಿಯೊಸ್ ಹಾಗೂ ಕಿಚ್ಚ ಕ್ರಿಯೇಷನ್ಸ್ನಡಿ ಜಾಕ್ ಮಂಜು ಅವರ ಶಾಲಿನಿ ಆರ್ಟ್ಸ್ ಈ ಚಿತ್ರವನ್ನು ವಿತರಣೆ ಮಾಡಲಿದೆ. ಚಿತ್ರಕ್ಕೆ ಬಿ.ಅಜನೀಶ್ ಲೋಕನಾಥ್ ಸಂಗೀತವಿದೆ.

# ವಿಂಡೀಸ್ ಸರಣಿಗೆ ಭಾರತ ಸಜ್ಜು

## ♦ ಫೆಬ್ರವರಿ 6ರಿಂದ 20ರವರೆಗೆ ಟೂರ್ನಿ ♦ 3 ದಿನ, 3 ಟಿ20 ಪಂದ್ಯ

■ ಸಂಭ್ರಮ ಪ್ರಭ

**ಮುಂಬೈ:** ಮುಂದಿನ ತಿಂಗಳು ಫೆಬ್ರವರಿ 6 ರಿಂದ ಶುರುವಾಗಲಿರುವ ವೆಸ್ಟ್ ಇಂಡೀಸ್ ವಿರುದ್ಧದ ಸರಣಿಗಾಗಿ ಈಗಾಗಲೇ ಟೀಮ್ ಇಂಡಿಯಾವನ್ನು ಪ್ರಕಟಿಸಲಾಗಿದೆ.

18 ಸದಸ್ಯರ ತಂಡವನ್ನು ರೋಹಿತ್ ಶರ್ಮಾ ಮುನ್ನಡೆಸಿದರೆ, ತಂಡದ ಉಪನಾಯಕನ ಜವಾಬ್ದಾರಿಯನ್ನು ಕೆಎಲ್ ರಾಹುಲ್ ಅವರಿಗೆ ವಹಿಸಲಾಗಿದೆ. ಈ ಸರಣಿಯಲ್ಲಿ ಒಟ್ಟು 6 ಪಂದ್ಯಗಳು ನಡೆಯಲಿದ್ದು, ಅದರಂತೆ 3 ಏಕದಿನ ಹಾಗೂ 3 ಟಿ20 ಪಂದ್ಯಗಳನ್ನಾಡಲಿದೆ. ಆದರೆ ಫೆಬ್ರವರಿ 6 ರಂದು ನಡೆಯಲಿರುವ ಮೊದಲ ಪಂದ್ಯದಿಂದ ಟೀಮ್ ಇಂಡಿಯಾ ಉಪನಾಯಕ ಕೆಎಲ್ ರಾಹುಲ್ ಹೊರಗುಳಿದಿದ್ದಾರೆ.

ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಸರಣಿಯಲ್ಲಿ ಟೀಮ್ ಇಂಡಿಯಾವನ್ನು ಮುನ್ನಡೆಸಿದ್ದ ಕೆಎಲ್ ರಾಹುಲ್ ಚೊಚ್ಚಲ ನಾಯಕತ್ವದಲ್ಲಿ ಹೀನಾಯ ಸೋಲಿನ ರುಚಿ ನೋಡಿದ್ದರು. ಆಡಿದ ಮೂರು ಪಂದ್ಯಗಳನ್ನು ಗೆಲ್ಲುವ ಸೌತ್ ಆಫ್ರಿಕಾ ಸರಣಿಯನ್ನು ಕ್ಲೀನ್ ಸ್ವೀಪ್ ಮಾಡಿಕೊಂಡಿತ್ತು. ಇನ್ನು ಈ ಸರಣಿಯಲ್ಲಿ ಕೆಎಲ್ ರಾಹುಲ್ ಅವರ ಪ್ರದರ್ಶನ ಕೂಡ ಉತ್ತಮವಾಗಿರಲಿಲ್ಲ. ಹೀಗಾಗಿ ವೆಸ್ಟ್ ಇಂಡೀಸ್ ವಿರುದ್ಧದ ಸರಣಿಯಲ್ಲಿ ಟೀಮ್ ಇಂಡಿಯಾದ ಬಹುತೇಕ ಆಟಗಾರರು ಫಾರ್ಮ್ ಕಂಡುಕೊಳ್ಳಬೇಕಿದೆ.

ಆದರೆ ವಿಂಡೀಸ್ ವಿರುದ್ಧದ ಮೊದಲ ಏಕದಿನ ಪಂದ್ಯದಿಂದ ಹೊರಗುಳಿಯಲು ಕೆಎಲ್ ರಾಹುಲ್ ನಿರ್ಧರಿಸಿದ್ದಾರೆ. ವೈಯಕ್ತಿಕ ಕಾರಣಗಳಿಂದ ಕೆಎಲ್ ರಾಹುಲ್ ಅವರು ಈ ಪಂದ್ಯದ ವೇಳೆ ತಂಡದ ಜೊತೆ ಕಾಣಿಸಿಕೊಳ್ಳುವುದಿಲ್ಲ ಎಂದು ತಿಳಿದು ಬಂದಿದೆ. ಅದರಂತೆ 2ನೇ ಏಕದಿನ ಪಂದ್ಯದ ವೇಳೆಗೆ ತಂಡವನ್ನು ಕೂಡಿಕೊಳ್ಳಲಿದ್ದಾರೆ. ಇದಾಗ್ಯೂ ಅಷ್ಟೇ ಅಲ್ಲದೆ ಉಳಿದ ಎಲ್ಲಾ ಪಂದ್ಯಗಳಲ್ಲೂ ರಾಹುಲ್ ಆಡಲಿದ್ದಾರೆ ಎಂದು ಬಿಸಿಸಿಐ ತಿಳಿಸಿದೆ.

ಸದ್ಯ ಟೀಮ್ ಇಂಡಿಯಾ ಉಪನಾಯಕರಾಗಿರುವ ಕೆಎಲ್ ರಾಹುಲ್ ಏಕದಿನ ಸರಣಿಯಲ್ಲಿ ಮಧ್ಯಮ ಕ್ರಮಾಂಕದಲ್ಲಿ ಆಡುವ ಸಾಧ್ಯತೆಯಿದೆ. ಏಕೆಂದರೆ ಆರಂಭಿಕನಾಗಿ ತಂಡಕ್ಕೆ ಶಿಖರ್ ಧವನ್ ಮರಳಿದ್ದು, ಹೀಗಾಗಿ ರಾಹುಲ್ ಮಿಡಲ್ ಆರ್ಡರ್ನಲ್ಲಿ ಬ್ಯಾಟ್ ಬೀಸಬಹುದು. ಇದಾಗ್ಯೂ ಟಿ20 ಪಂದ್ಯದಲ್ಲಿ ರೋಹಿತ್ ಶರ್ಮಾ ಜೊತೆ ಕೆಎಲ್ ರಾಹುಲ್ ಇನಿಂಗ್ಸ್ ಆರಂಭಿಸುವುದು ಬಹುತೇಕ ಖಚಿತ ಎನ್ನಬಹುದು.




### ಭಾರತ-ವೆಸ್ಟ್ ಇಂಡೀಸ್ ಸರಣಿ ವೇಳಾಪಟ್ಟಿ ಹೀಗಿದೆ

**ಏಕದಿನ ಸರಣಿ ವೇಳಾಪಟ್ಟಿ**

6 ಫೆಬ್ರವರಿ: 1ನೇ ODI, ಅಹಮದಾಬಾದ್
ಫೆಬ್ರವರಿ 9: 2ನೇ ODI, ಅಹಮದಾಬಾದ್
ಫೆಬ್ರವರಿ 11: 3ನೇ ODI, ಅಹಮದಾಬಾದ್

**ಟಿ20 ಸರಣಿ ವೇಳಾಪಟ್ಟಿ**


16 ಫೆಬ್ರವರಿ: 1ನೇ ಟಿ20, ಕೋಲ್ಕತ್ತಾ
ಫೆಬ್ರವರಿ 18: ಎರಡನೇ ಟಿ20, ಕೋಲ್ಕತ್ತಾ
ಫೆಬ್ರವರಿ 20: ಮೂರನೇ ಟಿ20, ಕೋಲ್ಕತ್ತಾ

**ಭಾರತ ಟಿ20 ತಂಡ:** ರೋಹಿತ್ ಶರ್ಮಾ (ನಾಯಕ), ಕೆಎಲ್ ರಾಹುಲ್ (ಉಪನಾಯಕ), ಇಶಾನ್ ಕಿಶನ್, ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಸೂರ್ಯ ಕುಮಾರ್ ಯಾದವ್, ರಿಷಬ್ ಪಂತ್ (ವಿಕೆಟ್ ಕೀಪರ್), ವೆಂಕಟೇಶ್ ಅಯ್ಯರ್, ದೀಪಕ್ ಚಹಾರ್, ಶಾರ್ದೂಲ್ ಠಾಕೂರ್, ರವಿ ಬಿಷ್ಣೋಯ್, ಅಕ್ಷರ್ ಪಟೇಲ್, ಯುಜುವೇಂದ್ರ ಚಹಾಲ್, ವಾಷಿಂಗ್ಟನ್ ಸುಂದರ್, ಮೊಹಮ್ಮದ್ ಸಿರಾಜ್, ಭುವನೇಶ್ವರ್ ಕುಮಾರ್, ಅವೇಶ್ ಖಾನ್, ಹರ್ಷಲ್ ಪಟೇಲ್

**ಭಾರತ ಏಕದಿನ ತಂಡ:** ರೋಹಿತ್ ಶರ್ಮಾ (ನಾಯಕ), ಕೆಎಲ್ ರಾಹುಲ್ (ಉಪನಾಯಕ), ರುತುರಾಜ್ ಗಾಯಕ್ವಾಡ್, ಶಿಖರ್ ಧವನ್, ವಿರಾಟ್ ಕೊಹ್ಲಿ, ಸೂರ್ಯ ಕುಮಾರ್ ಯಾದವ್, ಶ್ರೇಯಸ್ ಅಯ್ಯರ್, ದೀಪಕ್ ಹೂಡಾ, ರಿಷಭ್ ಪಂತ್ (ವಿಕೆಟ್ ಕೀಪರ್), ದೀಪಕ್ ಚಾಹರ್, ಶಾರ್ದೂಲ್ ಠಾಕೂರ್, ಯುಜುವೇಂದ್ರ ಚಾಹಲ್, ಕುಲ್ದೀಪ್ ಯಾದವ್ , ವಾಷಿಂಗ್ಟನ್ ಸುಂದರ್, ರವಿ ಬಿಷ್ಣೋಯ್, ಮೊಹಮ್ಮದ್ ಸಿರಾಜ್, ಪ್ರಸಿದ್ಧ್ ಕೃಷ್ಣ, ಅವೇಶ್ ಖಾನ್.

# ರಣಜಿ ಟೂರ್ನಿಯನ್ನು ಎರಡು ಹಂತಗಳಲ್ಲಿ ಆಯೋಜಿಸಲು ಚಿಂತನೆ

■ ಸಂಭ್ರಮ ಪ್ರಭ



**ನವದೆಹಲಿ:** ಈ ವರ್ಷದ ರಣಜಿ ಟ್ರೋಫಿ ಕ್ರಿಕೆಟ್ ಟೂರ್ನಿಯನ್ನು ಎರಡು ಹಂತಗಳಲ್ಲಿ ಆಯೋಜಿಸಲು ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ ಚಿಂತನೆ ನಡೆಸಿದೆ ಎಂದು ಖಜಾಂಚಿ ಅರುಣ ಧುಮಾಲ್ ತಿಳಿಸಿದ್ದಾರೆ. ಜನವರಿ 13ರಂದು ಟೂರ್ನಿಯು ಆರಂಭವಾಗಬೇಕಿತ್ತು. ಆದರೆ, ದೇಶದಲ್ಲಿ ಕೋವಿಡ್ ಪ್ರಸರಣ ಹೆಚ್ಚಿದ ಕಾರಣ ಟೂರ್ನಿಯನ್ನು ಮುಂದೂಡಲಾಯಿತು. ಮಾರ್ಚ್ 27ರಿಂದ ಐಪಿಎಲ್ ಆರಂಭಿಸಲು ಈಚೆಗಷ್ಟೇ ಮಂಡಳಿಯ ಸಭೆಯಲ್ಲಿ ಚರ್ಚಿಸಲಾಗಿತ್ತು. ಆದ್ದರಿಂದ ರಣಜಿ ಟೂರ್ನಿಯನ್ನು ಒಂದೇ ಹಂತದಲ್ಲಿ ಮುಗಿಸಲು ಸಾಧ್ಯವಾಗುವುದಿಲ್ಲ. 'ಕೋವಿಡ್ ಪ್ರಕರಣಗಳು ಇಳಿಮುಖವಾಗುತ್ತಿರುವ ಹಿನ್ನೆಲೆಯಲ್ಲಿ ರಣಜಿ ಟೂರ್ನಿಯನ್ನು ಮುಂದಿನ ತಿಂಗಳು ಆರಂಭಿಸುವತ್ತ ಚಿಂತನೆ ನಡೆದಿದೆ. ಮೊದಲ ಹಂತವನ್ನು ನಡೆಸಿ ಐಪಿಎಲ್ ಮುಗಿದ ನಂತರ ಎರಡನೇ ಹಂತ ಆಯೋಜಿಸುವ ಸಾಧ್ಯತೆ ಇದೆ' ಎಂದು ಧುಮಾಲ್ ಹೇಳಿದ್ದಾರೆ.

# ಐಪಿಎಲ್ 15ನೇ ಆವೃತ್ತಿ ಆಯೋಜನೆಗೆ ಸ್ಥಳ ನಿಗದಿ ಮಾಡಿದ ಬಿಸಿಸಿಐ

■ ಸಂಭ್ರಮ ಪ್ರಭ

**ಬೆಂಗಳೂರು;** ಕಳೆದೆರಡು ಆವೃತ್ತಿಗಳಂತೆಯೇ ಈ ಬಾರಿ ಮಿಲಿಯನ್ ಡಾಲರ್ ಟೂರ್ನಿ ಇಂಡಿಯನ್ ಪ್ರೀಮಿಯರ್ ಲೀಗ್‌ಗೆ ಕೊರೊನಾ ಕಂಟಕವಾಗಿ ಪರಿಣಮಿಸಿದೆ. ಆದರೆ, 15ನೇ ಆವೃತ್ತಿಯ ಐಪಿಎಲ್ ಅನ್ನು ಭಾರತದಲ್ಲೆ ನಡೆಸಬೇಕು ಎಂದು ಪಟ್ಟು ಹಿಡಿದಿರುವ ಬಿಸಿಸಿಐ ಹಲವು ಸವಾಲುಗಳ ಎದುರಿಸಲು ತಯಾರಾಗಿದೆ. ದೇಶದಲ್ಲಿ ಕೋವಿಡ್-19 ಪ್ರಕರಣಗಳು ಇಳಿಮುಖವಾದರೆ, 2022ರ ಐಪಿಎಲ್ (ಖಕಐ 2022) ಟೂರ್ನಿಯನ್ನು ಭಾರತದಲ್ಲಿಯೇ ಮುಚ್ಚಿದ ಅಂಗಣಗಳಲ್ಲಿ ಆಯೋಜಿಸಲಾಗುತ್ತದೆ ಎಂದು ಬಿಸಿಸಿಐನಲ್ಲಿ (ಃಅಅಖ) ನಡೆದಿರುವ ಬೆಳವಣಿಗೆಗಳನ್ನು ಉನ್ನತ ಮೂಲಗಳು ಸ್ಪಷ್ಟಪಡಿಸಿವೆ. ಅಲ್ಲದೆ ಎಲ್ಲ ಪಂದ್ಯಗಳು ಮುಂಬೈನಲ್ಲಿ ಮಾತ್ರ ನಡೆಯಲಿದೆ ಎಂದು ಹೇಳಲಾಗಿದೆ. ಮುಂಬೈನಲ್ಲಿರುವ ಮೂರು ಕ್ರೀಡಾಂಗಣದಲ್ಲಿ ಪಂದ್ಯ ನಡೆಸುವ ಬಗ್ಗೆ ಬಿಸಿಸಿಐ ತೀರ್ಮಾನಿಸಿದೆಯಂತೆ.

# ಕ್ಲೈಮ್ಯಾಕ್ಸ್‌ನಲ್ಲಿ ವಾಸ್ತವದ ವಾಸುದೇವನನ್ನು ಮರೆತ ಶ್ಯಾಮ್ ಸಿಂಗ್ ರಾಯ್




ಚಿತ್ರ : ಶ್ಯಾಮ್ ಸಿಂಗ್ ರಾಯ್
ನಿರ್ಮಾಪಕರು : ನಿಹಾರಿಕಾ ಎಂಟರ್ಟೈನ್ಮೆಂಟ್
ನಿರ್ದೇಶನ : ರಾಹುಲ್ ಸಂಕ್ರಿತ್ಯಾನ್
ನಟನೆ : ನಾನಿ, ಸಾಯಿ ಪಲ್ಲವಿ, ಕೃತಿ ಶೆಟ್ಟಿ

ನದಿಯ ಮಧ್ಯಭಾಗದಲ್ಲಿ ದೋಣಿಯೊಂದು ಬೆಂಕಿ ಹತ್ತಿ ಉರಿಯುತ್ತಿರುವ ದೃಶ್ಯ, ನಂತರ ಉರಿಯುತ್ತಿರುವ ದೋಣಿಯ ಮಧ್ಯದಲ್ಲಿ ಆಹುತಿ ಆಗುತ್ತಿರುವ ಕಾಗದ ಮತ್ತು ಎರಡು ಗೆಜ್ಜೆಗಳು ಕಾಣುತ್ತಿರಬೇಕಾದರೆ ಹಿನ್ನೆಲೆ ಧ್ವನಿಯೊಂದು ಮೂಡುತ್ತದೆ. ಇದನ್ನು ಗಮನಿಸಿ ಸಿನಿಮಾ ಏನೋ ಟ್ರ್ಯಾಜಿಕ್ ಲವ್ ಸ್ಟೋರಿ ರೀತಿ ಇರಬಹುದು ಎಂದು ಊಹಿಸಿದ್ದೆ. ಆದರೆ ಸಮಯ ಕಳೆದಂತೆ ಅರ್ಥವಾಯಿತು ನನ್ನ ಊಹೆ ತಪ್ಪು ಎಂದು.

ಸಾಫ್ಟ್‌ವೇರ್ ಕಂಪನಿಯ ಕೆಲಸ ಬಿಟ್ಟು ಸಿನಿಮಾ ನಿರ್ದೇಶಕನಾಗಬೇಕೆಂದು ಕನಸು ಕಟ್ಟಿಕೊಂಡಿರುವ ಯುವಕ, ಸಿನಿಮಾ ನಿರ್ಮಾಪಕರಿಗೆ ಆತ ಒಬ್ಬ ಒಳ್ಳೆಯ ನಿರ್ದೇಶಕನಾಗಬಹುದು ಎಂದು ಮನದಟ್ಟಿಸಲು ಒಂದು ಕಿರುಚಿತ್ರ ಸಿದ್ಧಪಡಿಸಿಸುತ್ತಾನೆ. ನಿರ್ಮಾಪಕರು ಈತನ ಕೆಲಸ ಮೆಚ್ಚಿ, ಸಿನಿಮಾ ಮಾಡಲು ರಾಜಿ ಆಗುತ್ತಾರೆ. ಸಿನಿಮಾ ರಿಲೀಸ್ ಆಗಿ ಪ್ರೇಕ್ಷಕರಿಂದ ಭಾರಿ ಪ್ರಮಾಣದಲ್ಲಿ ಮೆಚ್ಚುಗೆ ಪಡೆಯುತ್ತದೆ. ಆದರೆ ಒಂದು ಪ್ರೆಸ್ ಮಿಟ್ ನಲ್ಲಿ ಪೋಲಿಸರು ನಿರ್ದೇಶಕನನ್ನು ಬಂಧಿಸುತ್ತಾರೆ. ಇಲ್ಲಿಂದಲೇ ಶುರುವಾಗುವುದು ಶ್ಯಾಮ್ ಸಿಂಗ್ ರಾಯ್ ಕಥೆ.

ಈ ಸಿನಿಮಾ ಸ್ವಾತಂತ್ರ್ಯ ನಂತರದ ಕಾಲದಲ್ಲಿ ಕೂಡಾ ಚಾಲ್ತಿಯಲ್ಲಿರುವ ಭಾರತದ ಹಲವಾರು ಸಾಮಾಜಿಕ ಪಿಡುಗುಗಳ ಮೇಲೆ ಬೆಳಕು ಚೆಲ್ಲುತ್ತದೆ. ದೇವದಾಸಿ ಪದ್ಧತಿ ಮತ್ತು ದೇವರ ಹೆಸರಿನಲ್ಲಿ ಮಹಿಳೆಯರು ಅನುಭವಿಸಿದ ನರಕಯಾತನೆಗಳು, ಅಸ್ಪೃಶ್ಯತೆಯ ಮನೋಭಾವ ಇರುವ ಸಮಾಜದ ವಿರುದ್ಧದ ಸಾಹಿತ್ಯಿಕ ಹೋರಾಟವೇ ಈ ಕಥಾ ನಾಯಕನ ಮುಖ್ಯ ಪಾತ್ರವಾಗಿದೆ.

ಇಲ್ಲಿ ಗಮನಿಸಬೇಕಾದ ಅಂಶವೊಂದಿದೆ. ಸಮಾಜದಲ್ಲಿ ಸಮಾನತೆ ಮತ್ತು ಸಾಮಾಜಿಕ ಅನ್ಯಾಯದ ವಿರುದ್ಧ ಹೋರಾಡಲು ಶಸ್ತ್ರಗಳನ್ನು ಉಪಯೋಗಿಸಿ ನಕ್ಸಲ್ ಎಂದೇ ಗುರುತಿಸಿಕೊಂಡಿರುವ ಹಲವಾರು ಜನರ ಮೇಲೆ ಸಿನಿಮಾಗಳನ್ನು ಮಾಡಲಾಗಿದೆ. ಆದರೆ ಶ್ಯಾಮ್ ಸಿಂಗ ರಾಯ್ ಸಿನಿಮಾದಲ್ಲಿ ಇದನ್ನು ಬಹಳ ಸರಳ ಸೃಜನಶೀಲತೆಯಿಂದ ಶಸ್ತ್ರಾಸ್ತ್ರ ಬಿಟ್ಟು ಶಾಸ್ತ್ರದಿಂದ ಸಮಾಜದಲ್ಲಿ ಬದಲಾವಣೆ ಮಾಡಬಹುದು ಎಂದು ತೋರಿಸಿದ್ದಾರೆ. ಮುಖ್ಯ ಕಥೆಯ ಸುತ್ತ ಚಿಕ್ಕ ಚಿಕ್ಕ ಕಥೆಗಳನ್ನಿಟ್ಟುಕೊಂಡು ನಿರ್ದೇಶಕ ರಾಹುಲ್ ಸಂಕ್ರಿತ್ಯಾನ್ ಅವರ ಚಲನಚಿತ್ರ ಮನರಂಜನೆ ಮತ್ತು ಸಾಮಾಜಿಕ ಸಂದೇಶ ಎರಡು ಕೆಲಸಗಳನ್ನು ತಕ್ಕ ಮಟ್ಟಿಗೆ ಮಾಡಿದೆ. ವಿಷಯ ಮತ್ತು ಮೌಲ್ಯಾಧಾರಿತ ಸಿನಿಮಾ ಹೆಸರಿನಲ್ಲಿ ಪ್ರೇಕ್ಷಕರಿಗೆ ನಿದ್ದೆ ತರಿಸುವ ಸಿನಿಮಾಗಳ ಕಾಲದಲ್ಲಿ ಶ್ಯಾಮ್ ಸಿಂಗ ರಾಯ್ ಒಂದು ಉತ್ತಮ ಸಿನಿಮಾ.

ಪುನರ್ಜನ್ಮ ಕಲ್ಪನೆ ಆಧಾರದ ಈ ತೆಲಗು ಸಿನಿಮಾ, 1995 ರ ರಾಕೇಶ್ ರೋಶನ್ ನಿರ್ದೇಶನದ ಸಲಮಾನ್ ಮತ್ತು ಶಾರುಖ್ ಖಾನ್ ಅಭಿನಯಿಸಿದ ಕರಣ – ಅರ್ಜುನ ಅಂತಹ ಸಿನಿಮಾಗಳನ್ನು ಮೀರಿ ನಿಂತದೆ. ಆದರೆ ಇದೇ ರೀತಿಯಲ್ಲಿ ತೆಲುಗು ಭಾಷೆಯ ಎಸ್.ಎಸ್. ರಾಜಾಮೌಳಿಯವರ ಮಗಧೀರವನ್ನು ಮೀರಲು ಶಾಮ್ ಸಿಂಗ ರಾಯ್ ವಿಫಲವಾಗಿದೆ. ಎರಡು ಕಥೆಗಳನ್ನು ಒಳಗೊಂಡಿರುವ ಈ ಸಿನಿಮಾ, ನಿರ್ದೇಶಕನಾಗುವ ಕನಸು ಕಂಡ ವಾಸುದೇವನ ಮೇಲೆ 70ರ ದಶಕದ ಬಂಗಾಳಿ ಸಮಾಜ ಸುಧಾರಕ ಮತ್ತು ಲೇಖಕ ಶ್ಯಾಮ್ ಸಿಂಗ ರಾಯ್ ನ ಕಥೆಗಳನ್ನು ಕದ್ದಿರುವ ಆರೋಪ ಹೊರಿಸಿ ಅವನನ್ನು ಮೊಕದ್ದಮೆಗೆ ಒಳಪಡಿಸಲಾಗುತ್ತದೆ. ಚಿತ್ರದ ಬಹುಭಾಗ ಪೂರ್ವ ಜನ್ಮದ ಕಥೆಯನ್ನು ಹೇಳಿದರೆ, ವಾಸ್ತವ ಜಗತ್ತಿನ ವಾಸುದೇವನ ಪಾತ್ರ ಮಾತ್ರ ಕಿರಿದಾಗಿ ಕಾಣಿಸುತ್ತಿದೆ. ಇಲ್ಲಿ ಗಮನಿಸಬೇಕಾದ ಅಂಶವೆಂದರೆ ಮಗಧೀರ ಸಿನಿಮಾದಲ್ಲಿ ಪೂರ್ವ ಜನ್ಮದ ಜೊತೆಗೆ ವಾಸ್ತವವನ್ನು ಕಡೆಗೆಣಿಸದೆ ಕ್ಲೈಮ್ಯಾಕ್ಸ್ ನೀಡಲಾಗಿತ್ತು. ಶ್ಯಾಮ್ ಸಿಂಗ ರಾಯ್ ಕ್ಲೈಮ್ಯಾಕ್ಸ್ ನಲ್ಲಿ ಮುಖ್ಯ ವಾಸ್ತವಿಕ ಪಾತ್ರಗಳನ್ನು ಮರೆತು ಬಿಟ್ಟಿದೆ.

ನಾಯಕ ನಾನಿ, ನಾಯಕಿ ಸಾಯಿ ಪಲ್ಲವಿ ಮತ್ತು ಕಿರ್ಥಿ ಶೆಟ್ಟಿ ಈ ಸಿನಿಮಾದ ಪ್ರಮುಖ ಕಲಾವಿದರು. ನಾನಿ ಯವರ ನಟನೆ, ಪಾತ್ರವನ್ನು ಚೆನ್ನಾಗಿ ನಿರ್ವಹಿಸಿದೆ. ಸಾಯಿ ಪಲ್ಲವಿಯವರ ಕ್ಲಾಸಿಕಲ್ ನೃತ್ಯ ಹಾಗೂ ಅವರ ವಾಸ್ತವಿಕ ನಟನೆ ಪ್ರೇಕ್ಷಕರ ಗಮನ ಸೆಳೆಯುವಂತಹದು.

ಸಿನಿಮಾದ ಗರಿಷ್ಠ ಭಾಗ 1970ರ ದಶಕದ ಕಲ್ಕತ್ತಾ ಮತ್ತು ಪಶ್ಚಿಮ ಬಂಗಾಳವನ್ನು ಒಳಗೊಂಡಿರುವ ಕಾರಣ ಸಾನು ವರ್ಗೀಸ್ ಸಿನಿಮಾಟೋಗ್ರಫಿಯನ್ನು ಕಥೆಗೆ ಸಮಾನವಾಗಿ ಉತ್ತಮವಾಗಿ ಮೂಡಿದೆ.ಇದು ಪೂರ್ವಜನ್ಮದ ಕಲ್ಪನೆಯ ಕಥೆಯಾಗಿದ್ದರೂ ನವೀನ್ ನೂಲಿ ಅವರು ಇದನ್ನು ವೀಕ್ಷಕರು ಸಿನಿಮಾ ನೋಡವಾಗ ಯಾವುದೇ ಲ್ಯಾಗ್ ಬರದಂತೆ ಎಡಿಟಿಂಗ್ ಮಾಡಿದ್ದಾರೆ. ಜಂಗಾ ಸತ್ಯದೇವ್ ಅವರ ಸ್ಕ್ರಿಪ್ಟ್ ಮತ್ತು ಮೈಕಿ ಮೆಯೆರ್ ಸಂಗೀತ ನೀಡಿರುವ ಈ ಸಿನಿಮಾವನ್ನು ನಿಹಾರಿಕಾ ಎಂಟರ್ಟೈನ್ಮೆಂಟ್ ಪ್ರೊಡಕ್ಷನ್ ಕಂಪನಿ ನಿರ್ಮಿಸಿದೆ. ಚಿತ್ರಮಂದಿರಗಳಲ್ಲಿ ಮೊದಲು ಬಿಡುಗಡೆಯಾದ ಶ್ಯಾಮ್ ಸಿಂಗ್ ರಾಯ್ ಈಗ ಒಟಿಟಿ ಪ್ಲಾಟಫಾರ್ಮ ನೆಟಫ್ಲಿಕ್ಸ್ ನಲ್ಲಿ ಉಪಲಬ್ಧವಿದೆ.

– ಓಂಕಾರ ರಾಜಾರಾಮ ಕುಡಚೆ ಎಸ್.ಡಿ.ಎಮ್. ಕಾಲೇಜು ಉಜಿರೆ

Printed by Suresh K.T., Published by Suresh K.T., Owned by Suresh K.T., Printed at MNS Printers Pvt Ltd, 345/4 Bhattarahalli, old Madras Road, Bengaluru, Karnataka, Published at: No.215/1, 4th Main, 14th Cross, Kaveripura, Govindrajanagara, Bengaluru, Editor Suresh K.T.